ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-ಸಂಪುಟ:12 | ISSUE- ಸಂಚಿಕೆ: 351 | PAGE- ಪುಟ 8 | ಗುರುವಾರ 23.01.2025 ಬೀದರ | RS.ಬೆಲೆ 2/-

# ಸಮಗ್ರ ದತ್ತಾಂಶ ಸಂಗ್ರಹದೊಂದಿಗೆ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪೂರಕ ಕ್ರಮಗಳಾಗಲಿ: ಸಚಿವ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜ.22:ಸಮಗ್ರ ದತ್ತಾಂಶ ಸಂಗ್ರಹದೊಂದಿಗೆ ಕಲ್ಯಾಣಕರ್ನಾಟಕದಪ್ರಾದೇಶಿಕ ಅಸಮತೋಲನನಿವಾರಣೆಗೆ ಪೂರಕವಾಗುವಂತಹ ಕಾರ್ಯಕ್ರಮಗಳನ್ನುರೂಪಿಸುವ ಅವಶ್ಯಕತೆಯಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಾದೇಶಿಕ ಅಸಮತೋಲನನಿವಾರಣೆಗಾಗಿ ಪ್ರೊ.ಗೋವಿಂದರಾವ್ ಅವರ ಅಧ್ಯಕ್ಷತೆಯಲ್ಲಿಸರ್ಕಾರರಚಿಸಿರುವ ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗಕ್ಕೆಸಲಹೆ ನೀಡಿದರು.

ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷ ಪ್ರೊ.ಗೋವಿಂದರಾವ್ ಹಾಗೂ ಆಯೋಗದ ಸದಸ್ಯರು ಇಂದು ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಬೆಂಗಳೂರಿನಲ್ಲಿ ಸಚಿವರ ಕಚೇರಿಯಲ್ಲಿ ಇಂದು ನಡೆದ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಾದೇಶಿಕ ಅಸಮತೋಲನನಿವಾರಣೆಗಾಗಿ ವಿವಿಧ ಇಲಾಖೆಗಳ ಸೂಕ್ಷ್ಮ

(2ನೇ ಪುಟ ನೋಡಿ)

## ಬೇಸಿಗೆಯಲ್ಲೂ ಲೋಡ್ ಶೆಡ್ಡಿಂಗ್ ಇಲ್ಲ:ಸಚಿವ ಕೆ.ಜೆ.ಜಾರ್ಜ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,21–ಮುಂಬರುವ ಬೇಸಿಗೆಯಲ್ಲೂ ವಿದ್ಯುತ್ ಸರಬರಾಜಿನಲ್ಲಿ ಯಥಾಸ್ಥಿತಿ ಇರಲಿದ್ದು,ಯಾವುದೇಕಾರಣಕ್ಕೂ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ ಹೇಳಿದರು.

ಬುಧವಾರನಗರಕ್ಕೆಆಗಮಿಸಿದ ಸಂದರ್ಭದಲ್ಲಿ ಹೆಲಿಪ್ಯಾಡ್ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಷಯತಿಳಿಸಿದಸಚಿವರು,ಕಳೆದ ವರ್ಷ ರಾಜ್ಯದಲ್ಲಿ ಬರಗಾಲ ಪರಿಸ್ಥಿತಿಯಿದ್ದಾಗಲೂ ಲೋಡ್ ಶೆಡ್ಡಿಂಗ್ ಮಾಡಿರಲಿಲ್ಲ. ಈ ವರ್ಷ ಅದರ ಪ್ರಶ್ನೆಯೇ ಬರುವುದಿಲ್ಲ ಎಂದರು.

ಒಂದು ವೇಳೆ ವಿದ್ಯುತ್ ಕೊರತೆ ಉಂಟಾದಲ್ಲಿ ಬೇರೆಡೆಯಿಂದ ಖರೀದಿ ಮಾಡಲಾಗುವುದು.

(2ನೇ ಪುಟ ನೋಡಿ)

## ಬಾಣಂತಿಯರ ಸಾವು ಪ್ರಕರಣ ಶೂನ್ಯಕ್ಕಿಳಿಸಲು ಕ್ರಮ: ಸಚಿವ ದಿನೇಶ್ ಗುಂಡೂರಾವ್ ಅಭಯ



ಮಲ್ಲಮ್ಮ ನುಡಿ ವಾರ್ತೆ ರಾಯಚೂರುಜ.22:ಬಾಣಂತಿಯರ ಸಾವು ಪ್ರಕರಣಗಳನ್ನು ರಾಜ್ಯ ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ಇನ್ಮುಂದೆ ನಿಯಮಿತವಾಗಿ

ಆರೋಗ್ಯ ತಪಾಸಣೆ, ಸಕಾಲಕ್ಕೆ ಚಿಕಿತ್ಸೆ ಮತ್ತು ಜಾಗೃತಿ ಅಭಿಯಾನ ಹಮ್ಮಿಕೊಳ್ಳುವ ಮೂಲಕ ತಾಯಂದಿರ ಮರಣ ಪ್ರಕರಣಗಳು ವರದಿಯಾಗದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ಹೇಳಿದರು.

ನಗರದ ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ವೈದ್ಯಕೀಯ ಮಹಾವಿದ್ಯಾಲಯ ಹಾಗೂ ನವೋದಯ ವೈದ್ಯಕೀಯ ಕಾಲೇಜು, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜನವರಿ 22ರಂದು ನಡೆದ ಮಾತೃತ್ವಸುರಕ್ಷಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದ ವಿವಿಧೆಡೆ ಬಾಣಂತಿಯರ ಸಾವು ಪ್ರಕರಣಗಳು

(2ನೇ ಪುಟ ನೋಡಿ)

## ತೋಟದ ಮನೆಗಳಿಗೂ ನಿರಂತರ ಜ್ಯೋತಿ : ಜಾರ್ಜ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ.22:ತೋಟದಲ್ಲಿರುವ ಮನೆಗಳಿಗೂ ಸಹ ನಿರಂತರ ಜ್ಯೋತಿ ಸಂಪರ್ಕ ಕಲ್ಪಿಸಲು ಸರಕಾರದ ಮಟ್ಟದಲ್ಲಿ ಚರ್ಚಿಸಲಾಗುವುದೆಂದು ಇಂಧನ ಸಚಿವ ಕೆ.ಜೆ.ಜಾರ್ಜ ಹೇಳಿದ್ದಾರೆ.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಬುಧವಾರ ಜರುಗಿದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಈ ಭಾಗದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಗೊಂಡ ಸಂತ್ರಸ್ತರು ತಮ್ಮ ತಮ್ಮ ತೋಟಗಳಲ್ಲಿ ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿದ್ದಾರೆ. ಆ ಮನೆಗಳಿಗೂ ಸಹ ನಿರಂತರ ಜ್ಯೋತಿ ಮೂಲಕ ವಿದ್ಯುತ್ ಸಂಪರ್ಕ ಅಗತ್ಯವಿದ್ದು, ಈ ಬಗ್ಗೆ ಸರಕಾರದ ಮಟ್ಟದಲ್ಲಿ ಚರ್ಚಿಸಿ ಕ್ರಮವಹಿಸಲಾಗುವುದೆಂದು ತಿಳಿಸಿದರು.

ತೋಟದ ಮನೆಗಳಿಗೆ ನಿರಂತರ ವಿದ್ಯುತ್ ಒದಗಿಸಲು ಯಾವುದೇ ಯೋಜನೆಗಳು ಇರುವದಿಲ್ಲ. ಪ್ರಸ್ತುತ ತೋಟದ ಮನೆಗಳಿಗೆ 7 ಗಂಟೆ ತ್ರೀ ಪೇಸ್ ವಿದ್ಯುತ್ ಸರಬರಾಜು

(2ನೇ ಪುಟ ನೋಡಿ)

## ಬ್ರಿಮ್ಸ್ ವೈದ್ಯರ ಎಡವಟ್ಟಿಂದ ಹೆರಿಗೆ ವೇಳೆ ನವಜಾತ ಶಿಶುಗಳ ಮೂಳೆ ಮುರಿತ: ಸಂಕಷ್ಟದಲ್ಲಿ ಪೋಷಕರು




ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 22 : ಬೀದರ್ ನ ಬ್ರಿಮ್ಸ್ ಆಸ್ಪತ್ರೆಯ ವೈದ್ಯರ ಎಡವಟ್ಟಿನಿಂದಹೆರಿಗೆವೇಳೆಯಲ್ಲಿ ಎರಡು ಹಸುಗೂಸುಗಳ ಕಾಲಿನ ಮೂಳೆ ಮುರಿದಿರುವ ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಬೀದರ್ ತಾಲೂಕಿನ ಚಿಲ್ಲರ್ಗಿ ಗ್ರಾಮದ ಶ್ರೀದೇವಿ ಎಂಬುವರು 2024 ರ ಡಿಸೆಂಬರ್ 28 ರಂದು ಹೆರಿಗೆಗೆ ದಾಖಲಾಗಿದ್ದರು.

ಸಹಜ ಹೆರಿಗೆ ಆಗುತ್ತದೆಂದು ವೈದ್ಯರು ಹೇಳಿದ್ದರು. ಆದರೆ, ನಂತರ ಸಹಜ ಹೆರಿಗೆ ಕಷ್ಟ ಎಂದು ಸಿಸೇರಿಯನ್ ಹೆರಿಗೆ ಮಾಡಿಸಿದ್ದಾರೆ. ಹೆರಿಗೆ ಆದ ನಂತರ ಎರಡು ಗಂಟೆ ಕಳೆದರೂ ಮಗು ಕಾಲು ಅಲ್ಲಾಡಿಸಲಾಗಿದೆ ಅಳುವುದಕ್ಕೆ ಪ್ರಾರಂಭಿಸಿದೆ. ಹಸುಗೂಸಿನ ಕುಟುಂಬದ ಸದಸ್ಯರು ಮಗು ಅಳುವುದನ್ನು ನೋಡಿ ವೈದ್ಯರಿಗೆ

(2ನೇ ಪುಟ ನೋಡಿ)

## ಎಸ್ ಬಿ ಐ ಎಟಿಎಂ ರಾಬರಿ: ನನಗೆ ಪುನರ್ಜನ್ಮ ಸಿಕ್ಕಿದೆ: ಗಾಯಾಳು ಶಿವಕುಮಾರ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 22 : 'ನನಗೆ ಪುನರ್ಜನ್ಮ ಸಿಕ್ಕಿದೆ' –ನಗರದ ಎಸ್‌ಬಿಐ ಕಚೇರಿ ಎದುರು ಜ. 16ರಂದು ದರೋಡೆಕೋರರ ಗುಂಡೇಟಿಗೆ ಗಾಯಗೊಂಡು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಶಿವಕುಮಾರ ಅವರ ಪ್ರತಿಕ್ರಿಯೆ ಇದು. 'ಟ್ರಂಕ್ ತಗೊಂಡ್ ಬಂದಿದ್ದೆವು.

ಬಂದು ಡೈರೆಕ್ಟ್ ಅಟ್ಯಾಕ್ ಮಾಡಿದ್ದಾರೆ. ನಮ್ಮ ಬಳಿ ಗನ್‌ಮ್ಯಾನ್, ಡ್ರೈವರ್ ಇರಲಿಲ್ಲ. ನನ್ನ ಜೊತೆಗಿದ್ದ ಗಿರಿ ವೆಂಕಟೇಶ ಅವರ ಕಣ್ಣಿಗೆ ಕಾರ ಎರಚಿ, ದಾಳಿ ನಡೆಸಿದ್ದಾರೆ. ನನ್ನ ಮೇಲೆ ಕೂಡ ಎರಡ್ಮೂರು ಸಲ ಗುಂಡು ಹಾರಿಸಲು ಪ್ರಯತ್ನಿಸಿದ್ದಾರೆ. ಅಷ್ಟೂ ಸಲ ನಾನು ತಪ್ಪಿಸಿಕೊಂಡೆ. ಗನ್‌ಮ್ಯಾನ್ ಎಂದು ಚೀರಾಡುತ್ತಿದ್ದಾಗ ಒಂದು ಗುಂಡು ಎದೆಗೆ ಹಾರಿಸಿದ್ದಾರೆ. ಅವರು ಸತತವಾಗಿ ಗುಂಡು ಹಾರಿಸುತ್ತಿದ್ದರು' ಎಂದು ಘಟನೆಯ ಕುರಿತು ವಿವರಿಸಿದ ವಿಡಿಯೋ ಸಂದೇಶವನ್ನು ಶಿವಕುಮಾರ ಅವರ ಭಾಮೈದ ಶಿವಯೋಗಿ ಅವರು ಮಾಧ್ಯಮಗಳಿಗೆ

(2ನೇ ಪುಟ ನೋಡಿ)

## ಕರ್ನಾಟಕ ಎಕ್ಸ್ ಪ್ರೆಸ್ ರೈಲು ಹಾಯ್ದು 11 ಸಾವು



ಮಲ್ಲಮ್ಮ ನುಡಿ ವಾರ್ತೆ ಮುಂಬೈ,ಜ.22: ಕರ್ನಾಟಕ ಎಕ್ಸ್‌ಪ್ರೆಸ್ ರೈಲು ಹಾಯ್ದು ಕನಿಷ್ಠ 11 ಜನರು ಸಾವನ್ನಪ್ಪಿರುವ ಘಟನೆ ಮಹಾರಾಷ್ಟ್ರದ ಜಲಗಾಂವ್‌ನಲ್ಲಿ ಇಂದು ಸಂಭವಿಸಿದೆ. ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ.

ಘಟನೆಯ ಮಾಹಿತಿ ಪಡೆದ ರೈಲ್ವೇ ಅಧಿಕಾರಿಗಳು ಮತ್ತು ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದು ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

(2ನೇ ಪುಟ ನೋಡಿ)

## ರಾತ್ರೋರಾತ್ರಿ ಕೆರೆಯ ಮಣ್ಣನ್ನು ಸಾಗಿಸಿದ ಗುತ್ತಿಗೆದಾರ, ಶಿಸ್ತು ಕ್ರಮಕ್ಕೆ ಗ್ರಾಮಸ್ಥರ ಆಗ್ರಹ



ವಿಶೇಷ ವರದಿ : ವೀರಯ್ಯ ವಿ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:ಜ.22: ಕುಕನೂರ ತಾಲೂಕಿನ ಮಂಡಲಗಿರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಹಿಂಬದಿಯಲ್ಲಿರುವ ಕೆಂಪು ಕೆರೆಯಲ್ಲಿ ಇರುವ ಗ್ರಾವೆಲ್ ಗರಸು ಮಣ್ಣು ) ನ್ನು ರಾತ್ರೋರಾತ್ರಿ ಸರಿಸುಮಾರು 200ಕ್ಕೂ ಹೆಚ್ಚು ಟ್ರ್ಯಾಕ್ಟರ್ ಗಾಡಿಗಳಷ್ಟು ಸಾಗಣೆ ಮಾಡಿರುವುದು ಬೆಳಗಾದಾಗ ಗಾಡಿಗಳಷ್ಟು

(2ನೇ ಪುಟ ನೋಡಿ)

ಗ್ರಾಮದಲ್ಲಿ ಸುರಕ್ಷತಾ ಕ್ರಮದಿಂದ ಯಾವುದೇ ಅಭಿವೃದ್ಧಿ ಕೆಲಸ ಮಾಡಿದರೂ ಸಹ ಕೆರೆಯ ಮಣ್ಣನ್ನು ನೀಡಿರುವುದಿಲ್ಲ ಆದರೆ ತಮ್ಮ ವ್ಯವಹಾರಿಕ ದೃಷ್ಟಿಯ ಕೆಲಸಕ್ಕಾಗಿ ಗ್ರಾಮದ ಕೆರೆಯ ಮಣ್ಣನ್ನು ಬಳಕೆ ಮಾಡಿ ಕೊಂಡಿರುವುದು ಅದು ಸಹ ರಾತ್ರೋರಾತ್ರಿ ಸಾಗಣೆ ಮಾಡಿರುವುದು ಗ್ರಾಮಸ್ಥರಲ್ಲಿ ಆಶ್ಚರ್ಯವನ್ನುಂಟು ಮಾಡಿದ್ದು ಲೋಪದೋಷ ಎಸಗಿದವರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಗ್ರಾಮಸ್ಥರ ಕಡೆಯಿಂದ ಒತ್ತಾಯ ಒತ್ತಾಯಪಡಿಸುತ್ತೇವೆ

ವೆಂಕಟೇಶ ಈಳಿಗೇರ
ಮಂಡಲಗಿರಿ ಗ್ರಾಮದ ಗ್ರಾಮಸ್ಥ

ಘಟನಾ ಸ್ಥಳಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ಮಾಡಿದಾಗ ಕೆರೆಯಿಂದ ಮಣ್ಣು ಸಾಗಿಸಿರುವುದು ಸಾಬೀತಾಗಿದ್ದು ಕೆರೆಯ ಮಣ್ಣೆಲ್ಲ ಅಭಿವೃದ್ಧಿಪಡಿಸುತ್ತಿರುವ ಲೇಔಟ್ ನಲ್ಲಿ ಶೇಖರಣೆ ಮಾಡಲಾಗಿರುತ್ತದೆ ಜೊತೆಗೆ ಲೇಔಟ್ ಅಭಿವೃದ್ಧಿಪಡಿಸುತ್ತಿರುವ ಗುತ್ತಿಗೆದಾರ ಅಶೋಕ ಕುಂಬಾರ ತಾನೇ ಮಾಡಿರುವುದಾಗಿ ಒಪ್ಪಿಕೊಂಡಿದ್ದು ಮುಂದಿನ ಸೂಕ್ತ ಕ್ರಮಕ್ಕಾಗಿ ಮೇಲಾಧಿಕಾರಿಗಳಿಗೆ ತಕ್ಷಣವೇ ವರದಿ ಸಲ್ಲಿಸುತ್ತೇನೆ.

ಮಹೇಶ್ ಗೌಡ
ಗ್ರಾಮ ಲೆಕ್ಕಾಧಿಕಾರಿ ಕಂದಾಯ ಇಲಾಖೆ

## ಒಂದನೇ ಪುಟದಿಂದ

## ಪೂರಕ ಕ್ರಮಗಳಾಗಲಿ: ಸಚಿವ ಪ್ರಿಯಾಂಕ್ ಖರ್ಗೆ

ಕಾರ್ಯಕ್ರಮಗಳ ಸಮಗ್ರದತ್ತಾಂಶಗಳನ್ನು ಸಂಗ್ರಹಿಸುವದರೊಂದಿಗೆ ಅಧ್ಯಯನ ಮಾಡುವುದು ಸೇರಿದಂತೆ ಹಲವಾರು ವಿಷಯಗಳು ಚರ್ಚೆಯಾದವು

ಕಲ್ಯಾಣ ಕರ್ನಾಟಕ ಭಾಗದಲ್ಲಿ 371 ( ಜೆ) ಜಾರಿಗೊಂಡ ಒಂದು ದಶಕದ ಅವಧಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳಾಗಿವೆ, ಎಂಜನಿಯರಿಂಗ್, ಮೆಡಿಕಲ್ ಕಾಲೇಜುಗಳಲ್ಲಿ ಕಲ್ಯಾಣ ಕರ್ನಾಟಕದ ಬಹುತೇಕ ವಿದ್ಯಾರ್ಥಿಗಳು ಪ್ರವೇಶಾವಕಾಶ ಪಡೆದಿದ್ದಾರೆ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಈ ಭಾಗದ ಜನರು ತೇರ್ಗಡೆಯಾಗಿ ಉದ್ಯೋಗಾವಕಾಶ ಹೊಂದಿದ್ದಾರೆ. ಆದರೂ ಕೂಡಾ ಬೇರೆ ಬೇರೆ ಕ್ಷೇತ್ರಗಳಲ್ಲಿನ ಅಸಮತೋಲನವನ್ನು ಸರಿಹೊಂದಿಸುವ ಅನಿವಾರ್ಯತೆ ಇದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆಯೋಗಕ್ಕೆ ತಿಳಿಸಿದರು.

ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದರಿಂದ ಹಲವಾರು ಪೂರಕ ವ್ಯಾಪಾರಗಳ ಮೂಲಕ ಬದುಕು ಕಟ್ಟಿಕೊಳ್ಳುವ ಅವಕಾಶಗಳು ಲಭಿಸುವವು, ಕೃಷಿ, ತೋಟಗಾರಿಕೆ, ರೇಷ್ಮೆಯಂತಹ ಕ್ಷೇತ್ರಗಳಲ್ಲಿ ಪೂರಕ ಉದ್ಯಮಗಳಲ್ಲಿ ತೊಡಗಿಕೊಳ್ಳುವ ಮೂಲಕವೂ ಜೀವನ ಮಟ್ಟದ ಸುಧಾರಣೆ ಸಾಧ್ಯವಾಗುತ್ತದೆ, ಈ ನಿಟ್ಟಿನಲ್ಲಿ ಆಯೋಗ ಕಾರ್ಯಕ್ರಮಗಳನ್ನು ಹಾಕಿಕೊಳ್ಳಬೇಕು ಎಂದು ಸಚಿವರು ಆಯೋಗದ ಸಭೆಯಲ್ಲಿ ಅಭಿಪ್ರಾಯಪಟ್ಟರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರವೇಜ್ ಸೇರಿದಂತೆ ಇತರ ಅಧಿಕಾರಿಗಳು ಹಾಜರಿದ್ದರು

## ಸಚಿವ ದಿನೇಶ್ ಗುಂಡೂರಾವ್ ಅಭಯ

ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.ಗರ್ಭಿಣಿಯರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಉತ್ತಮವಾಗಿರುವಂತೆ ಎಲ್ಲಾ ಕಡೆಗೆ ಕಡ್ಡಾಯವಾಗಿ ಅವರಿಗೆ ಗುಣಮಟ್ಟದ ಚಿಕಿತ್ಸೆ ದೊರೆತು, ತಾಯಂದಿರರ ಅನಾರೋಗ್ಯ ಪ್ರಕರಣಗಳು ಸಂಪೂರ್ಣ ನಿಯಂತ್ರಣಕ್ಕೆ ಬಂದು ಶೂನ್ಯಕ್ಕೆ ತರುವ ರೀತಿಯಲ್ಲಿ ಜಾಗೃತಿ ಅಭಿಯಾನವನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗುವುದು. ಕಲ್ಯಾಣ ಕರ್ನಾಟಕ ಭಾಗದ ರಾಯಚೂರ ಸೇರಿದಂತೆ ಎಲ್ಲಾ ಕಡೆಗೆ ಆದ್ಯತೆಯ ಮೇರೆಗೆ ಈ ಅಭಿಯಾನ ಜರುಗಿಸಲಾಗುವುದು ಎಂದು ಸಚಿವರು ತಿಳಿಸಿದರು.

ಜಿಲ್ಲಾ ಕೇಂದ್ರದಲ್ಲಿ ವೈದ್ಯಕೀಯ ಸೌಕರ್ಯ ಸಿಗುವ ರೀತಿಯಲ್ಲಿ ರಾಜ್ಯದ ಎಲ್ಲಾ ತಾಲೂಕುಗಳ ಆಸ್ಪತ್ರೆಗಳು ಸಹ ದಿನದ 24 ಗಂಟೆ ಕಾರ್ಯ ನಿರ್ವಹಿಸಿ ಜನತೆಗೆ ಉತ್ತಮ ಸೇವೆ ನೀಡಬೇಕು. ಗ್ರಾಮೀಣ ಭಾಗದ ಜನತೆಗೆ ಸಹ ಉತ್ತಮ ವೈದ್ಯಕೀಯ ಸೌಕರ್ಯ ಸಿಗುವ ನಿಟ್ಟಿನಲ್ಲಿ ಪ್ರಾಥಮಿಕ ಹಾಗೂ ಸಮುದಾಯ ಮತ್ತು ತಾಲೂಕು ಆಸ್ಪತ್ರೆಗಳನ್ನು ಮತ್ತಷ್ಟು ಬಲಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಬಳಿ ಚರ್ಚಿಸಲಾಗುವುದು ಎಂದು ಸಚಿವರು ತಿಳಿಸಿದರು.

ಆರೋಗ್ಯ ಕ್ಷೇತ್ರದಲ್ಲಿ ಸುಧಾರಣೆ ಮಾಡುವ ಪ್ರಯತ್ನದ ಭಾಗವಾಗಿ ಮುಂಬರುವ ದಿನಗಳಲ್ಲಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು.

ಆರೋಗ್ಯ ಇಲಾಖೆಯ ಕಾರ್ಯಗಳಿಗೆ ಕೈಜೋಡಿಸಿ ಕಾರ್ಯಪ್ರವೃತ್ತರಾದ ಆಶಾ ಕಾರ್ಯಕರ್ತೆಯರಿಗೆ ಏಪ್ರಿಲ್ ತಿಂಗಳಿನಿಂದ ಕನಿಷ್ಠ 10 ಸಾವಿರ ರೂ.ವೇತನ ನಿಗದಿ ಮಾಡಲಾಗುತ್ತದೆ ಎಂದರು.

ಕಲ್ಯಾಣ ಕರ್ನಾಟಕದ ಭಾಗದಲ್ಲಿನ ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚಿನ ಸುಧಾರಣೆ ತರಲಾಗುತ್ತದೆ. ಇದರನ್ವಯ ರಾಯಚೂರು ಜಿಲ್ಲೆಗೆ ಎಂಟು ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಮಾನ್ವಿ ತಾಲೂಕಿನಲ್ಲಿ ನಗರ ಆರೋಗ್ಯ ಕೇಂದ್ರ, ರಾಯಚೂರು ನಗರಕ್ಕೆ ಸಮುದಾಯ ಆರೋಗ್ಯ ಕೇಂದ್ರ ಅಲ್ಲದೇ ಜಿಲ್ಲೆಯ ಯಾವುದಾದರು ತಾಲೂಕಿನಲ್ಲಿ ಉಪವಿಭಾಗದ ಜಿಲ್ಲಾ ಆಸ್ಪತ್ರೆಯನ್ನು ಪ್ರಾರಂಭ ಮಾಡಲಾಗುತ್ತದೆ ಎಂದು ಸಚಿವರು ಹೇಳಿದರು.

ಗರ್ಭಿಣಿಯರಿಗೆ ಪ್ರಸವಪೂರ್ವ ತಪಾಸಣೆ: ಓಬಿಜಿವೈ ತಜ್ಞ ವೈದ್ಯರಿಂದ ಗರ್ಭಿಣಿಯರಿಗೆ ಎರಡನೇ ಅಥವಾ ಮೂರನೇ ತ್ರೈಮಾಸಿಕದಲ್ಲಿ ಕನಿಷ್ಠ ಒಂದು ಪುಸವಪೂರ್ವ ತಪಾಸಣೆ ನಡೆಯಬೇಕು. ಪ್ರಸವಪೂರ್ವ ಸಮಯದಲ್ಲಿ ಆರೈಕೆಯ ಗುಣಮಟ್ಟ ಸುಧಾರಿಸಬೇಕು ಎಂದು ಸಚಿವರು ಸೂಚನೆ ನೀಡಿದರು.

ಈ ವೇಳೆ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಮಾತನಾಡಿ, ರಾಯಚೂರ ಜಿಲ್ಲೆಗೆ ಸುಸಜ್ಜಿತ ಜಿಲ್ಲಾಸ್ಪತ್ರೆ ಅವಶ್ಯಕವಾಗಿದ್ದು, ತಕ್ಷಣ ಮಂಜೂರು ಮಾಡಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ಹಿಂದುಳಿದ ಜಿಲ್ಲೆಯಾದ ರಾಯಚೂರಿನಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಇನ್ನು ಸುಧಾರಣೆಯಾಗಬೇಕಿದೆ. ಈ ಭಾಗದ ವೈದ್ಯರು ಮತ್ತು ಸಿಬ್ಬಂದಿಯು ಜನತೆಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡುವ ಮೂಲಕ ಬಡ ಕುಟುಂಬಗಳಿಗೆ ಉತ್ತಮ ಸೇವೆ ನೀಡಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಮಾನ್ವಿ ವಿಧಾನಸಭೆ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ್, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಮಹಾನಗರ ಪಾಲಿಕೆಯ ಉಪಾಧ್ಯಕ್ಷರಾದ ಸಜೀದ್ ಸಮೀರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ವಿಭಾಗದ ಅಧಿಕಾರಿ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು ಇದ್ದರು.

## ಶಿಶುಗಳ ಮೂಳೆ ಮುರಿತ: ಸಂಕಷ್ಟದಲ್ಲಿ ಪೋಷಕರು

ತೋರಿಸಿದ್ದಾರೆ. ವೈದ್ಯರು ಸ್ಕ್ಯಾನ್ ಮಾಡಿಸಿದಾಗ ಮಗುವಿನ ಬಲಗಾಲಿನ ತೊಡೆಯ ಮೂಳೆ ಮುರಿದಿರುವುದು ಗೊತ್ತಾಗಿದೆ.ಮೂಳೆ ಮುರಿದಿರುವ ಬಗ್ಗೆ ವೈದ್ಯರನ್ನು ಪ್ರಶ್ನಿಸಿದಾಗ, ಸಿಸೇರಿಯನ್ ಮಾಡುವಾಗ ಮೂಳೆ ಮುರಿದಿದೆ.

ಇದೆಲ್ಲಾ ಸಹಜ ಎಂದು ಹೇಳಿ ಕುಟುಂಬಸ್ಥರನ್ನು ಹೆದರಿಸಿದ್ದಾರೆ ಎಂದು ಆರೋಪಿಸಲಾಗಿದೆ. ಇದೀಗ, ನಮಗೆ ನ್ಯಾಯ ಬೇಕು ಎಂದು ಶ್ರೀದೇವಿ ಗಂಡ ರಾಜು ಹಾಗೂ ಕುಟುಂಬಸ್ಥರು ಆಗ್ರಹಿಸಿದ್ದಾರೆ. ಹೆರಿಗೆ ವೇಳೆ ಮುರಿಯಿತು ಮತ್ತೊಂದು ಶಿಶುವಿನ

ಕಾಲು: ಬೀದರ್ ಮಂಗಲಪೇಟ್ ನಿವಾಸಿ ರೂಪಾರಾಣಿ ನಾಗೇಂದ್ರ ಮಡಿವಾಳ ಎಂಬುವರು ಡಿಸೆಂಬರ್ 14 ರಂದು ಬ್ರಿಮ್ಸ್ ಆಸ್ಪತ್ರೆಗೆ ಹೆಸರಿಗೆಗೆಂದು ತೆರಳಿದ್ದರು. ಬ್ರಿಮ್ಸ್ ವೈದ್ಯರು ಆಕೆಗೆ ನಾರ್ಮಲ್ ಹೆರಿಗೆ ಮಾಡಿಸಿದ್ದಾರೆ. ಇದೇ ವೇಳೆ ಮಗುವಿನ ಕಾಲು ಮುರಿದಿದ್ದಾರೆ. ಎರಡು ವಾರದ ಅಂತರದಲ್ಲಿ ಎರಡು ಹಸೂಗೂಸುಗಳ ಕಾಲು ಮುರಿದಿದ್ದು, ಹಸುಗೂಸುಗಳ ಬದುಕಿನ ಜೊತೆ ಬ್ರಿಮ್ಸ್ ವೈದ್ಯರು ಚೆಲ್ಲಾಟವಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ನರ್ಸ್, ಟ್ರೈನಿ ವೈದ್ಯರಿಂದ ಹೆರಿಗೆ: ನರ್ಸ್, ಟ್ರೈನಿ ವೈದ್ಯರು ಹೆರಿಗೆ ಮಾಡಿಸಿದ್ದಾರೆ. ಹಿರಿಯ ವೈದ್ಯರ ಮಾರ್ಗದರ್ಶನ ಪಡೆಯದೆಯೇ ಹೆರಿಗೆ ಮಾಡಿಸಿದ್ದಾರೆ. ಇದರ ಪರಿಣಾಮ ಎರಡು ಹಸುಗೂಸುಗಳ ಕಾಲಿನ ಮೂಳೆ ಮುರಿದಿದೆ.

ಇದಕ್ಕೆ ಕಾರಣರಾದ ವೈದ್ಯರ ಮೇಲೆ ಕ್ರಮ ಕೈಗೊಳ್ಳಿ. ಮುಂದೆ ಇಂತಹ ಅನಾಹುತಗಳು ಆಗದಂತೆ ನೋಡಿಕೊಳ್ಳಿ ಎಂದು ಬ್ರಿಮ್ಸ್ ಆಸ್ಪತ್ರೆಯ ನಿರ್ದೇಶಕರಿಗೆ, ವೈದ್ಯಕೀಯ ಶಿಕ್ಷಣ ಸಚಿವರಿಗೆ ಸಂತ್ರಸ್ತರು ಮನವಿ ಮಾಡಿದ್ದಾರೆ.

ಆದರೆ, ಯಾವುದೆ ರೀತಿಯ ಕ್ರಮ ಕೈಗೊಂಡಿಲ್ಲ. ಇದು ಸಹಜವಾಗಿಯೇ ಹಸುಗೂಸುಗಳ ಕುಟುಂಬಸ್ಥರ ಆಕ್ರೋಶ ಹೆಚ್ಚಾಗುವಂತೆ ಮಾಡಿದೆ. ಒಟ್ಟಿನಲ್ಲಿ, ಹಿರಿಯ ವೈದ್ಯರ ಅನುಪಸ್ಥಿತಿಯಲ್ಲಿ ಹೆರಿಗೆ ಮಾಡಿಸಿದ್ದು ಪುಟ್ಟಕಂದಮ್ಮಗಳ ಕಾಲಿನ ಮೂಳೆ ಮುರಿಯಲು ಕಾರಣವಾಗಿದೆ. ಹಸುಗೂಸುಗಳ ಮೂಳೆ ಮುರಿದಿದ್ದರಿಂದ ಅವರ ಭವಿಷ್ಯದ ಬಗ್ಗೆ ಪೋಷಕರಿಗೆ ಚಿಂತೆಯಾಗಿದೆ.

## ನನಗೆ ಪುನರ್ಜನ್ಮ ಸಿಕ್ಕಿದೆ: ಗಾಯಾಳು ಶಿವಕುಮಾರ

ಬುಧವಾರ ಬಿಡುಗಡೆಗೊಳಿಸಿದ್ದಾರೆ.

ಜ. 16ರಂದು ನಗರದ ಎಸ್‌ಬಿಐ ಎದುರು ದರೋಡೆಕೋರರಿಬ್ಬರೂ ಗುಂಡಿನ ದಾಳಿ ನಡೆಸಿ 83 ಲಕ್ಷ ನೋಟಿನ ಕಂತೆಗಳಿರುವ ಟ್ರಂಕ್ ದರೋಡೆ ಮಾಡಿದ್ದರು. ಘಟನೆಯಲ್ಲಿ ಗುಂಡೇಟಿನಿಂದ ಗಿರಿ ವೆಂಕಟೇಶ ಸ್ಥಳದಲ್ಲೇ ಮೃತಪಟ್ಟಿದ್ದರು. ಶಿವಕುಮಾರ ಗಾಯಗೊಂಡಿದ್ದರು. ಗಿರಿ ಹಾಗೂ ಶಿವಕುಮಾರ ಅವರು ಸಿಎಂಎಸ್ ಕಂಪನಿಯಲ್ಲಿ 'ಕ್ಯಾಶ್ ಕಸ್ಟೋಡಿಯನ್' ಆಗಿ ಕೆಲಸ ನಿರ್ವಹಿಸುತ್ತಾರೆ.

## ನಿರಂತರ ಜ್ಯೋತಿ : ಜಾರ್ಜ

ಮಾಡಲಾಗುತ್ತಿದ್ದು, ಉಳಿದಂತೆ ಸಂಜೆ 6 ರಿಂದ ಬೆಳಿಗ್ಗೆ 6 ಗಂಟೆವರೆಗೆ ಸಿಂಗಲ್ ಫೇಸ್ ಓಪನ್ ಡೆಲ್ಟಾ ಮಾದರಿಯಲ್ಲಿ ವಿದ್ಯುತ್ ಪೂರೈಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಕಳೆದ ಬೇಸಿಗೆಯಲ್ಲಿ ವಿದ್ಯುತ್ ಕೊರತೆ ಇದ್ದರೂ ಸಹ ಯಾವುದೇ ರೀತಿಯ ತೊಂದರೆಯಾಗದಂತೆ ಸಮರ್ಪಕವಾಗಿ ವಿದ್ಯುತ್ ಪೂರೈಸಲಾಗಿದ್ದು, ಬರುವ ಬೇಸಿಗೆಯಲ್ಲು ಕೂಡಾ ಗ್ರಾಹಕರಿಗೆ ಸರಿಯಾದ ಪ್ರಮಾಣದ ವಿದ್ಯುತ್ ಪೂರೈಸುವಲ್ಲಿ ಇಲಾಖೆ ಸನ್ನದ್ಧವಾಗಿದೆ. ಯಾವುದೇ ಸರಕಾರಗಳು ಆಡಳಿತದಲ್ಲಿರಲಿ ವಿದ್ಯುತ್ ಸಂಬಂಧಿಸಿದಂತೆ ತಾಂತ್ರಿಕ ದೋಷಗಳು ಬರುತ್ತಿರುವದರಿಂದ ಕೆಲವು ಸಮಯಗಳು ಬೇಕಾಗುತ್ತವೆ. ಅಲ್ಲದೇ ಈ ಮೊದಲಿನ ವಿದ್ಯುತ್ ಪರಿಕರಗಳು ಬಹಳ ದಿನಗಳಿಂದ ಅಳವಡಿಸಿದ್ದು, ಮಳೆ, ಗಾಳಿ ಬಿಸಿಲಿಗೆ ತನ್ನ ಸಾಮರ್ಥ್ಯ ಕಳೆದುಕೊಂಡಿರುತ್ತವೆ ಎಂದರು.

ಹುನಗುಂದ ಮತಕ್ಷೇತ್ರ ವ್ಯಾಪ್ತಿಯಲ್ಲಿ ಮರೋಳ-ರಾಮಥಾಳ ಏತ ನೀರಾವರಿ, ನಂದವಾಡಗಿ ಏತ ನೀರಾವರಿ ಇರುವದರಿಂದ ಈ ಭಾಗದಲ್ಲಿ 220 ಕೆವಿ ಸಬ್ ಸ್ಟೇಷನ್ ಅಗತ್ಯವಿದ್ದು, ಅನುಮೋದನೆ ದೊರೆತಿದ್ದರೂ ಕಾಮಗಾರಿ ಪ್ರಾರಂಭವಾಗಿಲ್ಲ. ಬೇಗನೆ ಪ್ರಾರಂಭಕ್ಕೆ ಕ್ರಮವಹಿಸುವಂತೆ ಶಾಸಕ ವಿಜಯಾನಂದ ಕಾಶಪ್ಪನವರ ಸಚಿವರಲ್ಲಿ ಮನವಿ ಮಾಡಿಕೊಂಡರು.

ಅಲ್ಲದೇ ಇಳಕಲ್ಲ ನಗರದಲ್ಲಿ 6 ಎಕರೆ ಜಾಗೆಯಲ್ಲಿ ಸುಸಜ್ಜಿತವಾದ ಕ್ರೀಡಾಂಗಣ ನಿರ್ಮಿಸಲಾಗುತ್ತಿದ್ದು, ಅದರ ಮೇಲೆ ಹೈ ಓಲ್ಟೇಜ್ ಲೈನ್ ಹಾಯ್ದು ಹೋಗಿದ್ದರಿಂದ ಅದನ್ನು ತೆರವುಗೊಳಿಸಬೇಕಾಗಿದೆ ಎಂದು ಶಾಸಕ ಕಾಶಪ್ಪನವರ ಸಭೆಗೆ ತಿಳಿಸಿದಾಗ, ಸಚಿವ ಜಾರ್ಜ ಪ್ರಾರಂಭವಾಗದ ಕಾಮಗಾರಿ ಶೀಘ್ರದಲ್ಲಿ ಪ್ರಾರಂಭಿಸುವದರ ಜೊತೆಗೆ ಇತರೆ ಸಮಸ್ಯೆಗಳನ್ನು ತುರ್ತಾಗಿ ಬಗೆಹರಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, ಬಾದಾಮಿ ಐತಿಹಾಸಿಕ ಪ್ರವಾಸಿ ತಾಣವಾಗಿದ್ದು, ಕೈಗಾರಿಕೆ, ವಿಶೇಷವಾಗಿ ಗುಳೇದಗುಡ್ಡ, ಕೆರೂರ ಭಾಗದಲ್ಲಿ ಫವರ್ ಲೂಮ್ ಹೆಚ್ಚಿಗೆ ಇದ್ದು, 220 ಕೆವಿ ಅಗತ್ಯವಿರುವದರಿಂದ ಅದಕ್ಕೆ ಅವಶ್ಯವಾಗಿರುವಷ್ಟು ಭೂಮಿಯನ್ನು ನೀಡುವುದಾಗಿ ತಿಳಿಸಿದರು. ಈ ಭಾಗದ ಬೇಲೂರ, ನಂದಿಕೇಶ್ವರ 33/11 ಕೆವಿಯಿಂದ 110 ಕೆವಿ ಮೇಲ್ದರ್ಜೆಗೆ ಏರಿಸಬೇಕಾಗಿದೆ. ಅಲ್ಲದೇ ಬಾದಾಮಿ ಹಾಗೂ ಗುಳೇದಗುಡ್ಡ ಉಪ ವಿಭಾಗಗಳನ್ನು ಸೇರಿಸಿ ಬಾದಾಮಿಯಲ್ಲಿ ನೂತನ ವಿಭಾಗೀಯ ಕಚೇರಿ ಅಗತ್ಯವಾಗಿರುವ ಬಗ್ಗೆ ಸಭೆಗೆ ತಿಳಿಸಿದರು.

ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ ಬೀಳಗಿಯ 220 ಕೆವಿ ಹಾಗೂ 110 ಕೆವಿ ಸುನಗ ವಿದ್ಯುತ್ ವಿತರಣಾ ಕೇಂದ್ರಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕೂಡಲೇ ಪೂರ್ಣಗೊಳಿಸಿ ಚಾಲನೆಗೊಳಿಸಲು ಕ್ರಮವಹಿಸುವಂತೆ ಸಚಿವರಲ್ಲಿ ಮನವಿ ಮಾಡಿಕೊಂಡರು. ಅಲ್ಲದೇ ಸಿದ್ದಾಪೂರ, ಅರಕೇರಿ, ಚಿಕ್ಕಹಂಚಿನಾಳ ಮತ್ತು ಚಿಕ್ಕಾಲಗುಂಡಿಯಲ್ಲಿ ಹೊಸದಾಗಿ 110 ಕೆವಿ ವಿದ್ಯುತ್ ಕೇಂದ್ರ ಕೇಂದ್ರಗಳನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿರುವುದಾಗಿ ತಿಳಿಸಿದರು. ಈ ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸುವಂತೆ ಸಚಿವ ಜಾರ್ಜ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಎಚ್.ಟಿ. ಹಾಗೂ ಎಲ್‌ಟಿ ಮಾರ್ಗದ ವಾಹನ ಬದಲಾವಣೆ ಕಾಮಗಾರಿಗಳು ಮಂಜೂರಾಗಿದ್ದು, ಆದ್ಯತೆ ಮೇರೆಗೆ ಕಾಮಗಾರಿ ಕೈಗೆತ್ತಿಗೊಳ್ಳಬೇಕಿದೆ. ಅಲ್ಲದೇ ಹೆಚ್ಚುವರಿಯಾಗಿ ಪರಿವರ್ತಕಗಳನ್ನು ಸಹ ಅಳವಡಿಸಲು ಬಾಕಿ ಇದ್ದು, ತುರ್ತಾಗಿ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಲು ಸಚಿವ ಜಾರ್ಜರವರಿಗೆ ತಿಳಿಸಿದರು. ಈ ಬಗ್ಗೆ ಆದ್ಯತೆ ಮೇರೆಗೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ, ಕೆಪಿಟಿಸಿಎಲ್‌ನ ವ್ಯವಸ್ಥಾಪಕ ಪಂಕಜಕುಮಾರ ಪಾಂಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗುತ್ತಿಗೆದಾರ, ಶಿಸ್ತು ಕ್ರಮಕ್ಕೆ ಗ್ರಾಮಸ್ಥರ ಆಗ್ರಹ

ಸಾಗಣೆ ಮಾಡಿರುವುದು ಬೆಳಗಾದಾಗ ಆಕ್ರೋಶ ವ್ಯಕ್ತಪಡಿಸಿದ ಘಟನೆ ಮಂಗಳವಾರ ರಾತ್ರಿ ಜರುಗಿದ್ದು ಈ ಕೆರೆಯ ಮಣ್ಣಿಗೆ ಹೇಳೋರು ಕೇಳೋರು ಯಾರು ಇಲ್ಲ ಎಂಬಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರ ಆಕ್ರೋಶ ವ್ಯಕ್ತಪಡಿಸಿದರು.

ಕೆರೆಯ ಪಕ್ಕದಲ್ಲಿಯೇ ಕೆಲವೇ ಅಂತರದಲ್ಲಿ ಲೇಔಟ್ ನಿರ್ಮಾಣವಾಗುತ್ತಿದ್ದು ಲೇಔಟ್ ನಲ್ಲಿರುವ ರಸ್ತೆ ನಿರ್ಮಾಣಕ್ಕಾಗಿ ಕೆರೆಯ ಮಣ್ಣನ್ನು ಬಳಸಿಕೊಳ್ಳುವ ಉದ್ದೇಶದಿಂದ ರಾತ್ರೋರಾತ್ರಿ ಲೇಔಟಿನ ರಸ್ತೆಯಲ್ಲಿ ಹಾಕಲಾಗಿದ್ದು ಬುಧವಾರ ಬೆಳಿಗ್ಗೆ ಗ್ರಾಮದ ಪ್ರಮುಖರು ಗಮನಿಸಿದಾಗ ಲೇಔಟ್ ಅಭಿವೃದ್ಧಿಪಡಿಸುತ್ತಿರುವ ಕುಷ್ಟಗಿ ಪಟ್ಟಣದ ಗುತ್ತಿಗೆದಾರ ಶರಣಪ್ಪ ಕುಂಬಾರ ತಾವೇ ತಮ್ಮ ಲೇಔಟ್ ನಲ್ಲಿ ಹಾಕಿಕೊಂಡಿರುವುದಾಗಿ ತಿಳಿಸಿದ್ದು ಈ ಕಾರ್ಯಕ್ಕೆ ರಾತ್ರಿ ವೇಳೆಯಲ್ಲಿ ಒಂದು ಜೆಸಿಬಿ ಸೇರಿದಂತೆ ಆರರಿಂದ ಎಂಟು ಟ್ರ್ಯಾಕ್ಟರ್ ಬಳಕೆ ಮಾಡಿರುವುದಾಗಿ ತಿಳಿಸಿರುತ್ತಾರೆ.

ಈ ಗುತ್ತಿಗೆದಾರನಿಗೆ ಅರಿವೇ ಇಲ್ಲವೇ ಎಂಬುವಂತೆ ಗ್ರಾಮದ ಸಾರ್ವಜನಿಕರು ಮಾತನಾಡಿಕೊಳ್ಳುತ್ತಿದ್ದು ಕಂದಾಯ ಇಲಾಖೆಯ ಗ್ರಾಮ ಅಭಿವೃದ್ಧಿ ಅಧಿಕಾರಿ(ಗ್ರಾಮ ಲೆಕ್ಕಾಧಿಕಾರಿ) ಆಗಮಿಸಿ ಪರಿಶೀಲನೆ ನಡೆಸಿದಾಗ ನಾನೇ ಈ ಕಾರ್ಯ ಮಾಡಿಸಿದ್ದೇನೆ ಒಪ್ಪಿಕೊಂಡಿದ್ದು ತಮ್ಮ ತಪ್ಪನ್ನು ಕ್ಷಮಿಸುವಂತೆ ಬೇಡಿಕೊಂಡಿರುತ್ತಾನೆ. ಸಂಬಂಧ ಪಟ್ಟ ಅಧಿಕಾರಿಗಳು ಈ ಕೃತ್ಯ ಎಸಿಗಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವರೇ ಎಂಬ ಪ್ರಶ್ನೆ ಗ್ರಾಮದ ಸಾರ್ವಜನಿಕರಲ್ಲಿ ಮೂಡಿರುತ್ತದೆ.


**CITATION**

**IN THE COURT OF THE ADDL. CIVIL JUDGE AND JMFC. AT HUMNABAD**
**CRL. MISC. NO. 2320/2024**

**Petitioners :-**

1). Syed Faqroddin S/o Syed Mastan Sab Age; 59 Yrs Occu: Agriculture
2). Nasiroddin S/o late Syed Mastan Sab Age; 55 Yrs Occu: Agriculture
3). Smt. Kalima Bee W/o Hajimiyya Age; 50 Yrs Occu: House Hold
All are R/o Village Walkhindi Tq:Chitguppa Dist;Bidar.
4). Smt. Salima Bee W/o Abdul Sab Age; 56 Yrs Occu: House Hold R/o Kodli Kalburgi.
5). Smt. Phatru Bee W/o Ajimsab Age; 63 Yrs Occu: House Hold R/o Village Salgar Basanthpur Tq & Dist:Kalburgi.

//Vs//

**Respondent:-**

**The Registrar of Birth and Death through The Tahasildar Office Chitguppa.**

**Sub:- Petition U/Sec 13 (3) of Birth and Death Registration Act 1969**

Whereas the above named petitioners have filed the petition under section 13(3) of Birth and Death Registration Act 1969 praying this Honourable court to issue death certificate sons of Petitioner no. 1 & 2 and Daughters of Petitioner No. 3 to 5 namely : **Syed Mastan Sab S/o Syed Lal Sab** who **died on 16-08-2002** at Village Walkhindi Tq:Chitguppa Dist;Bidar. The petitioners claiming the death certificate of said Syed Mastan Sab for transfer of property and other official purpose and home record.

Therefore, it is hereby proclaimed that if any persons have got any objection in this regard may approach to this court on **12/02/2025 at 11.00 AM** in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the **07-01-2025.**

**//By order of the court//**
Chief Ministerial Officer
Addl. Civil Judge and JMFC Court,
Humnabad


## ಹಲಬರ್ಗಾ ಪಿಕೆಪಿಎಸ್‌ಗೆ ಗೋವಿಂದಸಿಂಗ್ ಅಧ್ಯಕ್ಷ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 22 : ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಗೋವಿಂದಸಿಂಗ್ ಶಿವಪಾಲಸಿಂಗ್ ಠಾಕೂರ್ ಹಾಗೂ ಉಪಾಧ್ಯಕ್ಷರಾಗಿ ಲಕ್ಷ್ಮಣ ನರಸಗೊಂಡ ಕುಪ್ಪೆ ಆಯ್ಕೆಯಾದರು.

ಸಂಘದಲ್ಲಿ ಬುಧವಾರ ನಡೆದ ಚುನಾವಣೆಯಲ್ಲಿ ಎರಡೂ ಸ್ಥಾನಗಳಿಗೆ ಒಂದೊಂದೇ ನಾಮಪತ್ರ ಸಲ್ಲಿಕೆಯಾಗಿತ್ತು. ಹೀಗಾಗಿ ಆಯ್ಕೆ ಅವಿರೋಧವಾಗಿ ನಡೆಯಿತು. ಚುನಾವಣಾಧಿಕಾರಿ ನಾಗನಾಥಗನ್ನಾಳೆ ಆಯ್ಕೆಯನ್ನು ಪ್ರಕಟಿಸಿದರು.

ಆಯ್ಕೆ ಪ್ರಕಟಿಸುತ್ತಿದ್ದಂತೆಯೇ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಅಧ್ಯಕ್ಷ, ಉಪಾಧ್ಯಕ್ಷರಿಗೆ ಗುಲಾಲು ಎರಚಿ, ಶಾಲು ಹೊದಿಸಿ, ಹೂಮಾಲೆ ಹಾಕಿ ಸನ್ಮಾನಿಸಿದರು.

ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ, ನಿರ್ದೇಶಕರಾದ ಸಂಗ್ರಾಮ ಪಾಟೀಲ ಅಹಮದಾಬಾದ್, ಸೋಮನಾಥ ಬಿರಾದಾರ, ಬ್ರಿಜಪಾಲಸಿಂಗ್ ಠಾಕೂರ್, ಬಸವರಾಜ ಮೂಲಗೆ, ಸಂತೋಷ್ ಪಾಟೀಲ ತೇಗಂಪುರ, ಜ್ಯೋತಿ ಕಲ್ಯಾಣರಾವ್, ಜಗದೀಶ್ ಕೆಪ್ಟೆ, ಮೋಹನ್ ಅಲಿಯಾಬಾದ್, ಚಂದು ಕೋಸಂ, ಕಾರ್ಯದರ್ಶಿ ಶಿವಕುಮಾರ ವಡ್ಡಿ, ಗ್ರಾ.ಪಂ.ಅಧ್ಯಕ್ಷೆ ಪದ್ಮಿನಿಬಾಯಿ ಶಿವಪಾಲಸಿಂಗ್ ಠಾಕೂರ್, ಸದಸ್ಯ ಪ್ರಕಾಶ ಪ್ರಭಾ, ಮುಖಂಡರಾದ ರಮೇಶ ಪ್ರಭಾ, ಧನರಾಜ ಪಾಟೀಲ, ಉದಯಕುಮಾರ ಮೂಲಗೆ, ಉಮೇಶ ಕುಲಕರ್ಣಿ, ರಾಜಕುಮಾರ ಚಲುವಾ, ಮಾಣಿಕರಾವ್ ಪಾಟೀಲ ತೇಗಂಪುರ, ಶಾಂತಕುಮಾರ ಬಿರಾದಾರ, ಶಿವಕುಮಾರ ಪಾಟೀಲ ತೇಗಂಪುರ, ಮಲ್ಲಿಕಾರ್ಜುನ ಜಿವಣಗೆ, ಫಾಳೆಪ್ಪ ನಾಗೂರೆ, ರಾಜು ಕುಂಬಾರ, ಸತೀಶ್ ಮಡಿವಾಳ ಮತ್ತಿತರರು ಇದ್ದರು.

## ಮಾಧ್ಯಮಿಕ ಶಿಕ್ಷಕರ ಸಂಘಕ್ಕೆ ನೇಮಕ



ಬೀದರ. ಜ. 22 : ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪರಮೇಶ್ವರ ಬಿರಾದಾರ ತಿಳಿಸಿದ್ದಾರೆ.

ಪದಾಧಿಕಾರಿಗಳು: ವಿಜಯಕುಮಾರ ಪಾಟೀಲ ಯರನಳ್ಳಿ(ಗೌರವಾಧ್ಯಕ್ಷ), ಲಕ್ಷ್ಮಣ ಪೂಜಾರಿ, ಪ್ರತಿಭಾ ಚಾಮಾ, ಬಳಿರಾಮ ಕುರ್ನಾಳೆ, ಉಮೇಶ ಪಾಟೀಲ (ಉಪಾಧ್ಯಕ್ಷರು), ರಮೇಶ ಪಾಟೀಲ (ಪ್ರಧಾನ ಕಾರ್ಯದರ್ಶಿ), ನರಸಾರೆಡ್ಡಿ, ಗೀತಾ ಗಡ್ಡಿ, ಸತೀಶ್ ಬಿರಾದಾರ, ನಾಗನಾಥ ಪಾಟೀಲ (ಕಾರ್ಯದರ್ಶಿ), ಸಂತೋಷ ಸೋಲಪುರೆ (ಸಂಘಟನಾ ಕಾರ್ಯದರ್ಶಿ), ಸಂತೋಷ ಮಂಗಳೂರೆ (ಖಜಾಂಚಿ), ರಾಜಶೇಖರ ಮಂಗಲಗಿ, ಪೆಂಟಾರೆಡ್ಡಿ, ಬಸವರಾಜ ಸ್ವಾಮಿ, ಪ್ರಕಾಶ ಡೊಂಗ್ರೆ, ರಮೇಶ ಕುಲಕರ್ಣಿ, ಶಾಲಿವಾನ್ ಗಂದಗೆ, ಬಾಬುರಾವ್ ದಾನಿ, ಉಮಾಕಾಂತ ಮೀಸೆ, ನಾಗನಾಥರಾವ್ ಬಿಡವೆ, ಮಹಾರುದ್ರ ಮದಕಟ್ಟಿ, ಮನೋಹರ ಭವರಾ, ಮಹಾದೇವ ಮಠಪತಿ, (ಗೌರವ ಸಲಹೆಗಾರರು), ಸಂಜೀವಕುಮಾರ ಸ್ವಾಮಿ, ನರೇಶ್ ಬೆಲ್ದಾರ್, ಬಾಲಾಜಿ ಪವಾರ್ (ಕಾರ್ಯಕಾರಿಣಿ ಸದಸ್ಯರು).

ತಾಲ್ಲೂಕು ಘಟಕಗಳ ಪದಾಧಿಕಾರಿಗಳು: ಔರಾದ್, ಕಮಲನಗರ: ಮನೋಹರ ಬಿರಾದಾರ (ಅಧ್ಯಕ್ಷ), ನವಿಲ್ ಚಾಲಕ್ ಸಂತಪುರ(ಪ್ರಧಾನ ಕಾರ್ಯದರ್ಶಿ), ಯಶವಂತರಾವ್ ಬಾರೋಳೆ (ಖಜಾಂಚಿ), ಸವಿತಾ ಕಾರಬಾರಿ ಕಮಲನಗರ(ಕಾರ್ಯದರ್ಶಿ).

ಹುಮನಾಬಾದ್: ರಾಜಕುಮಾರ ಬೆಳೂರೆ (ಅಧ್ಯಕ್ಷ), ನರೇಂದ್ರ ಬಾಗನ್ನೋರ (ಪ್ರಧಾನ ಕಾರ್ಯದರ್ಶಿ).

ಭಾಲ್ಕಿ ತಾಲ್ಲೂಕು: ರವಿ ಭಾತಂಬ್ರಾ(ಅಧ್ಯಕ್ಷ), ಸಂಗಮೇಶ ಹಳ್ಳಿಖೇಡ(ಪ್ರಧಾನ ಕಾರ್ಯದರ್ಶಿ).

ಬಸವಕಲ್ಯಾಣ ತಾಲ್ಲೂಕು: ಪ್ರತಾಪಸಿಂಗ್ ಜಾಧವ್ (ಅಧ್ಯಕ್ಷ), ಅಮೀತ್ ದೇಶಪಾಂಡೆ (ಪ್ರಧಾನ ಕಾರ್ಯದರ್ಶಿ).

## ರೈಲು ಹಾಯ್ದು 11 ಸಾವು

ಮೊದಲು ಪುಷ್ಪಕ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂಬ ವದಂತಿ ಹಿನ್ನೆಲೆಯಲ್ಲಿ ಪ್ರಯಾಣಿಕರು ಚೈನ್ ಎಳೆದು ರೈಲು ನಿಲ್ಲಿಸುವ ಪ್ರಯತ್ನ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಅಪಾಯದಿಂದ ಪಾರಾಗಲು ರೈಲಿನಿಂದ ಕೆಳಕ್ಕೆ ಜಿಗಿದು ಮತ್ತೊಂದು ಹಳಿಗೆ ಬಂದಿದ್ದಾರೆ. ಈ ವೇಳೆ ಕರ್ನಾಟಕ ಎಕ್ಸ್‌ಪ್ರೆಸ್ ಬಂದಿದ್ದು ಹಳಿಯಲ್ಲಿದ್ದ ಪ್ರಯಾಣಿಕರ ಮೇಲೆ ಹರಿದಿದೆ. ಇದರಿಂದಾಗಿ ಸಾವು ನೋವು ಹೆಚ್ಚಾಗಿದೆ.

ದೆಹಲಿಯಿಂದ ಬೆಂಗಳೂರಿಗೆ ಕರ್ನಾಟಕ ಎಕ್ಸ್‌ಪ್ರೆಸ್ ಬರುತ್ತಿದ್ದರೆ, ಪುಷ್ಪಕ್ ಎಕ್ಸ್‌ಪ್ರೆಸ್ ಉತ್ತರ ಪ್ರದೇಶ ರಾಜಧಾನಿ ಲಕ್ನೋದಿಂದ ಮುಂಬೈಗೆ ಬರುತ್ತಿದ್ದ ವೇಳೆ ಈ ಅವಘಡ ಸಂಭವಿಸಿದೆ.

## ಲೋಡ್ ಶೆಡ್ಡಿಂಗ್ ಇಲ್ಲ:ಸಚಿವ ಕೆ.ಜೆ.ಜಾರ್ಜ

ವಿದ್ಯುತ್ ಬೇಡಿಕೆ ಈ ವರ್ಷವೂ ಜಾಸ್ತಿಯಾಗುತ್ತಿದೆ. ಸಧ್ಯ 16 ರಿಂದ 17 ಸಾವಿರ ಮೆಗಾವ್ಯಾಟ್ ಬೇಡಿಕೆ ಬರುತ್ತಿದೆ ಎಂದು ಸಚಿವರು ತಿಳಿಸಿದರು.

ಕಾಂಗ್ರೆಸ್ ಪಕ್ಷದ ಈಚಿನ ಬೆಳವಣಿಗೆಗಳ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ. ಎಲ್ಲವೂ ಮಾಧ್ಯಮ ಸೃಷ್ಠಿ. ತಮಗೆ ಸುದ್ದಿಯ ಅವಶ್ಯಕತೆಯಿಂದಾಗಿ ಏನೆಲ್ಲಾ ಸೃಷ್ಠಿಸಿ ಬಿತ್ತರಿಸುತ್ತಿದ್ದೀರಿ. ನಮ್ಮಲ್ಲಿ ಏನೇ ಭಿನ್ನಾಭಿಪ್ರಾಯಗಳಿದ್ದರೆ ಚರ್ಚಿಸಿ ಸರಿ ಮಾಡ್ತೀವಿ. ನಮ್ಮ ಹೈಕಮಾಂಡ್ ಎಲ್ಲವನ್ನು ಬಗೆಹರಿಸುತ್ತದೆ ಎಂದು ಹೇಳಿ, ಡಿನ್ನರ್ ಪಾರ್ಟಿ ಸರ್ವೇ ಸಾಮಾನ್ಯ. ಊಟಕ್ಕೆ ಕರೆದರೆ ತಪ್ಪೇನಿದೆ ಎಂದರು.

ತಾವು ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದು ಪ್ರತಿ ಜಿಲ್ಲೆಗೆ ತೆರಳಿ ಅಲ್ಲಿನ ಜನಪ್ರತಿನಿಧಿಗಳಿಂದ ಇಂಧನ ಇಲಾಖೆಗೆ ಸಂಬಂಧಿತ ಸಮಸ್ಯೆಗಳನ್ನು ತಿಳಿದು ಪರಿಹಾರ ಕಂಡುಕೊಳ್ಳುವುದಕ್ಕೆ ಮುಂದಾಗಿರುವುದಾಗಿ ಸಚಿವ ಕೆ.ಜೆ.ಜಾರ್ಜ ತಿಳಿಸಿದರು.

# ಚರಂಡಿ ಮತ್ತು ಸಿಸಿ ರಸ್ತೆ ಕಾಮಗಾರಿಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಬೀದರ್ ದಕ್ಷಿಣ ಕ್ಷೇತ್ರದ ಎಲ್ಲಾ ಹಳ್ಳಿಗಳಲ್ಲಿ ಒಂದಿಲ್ಲೊಂದು ರೀತಿಯ ಅಭಿವೃದ್ಧಿ ಕಾರ್ಯ-ಕ್ಕೆ ಸರ್ಕಾರದಿಂದ ಹೆಚ್ಚಿನ ಅನುದಾನ ತಂದು ಸಾಮಾಜಿಕ ನ್ಯಾಯ ಒದಗಿಸುವ ಕೆಲಸವನ್ನು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾಡುತ್ತಿದ್ದಾರೆ ಎಂದು ಗ್ರಾಮ ಪಂಚಾಯತ್ ಅಧ್ಯಕ್ಷ ಮಂಜುನಾಥ್ ಸುಣಗಾರ್ ಹೇಳಿದರು. ತಾಲೂಕಿನ ಬೆಮಳಖೇಡಾ ಗ್ರಾಮದಲ್ಲಿ ಬುಧವಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸುಮಾರು 40 ಲಕ್ಷ ರೂ. ವೆಚ್ಚದಲ್ಲಿ ಚರಂಡಿ ಮತ್ತು ಸಿ.ಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ರಸ್ತೆ, ಕುಡಿಯುವ ನೀರು, ನೀರಾವರಿ, ಶಾಲೆ ಕಟ್ಟಡ, ಸಮುದಾಯ ಭವನ, ಕಲ್ಯಾಣ ಮಂಟಪ ಹೀಗೆ ಅನೇಕ ಕಾಮಗಾರಿಗಳಿಗೆ ಆದ್ಯತೆ ನೀಡಿದ್ದಾರೆ. ಕ್ಷೇತ್ರದ ಜನತೆಗಾಗಿ ಹಲವಾರು ದೊಡ್ಡ ಯೋಜನೆಗಳನ್ನು ಜಾರಿಗೊಳಿಸಲು ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದಾರೆ. ಹೀಗಾಗಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಶಾಸಕರ ಕೊಡುಗೆ ಅಪಾರವಾಗಿದೆ ಎಂದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುಶಾಂತಕುಮಾರ್, ಬಸವರಾಜ ಚಿಟನಳ್ಳಿ, ಗ್ರಾಮ ಪಂಚಾಯತ್ ಸದಸ್ಯರಾದ ಸಂಜೂಕುಮಾರ್ ಸಾತೊಳ್ಳಿ, ರಮೇಶ ಭಾಸ್ಕರ್, ಪಾಂಡು ಕಟಾರಿ, ವೈಜಿನಾಥ ಕಮಠಾಣ ಪ್ರಮುಖರಾದ ನಾಗರಾಜ ಗುಮ್ಮೆದ, ಪ್ರಶಾಂತ ಸಿಂಧೂಳ, ಬಸವರಾಜ ಯಾದಲಾಪುರ್, ವಿನೋದಕುಮಾರ್ ದುರ್ಗದ್ ಹಾಗೂ ಕೆ.ಆರ್. ಐ. ಡಿ. ಎಲ್ ಸಹಾಯಕ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೆಮಳಖೇಡಾ; ಪಿಕೆಪಿಎಸ್ ಅಧ್ಯಕ್ಷರಾಗಿ ಸಿದ್ದಮ್ಮ ಚಿಟನಳ್ಳಿ ಉಪಾಧ್ಯಕ್ಷರಾಗಿ ಶಿವಕುಮಾರ ದುರ್ಗದ್ ಅವಿರೋಧ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಬೆಮಳಖೇಡಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಸಿದ್ದಮ್ಮ ವೀರಪ್ಪ ಚಿಟನಳ್ಳಿ ಉಪಾಧ್ಯಕ್ಷರಾಗಿ ಶಿವಕುಮಾರ ವೀರಪ್ಪ ದುರ್ಗದ ಅವಿರೋಧ ಆಯ್ಕೆಯಾದರು. ಪಿಕೆಪಿಎಸ್ ಕಾರ್ಯಾಲಯದಲ್ಲಿ ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಮಹಮ್ಮದ್ ಫಾಶಿಯೋದ್ದಿನ ಘೋಷಿಸಿದರು. ಬಳಿಕ ಮುಖ್ಯ ಕಾರ್ಯನಿರ್ವಾಹಕ ರಾಜಶೇಖರ ಕೋಟಗಿ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ನಿರ್ದೇಶಕರನ್ನು ಸನ್ಮಾನಿಸಿದರು. ಸಂಘದ ನೂತನ ನಿರ್ದೇಶಕರಾದ ರಾಜಕುಮಾರ ಪಟವಾದಿ, ಮಲ್ಲಪ್ಪ ಮರ್ಜಾಪುರ, ಸನ್ಮುಕಪ್ಪ ಸಾವಳಗಿ, ಮಾಣಿಕಪ್ಪ ಕರಕನಳ್ಳಿ, ವಿಜಯಕುಮಾರ ಸಜ್ಜನಶೆಟ್ಟಿ, ಮುಖಿಮ ಪಾಷಾ, ಈಶ್ವರ ಹಾಳದೊಡ್ಡಿ, ಶೈಲಜಾ ರಾಜಕುಮಾರ, ವೀರಪ್ಪ ಅಗಸಿ, ಪ್ರಹ್ಲಾದ್ ವಿಠಲಪುರ, ಸಿಬ್ಬಂದಿಗಳಾದ ಸಂತೋಷ ರೊಟ್ಟಿ, ಪ್ರೇಮಾ, ರಾಜಕುಮಾರ್ ಪಂಚಾಳ ಪ್ರಮುಖರಾದ ಮಂಜುನಾಥ್ ಸುಣಗಾರ್, ಅನೀಲಕುಮಾರ್ ಭಂಗುರ್ ಬಸವರಾಜ್ ಚಟ್ನಳ್ಳಿ, ಬಸವರಾಜ್ ಯಾದ್ಲಾಪುರ, ಪ್ರಭುಶೆಟ್ಟಿ ಮೆಂಗಾ, ಗಂಗಾಧರ್ ಪಾಟೀಲ್, ರಾಜಕುಮಾರ್ ಮಳಗಿ, ರಾಜಕುಮಾರ ಅವರಾದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಭಾರತೀಯ ಕ್ರಾಂತಿಕಾರಿ ಕಿಸಾನ್ ಸಂಘ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ಉದ್ಘಾಟನಾ ಕಾರ್ಯಕ್ರಮ ಹಾಗೂ ಕರ್ನಾಟಕ ರಾಜ್ಯ ರೈತ ಸಂಘಗಳ ಏಕೀಕರಣ ಸಮಿತಿ ವತಿಯಿಂದ ವಿಶ್ವ ರೈತ ದಿನಾಚರಣೆ ಹಾಗೂ ರಾಜ್ಯ ರೈತ ಸಮಾವೇಶವನ್ನು ಕುಕುನೂರು ಪಟ್ಟಣದ ಅನ್ನದಾನೇಶ್ವರ ಶಾಖಾಮಠದಲ್ಲಿ ಆಯೋಜನೆ ಮಾಡಲಾಗಿತ್ತು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕುಕನೂರಿನ ಅನ್ನದಾನೇಶ್ವರ ಶಾಖಾಮಠದ ಶ್ರೀಗಳಾದ ಪರಮಪೂಜ್ಯ ಡಾ. ಮಹದೇವ ಮಹಾಸ್ವಾಮಿಗಳು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಚ್ಚೆ ನಂಜುಂಡಸ್ವಾಮಿ ಗೌರವ ಅಧ್ಯಕ್ಷರು ಮತ್ತು ಪ್ರಭಾವಿ ರೈತ ಮುಖಂಡರು ಅಧ್ಯಕ್ಷತೆಯನ್ನು ವಹಿಸಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಸುರೇಶ್ ಭೂಮರೆಡ್ಡಿ ಮಾತನಾಡುತ್ತಾ ರೈತ ತನ್ನ ಹೊಲದಲ್ಲಿ ದುಡಿದು ಜೀವನ ಮಾಡುವಂತಹ ವ್ಯಕ್ತಿ, ರೈತರಿಗೆ ಸರ್ಕಾರಿ ಕಚೇರಿಗಳಲ್ಲಿ ಸರಿಯಾದ ಸೌಲಭ್ಯ ಸಿಗುವಂತೆ ನೋಡಿಕೊಳ್ಳಬೇಕು. ಪ್ರತಿ ಸರ್ಕಾರಿ ಕಚೇರಿಗಳಲ್ಲಿ ರೈತರಿಗೆ ಎಲ್ಲಾ ಸೇವೆಗಳನ್ನು ಸರಿಯಾದ ರೀತಿಯಲ್ಲಿ ನೀಡಿದಾಗ ಮಾತ್ರ ರೈತರ ಉಳಿವಿಕೆ ಸಾಧ್ಯ, ರೈತ ಸಂಘಟನೆಗಳು

ಮುಗ್ಧ ರೈತನಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಕಡಿಮೆಯಾಗಬೇಕು. ರೈತರಿಗೆ ಸರಿಯಾದ ಸಮಯಕ್ಕೆ ಬೀಜ ಗೊಬ್ಬರ ಪೂರೈಕೆ ಮಾಡಿದಾಗ ಮಾತ್ರ ರೈತರು ಸರಿಯಾದ ಬೆಳೆ ಬೆಳೆಯಲು ಸಾಧ್ಯವಾಗುತ್ತದೆ.

ರೈತರು ಬೆಳೆದ ಬೆಳೆಗಳಿಗೆ ಸರಿಯಾದ ಬೆಲೆ ಸಿಕ್ಕಾಗ ಮಾತ್ರ ರೈತರ ಬದುಕು ಸಮೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರಿಗೆ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ವತಿಯಿಂದ ರಾಜ್ಯ ಪ್ರಶಸ್ತಿ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ರಾಷ್ಟ್ರೀಯ ಅಧ್ಯಕ್ಷರಾದ ಎಂ ಎನ್ ಕುಕನೂರ್, ಅಂದಪ್ಪ ಜವಳಿ, ಕಳಕಪ್ಪ ಕಂಬಳಿ, ಅರವಿಂದ್ ಗೌಡ ಪಾಟೀಲ್, ಭಾಗ್ಯರಾಜ್ ಎಚ್, ರಾಮಣ್ಣ ಬಜಂತ್ರಿ, ರಾಜೇಶ್ ವಾಲ್ಮೀಕಿ, ಬಸವರಾಜ್ ಅಡವಿ, ಶರಣಪ್ಪ ಮೇಟಿ, ಮಾಜಿದ್ ಖಾನ್ ಮುಲ್ಲಾ, ಚಂದ್ರಕಾಂತ್ ದೊಡ್ಮನಿ,

ಪಿಡ್ಡನಗೌಡ ಮಾಲಿ ಪಾಟೀಲ್, ಬಸವರೆಡ್ಡಿ ವಕ್ಕಳದ, ಮೈಬೂಬ್ ಮಾಳೆಕೊಪ್ಪ, ಹಾಗೂ ಇತರರು ಇದ್ದರು.

# ಕೌಶಾಲ್ಯಾಭಿವೃದ್ಧಿ ತರಬೇತಿ ಪಡೆಯಲು ಅರ್ಜಿ ಆಹ್ವಾನ

ಕಲಬುರಗಿ,ಜ.22- ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ ಯೋಜನೆಯಡಿ 2024-25 ನೇ ಸಾಲಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ದಿಮೆದಾರರನ್ನು ಉತ್ತೇಜಿಸಲು ಒಂದು ತಿಂಗಳ ಕಾಲ ಕೌಶಾಲ್ಯಾಭಿವೃದ್ಧಿ (Enter-prenuership) ತರಬೇತಿ ನೀಡಲು ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನ ನೀಡಲಾಗುತ್ತಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ವಿಭಾಗದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ತರಬೇತಿ ಪಡೆಯಲು ಅರ್ಜಿದಾರರು ಕಲಬುರಗಿ ಜಿಲ್ಲೆಯ ನಿವಾಸಿಯಾಗಿರಬೇಕು. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 20 ರಿಂದ 45 ವರ್ಷದೊಳಗಿರಬೇಕು. ಅಭ್ಯರ್ಥಿಗಳು ಲಘು ವಾಹನ ಚಾಲನಾ ಪರವಾನಗಿ ಪಡೆದಿರಬೇಕು. ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರಬಾರದು. ಪರಿಶಿಷ್ಟ ಜಾತಿಯ ಅಭ್ಯರ್ಥಿಗಳ ಗುರಿ 9 ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಗುರಿ 4 ಇರುತ್ತದೆ.

ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ 2025ರ ಜನವರಿ 23 ರಿಂದ ಪಡೆದು ಭರ್ತಿ ಮಾಡಿ ಇತ್ತೀಚಿನ ಭಾವಚಿತ್ರ ಹಾಗೂ ಎಲ್ಲಾ ಅವಶ್ಯಕಗಳನ್ನು ದಾಖಲೆಗಳನ್ನು ಸ್ವಯಂ ದೃಢೀಕರಿಸಿ ದ್ವಿಪ್ರತಿಯಲ್ಲಿ 2025ರ ಜನವರಿ 31ರೊಳಗಾಗಿ ಸದರಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆ, ಆದಾಯ ಮಿತಿ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಛೇರಿ, ಪ್ರವಾಸೋದ್ಯಮ ಇಲಾಖೆ, ಸಾರ್ವಜನಿಕ ಉದ್ಯಾನವನ, ಕಲಬುರಗಿ ವಿಳಾಸಕ್ಕೆ ಸಂಪರ್ಕಿಸಲು ಕೋರಲಾಗಿದೆ.

ಜನವರಿ 24 ರಂದು ಚಾಲಕರ ದಿನಾಚರಣೆ: ಸಾರ್ವಜನಿಕರು

# ನಿಗಮದ ಹೆಮ್ಮೆಯ ಚಾಲಕರಿಗೆ ಶುಭಕೋರಿ ಅಭಿನಂದನೆ ಸಲ್ಲಿಕೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.22-ಇದೇ ಜನವರಿ 24 ರಂದು ಚಾಲಕರ ದಿನಾಚರಣೆ ಪ್ರಯುಕ್ತ ಸಾರ್ವಜನಿಕ ಪ್ರಯಾಣಿಕರು/ವಿದ್ಯಾರ್ಥಿ/ನಿಯರು ಹಾಗೂ ಗ್ರಾಮಗಳ ಗಣ್ಯರು ನಿಗಮದ ಹೆಮ್ಮೆಯ ಚಾಲಕರಿಗೆ ವಿಶೇಷವಾಗಿ ಶುಭಕೋರಿ ಅಭಿನಂದನೆಗಳು ತಿಳಿಸುವ ಮೂಲಕ ಚಾಲಕರ ದಿನಾಚರಣೆ ಆಚರಿಸಬೇಕೆಂದು ಅವರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಲಬುರಗಿ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಸಾರಿಗೆ ಕ್ಷೇತ್ರದಲ್ಲಿ ಪ್ರಯಾಣಿಕರಿಗೆ ಉತ್ತಮ, ಸುರಕ್ಷಿತ ಪ್ರಯಾಣದ ಸೌಲಭ್ಯವನ್ನು ಒದಗಿಸಿ ದೇಶದ ಸಮಗ್ರ ಅಭಿವೃದ್ಧಿಯಲ್ಲಿ ತೊಡಗಿಸಿಕೊಂಡಿರುವ ಚಾಲಕರ ಸಮುದಾಯವು ಬಹಳ ಪ್ರಮುಖ ಪಾತ್ರವನ್ನು ವಹಿಸಿ ನಿಗಮಕ್ಕೆ ಹಾಗೂ ಸಮಾಜಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದ್ದು, ಇಂತಹ ಚಾಲಕರ ಕೊಡುಗೆಯನ್ನು ಗುರುತಿಸಿ ಸಮಾಜದಲ್ಲಿ ಗೌರವಾನ್ವಿತ ಸ್ಥಾನವನ್ನು ನೀಡಿ, ಚಾಲಕರ ಸಮುದಾಯದ ನೈತಿಕತೆಯನ್ನು ಹೆಚ್ಚಿಸಲು ರಸ್ತೆ ಸುರಕ್ಷತಾ ಉಪಕ್ರಮದ ಭಾಗವಾಗಿ ಇದೇ ಜನವರಿ 24 ರಂದು ಚಾಲಕರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

## ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ಕಳೆದಿದೆ.

ನಾನು ಸುಷ್ಮಾ ತಂದೆ ಗೋಪಾಲ ಭಾಲ್ಕಿ ತಾಲೂಕಿನ ಕಾಸರತುಗಾಂವವಾಡಿ ಗ್ರಾಮದ ನಿವಾಸಿಯಾಗಿದ್ದು, ನಾನು ಬಸ್ಸನಲ್ಲಿ ಪ್ರವಾಸ ಮಾಡುತ್ತಿದ್ದಾಗ ದಿನಾಂಕ 15-12-2024 ರಂದು ಬಸವಕಲ್ಯಾಣ ಬಸ್ ನಿಲ್ದಾಣದಲ್ಲಿ ನನ್ನ ಪಿ.ಯು.ಸಿ. ಟಿ.ಸಿ. ಅಂದರೆ ಶಾಲಾ ವರ್ಗಾವಣೆ ಪ್ರಮಾಣ ಪತ್ರ ಕಳೆದು ಕಳೆದು ಹೋಗಿರುತ್ತದೆ. ಯಾರಿಗಾದರು ದೊರಕಿದರೆ ದಯಮಾಡಿ ಈ ಕೇಳಗೆ ಕೊಟ್ಟಿರುವ ವಿಳಾಸಕ್ಕೆ ಸಂಪರ್ಕಿಸಬೇಕೆಂದು ಸಾರ್ವಜನಿಕವಾಗಿ ವಿನಂತಿಸಿಕೊಳ್ಳುತ್ತೇನೆ. ಸುಷ್ಮಾ ತಂದೆ ಗೋಪಾಲ, ಸಾ// ಕಾಸರತುಗಾಂವ ವಾಡಿ. ತಾ// ಭಾಲ್ಕಿ. ಜಿ// ಬೀದರ 585411. ಮೋ; 660081308.

# ಶಿವಣಿ ಪಿಕೆಪಿಎಸ್ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನ ಶಿವಣಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ ನಡೆದಿದೆ. ನೂತನ ಅಧ್ಯಕ್ಷರಾಗಿ ಶಿವಾಜಿ ದತ್ತು ಪಾಟೀಲ್ ಮತ್ತು ಉಪಾಧ್ಯಕ್ಷರಾಗಿ ರಾಜಕುಮಾರ ಮಾಣಿಕರಾವ ಮಡಿವಾಳ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸಭಾಂಗಣದಲ್ಲಿ ಮಂಗಳವಾರ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಶಿವಾಜಿ ದತ್ತು ಪಾಟೀಲ್ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ರಾಜಕುಮಾರ ಮಾಣಿಕರಾವ ಮಡಿವಾಳ ತಲಾ ಒಂದೊಂದೆ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿ ಓಂಕಾರ ಅವರು ಅವಿರೋಧ ಆಯ್ಕೆ ಪ್ರಕಟಿಸಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಬಾಬಶೆಟ್ಟಿ ರೇವಣಪ್ಪ, ಲೋಕೇಶ ರಾಯಶೋಕ, ಶಂಕರ ದಿಲೀಪ, ಜ್ಞಾನೋಬಾ ಧನಾಜಿರಾವ, ಕಲ್ಪನಾ ಅಪ್ಪಾರಾವ, ರುಕ್ಮೀಣಿಬಾಯಿ ವಿಠಲರಾವ, ನರಸಿಂಗ ರಾಮ, ವಾಮನ ರಾಮ, ವಿನೋದ ವಾಮನರಾವ, ರಾಮರತನ ನೀಲಕಂಠ ಸೇರಿದಂತೆ ಹಲವರು ಇದ್ದರು.

# ಅಡುಗೆ ಸಿಬ್ಬಂದಿಯವರಿಗೆ ಒಂದು ದಿನದ ತರಬೇತಿ ಕಾರ್ಯಾಗಾರ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ತಾಲೂಕಿನ ಅಕ್ಷರ ದಾಸೋಹ ಯೋಜನೆ ಅಡಿಯಲ್ಲಿ ಐದು ವಲಯಗಳ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅಡುಗೆ ಸಿಬ್ಬಂದಿಯವರಿಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಮುಡಬಿಯಲ್ಲಿ ನಡೆಸಲಾಯಿತು. ಪ್ರೌಢ ಶಾಲಾ ಶಿಕ್ಷಕರಾದ ಚನ್ನವೀರ ಎಸ್. ಜಮಾದಾರ್ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿ , ಅಡುಗೆಯವರ ಕರ್ತವ್ಯ ಮತ್ತು ಜವಾಬ್ದಾರಿ ಅತ್ಯಂತ ಮಹತ್ವದಾಗಿದೆ. ಅಡುಗೆಯವರು ಈ ನಾಲ್ಕು ಮಹತ್ವದ ಅಂಶಗಳನ್ನು ನೆನಪಿಡಬೇಕೆಂದು ಸಲಹೆ ನೀಡಿದರು. (1) ಸ್ವಯಂ ಸುರಕ್ಷತೆ (2) ಮಕ್ಕಳ ಸುರಕ್ಷತೆ, (3) ಸ್ವಚ್ಛತೆ. (4) ಮಿತವ್ಯಯ. ಅಲ್ಲದೆ ಬಿಸಿ ಊಟ ತಯಾರು ಮಾಡಿ ನೀಡುವದು ಒಂದು ಪವಿತ್ರ ಮತ್ತು ಸೇವಾ ಮನೋಭಾವದ ಕಾಯಕವಾಗಿದೆ. ಹೀಗಾಗಿ ಅತ್ಯಂತ ಕಾಳಜಿಯಿಂದ ಕೆಲಸ ಮಾಡಿ ಎಂದು ಕರೆ ಕೊಟ್ಟರು. ಮುಖ್ಯ ಅತಿಥಿಗಳಾಗಿ ಯೋಜನೆಯ ಸಹಾಯಕ ನಿರ್ದೇಶಕರಾದ ಸಂಜಯಕುಮಾರ ಕಾಂಗೆ ಮಾತನಾಡಿ ಅಡುಗೆಯವರ ಯಾವುದೇ ಸಮಸ್ಯೆಗಳಿದ್ದಲ್ಲಿ ನನ್ನ ಗಮನಕ್ಕೆ ತಂದರೆ ತಕ್ಷಣ ಬಗೆ ಹರಿಸುವದಾಗಿ ತಿಳಿಸಿ, ಇಲಾಖೆಯ ನಿಯಮ ಹಾಗೂ ನಿರ್ದೇಶನಗಳನ್ನು ತಿಳಿಸಿದರು. ನಿಯಮದಂತೆ ಪ್ರತಿ ದಿನ ಮೊಟ್ಟೆ, ಬಾಳೆ ಹಣ್ಣು, ಶೇಂಗಾ ಚಿಕ್ಕಿ, ರಾಗಿ ಮಾಲ್ಟ್ ಹಾಗೂ ಹಾಲು ತಪ್ಪದೆ ಕೊಡಬೇಕೆಂದು ಹೇಳಿದರು. ಸುರಕ್ಷತೆ ಬಗ್ಗೆ ಗ್ಯಾಸ್ ಏಜನ್ಸಿಯವರು ಪ್ರಾಯೋಗಿಕ ಮಾಹಿತಿ ನೀಡಿದರು. ಅಧ್ಯಕ್ಷತೆ ಎಸ್ಡಿಎಮ್ ಸಿ ಅಧ್ಯಕ್ಷರಾದ ದತ್ತಾತ್ರೇಯ ಸೋನಕೆರೆ ವಹಿಸಿದರು. ಅತಿಥಿಗಳಾಗಿ ಮುಖ್ಯ ಗುರುಗಳಾದ ಚಿದಂಬರ ಶೇಖರ್, ಮಾರುತಿ ಕಮಾಲೆ , ಸಿ ಆರ್ ಪಿ ಗಳಾದ ದಿಲೀಪ ಮಂಠಾಳೆ, ಮುಖ್ಯ ಗುರುಗಳು ಹಾಗೂ ಮುಖ್ಯ ಗುರುಗಳ ಸಂಘದ ತಾಲೂಕು ಅಧ್ಯಕ್ಷರಾದ ತುಕಾರಾಮ ಕೆ. ರೊಡ್ಡೆ. ತರಬೇತಿ ಸಂಪನ್ಮೂಲ ವ್ಯಕ್ತಿ ಸೂರ್ಯಕಾಂತ ಭೋಸ್ಲೆ .ಮುಡಬಿ, ಹಾರಕೂಡ. ಕಲಖೋರಾ, ಖೇರ್ಡಾ(ಬಿ), ನಿರ್ಗುಡಿ ವಲಯಗಳ ಬಿಸಿ ಊಟ ಸಿಬ್ಬಂದಿ ಭಾಗವಹಿಸಿದರು. ತುಕಾರಾಮ ಸ್ವಾಗತಿಸಿದರು, ಮಲ್ಲಿಕಾರ್ಜುನ್ ನಿರೂಪಿಸಿದರೆ, ಗೋವಿಂದ ವಂದಿಸಿದರು.



ಬಸವಕಲ್ಯಾಣ :- ಬೆಂಗಳೂರಿನಲ್ಲಿ ರಾಜ್ಯದ ಉಪಮುಖ್ಯಮಂತ್ರಿಗಳು ಹಾಗೂ ಜಲ ಮತ್ತು ಸಂಪನ್ಮೂಲ ಸಚಿವರಾದ ಡಿ.ಕೆ. ಶಿವಕುಮಾರ ಅವರನ್ನು ಬಸವಕಲ್ಯಾಣ ಮತ ಕ್ಷೇತ್ರದ ಜನಪ್ರಿಯ ಶಾಸಕರಾದ ಶರಣು ಸಲಗರ ರವರು ಭೇಟಿ ಮಾಡಿ ತಮ್ಮ ಮತಕ್ಷೇತ್ರದ 18 ಕೆರೆಗಳ ತುಂಬುವ ಯೋಜನೆಯು ಸ್ಥಗಿತಗೊಂಡಿದೆ ಹಾಗೂ ಏತ ನೀರಾವರಿ ಯೋಜನೆಯ ಕಾಮಗಾರಿಯು ಸ್ಥಗಿ-ತಗೊಂಡಿದೆ ಕೂಡಲೇ ಕಾಮಗಾರಿಗಳನ್ನು ಪ್ರಾರಂಭಿಸಲು ಸೂಚಿಸಿ ರೈತರಿಗೆ ಅನುಕೂಲವಾಗುವಹಾಗೆ ಮಾಡಬೇಕೆಂದು ವಿನಂತಿಸಿದರು. ಇದಕ್ಕೆ ಸರಿಯಾಗಿ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿಗಳು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಆದಷ್ಟುಬೇಗ ಕಾಮಗಾರಿಗಳನ್ನು ಪ್ರಾರಂಭಿಸಲು ಸೂಚಿಸುತ್ತೇನೆಂದು ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಸೂರ್ಯಕಾಂತ ಚಿಲ್ಲಾಬಟ್ಟೆ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಶಾಸಕರ ಕಾರ್ಯಕ್ರಮಕ್ಕೆ ಅಧಿಕಾರಿಗಳ ಗೈರು: ಶಿಸ್ತು ಕ್ರಮಕ್ಕೆ ಸೂಚನೆ




ನಮ್ಮ ಮಂಡಲಗಿರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಸೋಂಪುರ ಗ್ರಾಮದಲ್ಲಿ ಶಾಸಕರ ಕಾರ್ಯಕ್ರಮ ಆಯೋಜನೆ ಮಾಡಿರುವುದು ನಮ್ಮ ಗಮನಕ್ಕೆ ಬಂದಿರುವುದಿಲ್ಲ ಹಾಗೂ ಯಾವುದೇ ಅಧಿಕಾರಿಗಳು ಇದರ ಕುರಿತು ನಮಗೆ ಮಾಹಿತಿಯನ್ನು ನೀಡಿರುವುದಿಲ್ಲ ಹಾಗಾಗಿ ನಾವು ಕಾರ್ಯಕ್ರಮಕ್ಕೆ ಬರಲಾಗಲಿಲ್ಲ. ಮಾಹಿತಿ ಸಿಕ್ಕಿದ್ದರೆ ಖಂಡಿತ ಹಾಜರಾಗುತ್ತಿದ್ದೆವು.

**– ನಿಂಗಮ್ಮ ದ್ಯಾಮನ ಗೌಡ್ರು**

**ಅಧ್ಯಕ್ಷರು ಗ್ರಾಮ ಪಂಚಾಯತಿ ಕಾರ್ಯಾಲಯ ಮಂಡಲಗಿರಿ**

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಸೋಂಪುರ, ಸಿದ್ನೆಕೊಪ್ಪ ಹಾಗೂ ನಿಟ್ಟಾಲಿ ಗ್ರಾಮಗಳಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಹಾಗೂ ಶಾಸಕ ಬಸವರಾಜ ರಾಯ-ರೆಡ್ಡಿ ಅವರಿಂದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದ್ದು ಈ ವೇಳೆ ಸೋಂಪುರ ಗ್ರಾಮದಲ್ಲಿ ಆಯೋಜಿಸಿದ್ದ ವೇದಿಕೆ ಕಾರ್ಯಕ್ರಮಕ್ಕೆ ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಗೈರಾಗಿದ್ದು ಸಾರ್ವಜನಿಕರು ಹಾಗೂ ಶಾಸಕರ ಆಕ್ರೋಶಕ್ಕೆ ಕಾರಣವಾಯಿತು ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಶಾಸಕರು ಅಧಿಕಾರಿಗಳಿಗೆ ಸೂಚಿಸಿದ ಪ್ರಸಂಗ ಜರುಗಿತು.

ಸೋಮಪುರ ಗ್ರಾಮದ ವೇದಿಕೆ ಕಾರ್ಯಕ್ರಮ ಆಯೋಜಿಸಿದ್ದ ವೇಳೆಯಲ್ಲಿ ಕೆಲ ಗ್ರಾಮಸ್ಥರು ವಯಕ್ತಿಕ ಶೌಚಾಲಯಕ್ಕಾಗಿ ಶಾಸಕರಲ್ಲಿ ಮನವಿ ಮಾಡಿದರು ಆಗ ಸರ್ಕಾರದಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯ ಅಡಿಯಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಧನಸಹಾಯ ನೀಡಲಾಗುತ್ತಿದ್ದು ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸೂಕ್ತ ಮಾಹಿತಿಯನ್ನು ನೀಡುತ್ತಾರೆ ಎಂದು ಪಂಚಾಯತ ಅಭಿವೃದ್ಧಿ ಅಧಿಕಾರಿಗಳನ್ನು ವೇದಿಕೆಗೆ ಕರೆದಾಗ ಅಧಿಕಾರಿಗಳು ಇಲ್ಲದೆ ಇರುವುದು ಎಲ್ಲರ ಗಮನಕ್ಕೆ ಬಂದಿತು ಕೇವಲ ಅಭಿವೃದ್ಧಿ ಅಧಿಕಾರಿ ಮಾತ್ರವಲ್ಲದೆ ಗ್ರಾಮ ಪಂಚಾಯಿತಿಯ ಯಾವೊಬ್ಬ ಸಿಬ್ಬಂದಿಯೂ ಸಹ ಅಲ್ಲಿ ಹಾಜರಿರದೆ ಇರುವುದು ಹಲವರ ಕೆಂಗಣ್ಣಿಗೆ ಕಾರಣವಾಯಿತು.

ಕಾರ್ಯಕ್ರಮಕ್ಕೆ ಹಲವು ಬಾರಿ ವೇದಿಕೆಯನ್ನು ಅಲಂಕರಿಸುವಂತೆ ಮಂಡಲಗಿರಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಉಪಾಧ್ಯಕ್ಷರನ್ನು ಆಹ್ವಾನಿಸಿದರು ಸಹ ಸ್ಥಳದಲ್ಲಿ ಅಧ್ಯಕ್ಷರಾಗಲಿ ಉಪಾಧ್ಯಕ್ಷರಾಗಲಿ ಹಾಗೂ ಅಭಿವೃದ್ಧಿ ಅಧಿಕಾರಿಗಳಾಗಲಿ ಸಿಬ್ಬಂದಿ ವರ್ಗದವರು ಯಾರು ಇಲ್ಲದೆ ಇರುವುದು ಕಂಡುಬಂದಿತು ಮತ್ತು ಸೋಂಪುರ ಗ್ರಾಮದ ಸದಸ್ಯರು ಮಾತ್ರ ವೇದಿಕೆ ಹತ್ತಿರ ಉಪಸ್ಥಿತರಿದ್ದರು.

# ಬಿಸಿಯೂಟದಲ್ಲಿ ಸ್ವಚ್ಛತೆಗೆ ಆದ್ಯತೆ ಇರಲಿ : ಸೋಮನಾಥ ತರನಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.22:ಶಾಲಾ ಮಕ್ಕಳಿಗೆ ಉತ್ತಮ ಪೋಷಕಾಂಶ ಭರಿತ ಆಹಾರವನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮದ್ಯಾಹ್ನದ ಬಿಸಿಯೂಟ ಯೋಜನೆ ಆರಂಭಿಸಿದೆ. ಅಡುಗೆ ಸಿಬ್ಬಂದಿಯವರು ಬಿಸಿಯೂಟದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಎಫ್.ಎಸ್.ಎಸ್.ಐ ತಾಲೂಕು ಅಧಿಕಾರಿ ಸೋಮನಾಥ ತರನಳ್ಳಿ ಹೇಳಿದರು.

ತಾಲೂಕಿನ ಕಲವಾಡಿ ಗ್ರಾಮದ ಮಹಾತ್ಮಾಗಾಂಧಿ ಪ್ರೌಢಶಾಲಾಲೆಯಲ್ಲಿ ಜಿ.ಪಂ.ಬೀದರ, ಶಲಾ ಶಿಕ್ಷಣ ಇಲಾಖೆ ವತಿಯಿಂದ ಬುಧವಾರ ನಡೆದ ಪ್ರಧಾನ ಮಂತ್ರಿ ಪೋಷಣ ಶಕ್ತಿ ನಿರ್ಮಾಣ, ಮದ್ಯಾಹ್ನ ಬಿಸಿಯೂಟ ಯೋಜನೆಯ ಅಡುಗೆ ಸಿಬ್ಬಂದಿಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಶಾಲಾ ವಿದ್ಯಾರ್ಥಿಗಳಿಗೆ ಪೋಷಕಾಂಶ ಭರಿತ ಆಹಾರವನ್ನು ಒದಗಿಸುವ ದೃಷ್ಟಿಯಿಂದ ಸರ್ಕಾರವರು ಊಟದಲ್ಲಿ ತೊಗರಿಬೇಳೆ, ಸಂಸ್ಕರಿತ ತಾಳೆ ಎಣ್ಣೆ ಮತ್ತು ಕಡಲೆ ಬೇಳೆಗಳನ್ನೊಳಗೊಂಡ ಆಹಾರವನ್ನು ಒದಗಿಸುತ್ತಿದ್ದು, ಅವುಗಳೊಂದಿಗೆ ಮಕ್ಕಳಿಗೆ ಕೆನೆಭರಿತ ಹಾಲು, ರಾಗಿ ಮಾಲ್ಟ್, ಮೊಟ್ಟೆ, ಬಾಳೆಹಣ್ಣುಗಳೂ ನೀಡುತ್ತಲಿದೆ. ಸರ್ಕಾರದ ಇಷ್ಟೆಲ್ಲ ಯೋಜನೆಗಳು ಸರಿಯಾಗಿ ನಡೆಯಬೇಕಾದರೆ ಅಡುಗೆ ಸಿಬ್ಬಂದಿಗಳು ಸ್ವಚ್ಛತೆಗೆ ಆದ್ಯತೆ ನೀಡಿ, ಮಕ್ಕಳಿಗೆ ರುಚಿಭರಿತ ಆಹಾರ ತಯ್ಯಾರಿಸಿ ನೀಡಬೇಕು ಎಂದು ಸಲಹೆ ನೀಡಿದರು.

ಅಕ್ಷರದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲಿನಾಥ ಸಜ್ಜನ್ ಮಾತನಾಡಿ, ಶಾಲಾ ಮಕ್ಕಳ ದಾಖಲಾತಿ ಮತ್ತು ಹಾಜರಾತಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಮದ್ಯಾಹ್ನದ ಬಿಸಿಯೂಟ ಯೋಜನೆ ಪ್ರಾರಂಭಿಸಿದೆ. ಈ ಯೋಜನೆಯಿಂದ ವಿದ್ಯಾರ್ಥಿಗಳು ಮಧ್ಯ, ಮಧ್ಯೆ ಶಾಲೆಯನ್ನು ತೊರೆಯದಂತೆ ತಡೆಯಲಾಗುವುದು. ಪೌಷ್ಠಿಕಾಂಶ ಹೆಚ್ಚಿಸುವುದರ ಮೂಲಕ ಶಲಾ ಮಕ್ಕಳ ಆರೋಗ್ಯ ಅಭಿವೃದ್ದಿಗೊಳ್ಳುವುದು. ಮುಖ್ಯ ಅಡುಗೆಯವರು ವಿದ್ಯಾರ್ಥಿಗಳಿಗೆ ರುಚಿ, ರುಚಿಯಾದ ಅಡುಗೆ ನೀಡುವುದರೊಂದಿಗೆ ಈ ಯೋಜನೆ ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಹೇಳಿದರು.

ಅಗ್ನಿಶಾಮಕ ಠಾಣೆಯ ಅಧಿಕಾರಿ ದತ್ತಾತ್ರಿ ಮಾತನಾಡಿ, ಅಡುಗೆ ಸಿಬ್ಬಂದಿಗಳು ಅಡುಗೆ ಅನೀಲವನ್ನು ಜಾಗೃತೆಯಿಂದ ಬಳಸಬೇಕು. ಅಗ್ನಿ ಅವಘಡ ಸಂಭವಿಸದಂತೆ ಎಚ್ಚರವಹಿಸಬೇಕುಎ ಎಂದು ಹೇಳಿದರು. ಮುಖ್ಯ ಶಿಕ್ಷಕ ಕಿರಣಕುಮಾರ ಭಾಟಸಾಂಗವಿ ಅಧ್ಯಕ್ಷತೆ ವಹಿಸಿದ್ದರು. ಆರೋಗ್ಯ ಇಲಾಖೆಯ ಸೂರ್ಯಕಾಂತ, ಬಸವರಾಜ, ಆಶಾಲತಾ ರವರು ವಿವಿಧ ವಿಷಯಗಳ ಮೇಲೆ ವಿಶೇಷ ಉಪನ್ಯಾಸ ಮಂಡಿಸಿದರು. ಪ್ರೌಢಶಾಲಾ ಸಹಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತಾತ್ರಿ ಕಾಟಕರ ಮಾತನಾಡಿ, ಅಡುಗೆ ಸಿಬ್ಬಂದಿಗಳ ಕಾರ್ಯ ಪುಣ್ಯದ ಕೆಲಸವಾಗಿದೆ. ಕಡಿಮೆ ಸಂಬಳ ಪಡೆದು ಮಕ್ಕಳಿಗೆ ಊಟ ಬಡಿಸುವ ಕಾರ್ಯ ಮೆಚ್ಚುವಂತಹದ್ದಾಗಿದೆ ಎಂದು ಅಡುಗೆ ಸಿಬ್ಬಂದಿಗಳಿಗೆ ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲಾ ಮುಖ್ಯಶಿಕ್ಷಕ ಅಶೋಕಕುಮಾರ ಬಿರಾದಾರ, ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಸಿಆರ್‌ಪಿ ಸಂತೋಷ.ಡಿ, ಅಶೋಕ ಕಲ್ಯಾಣೆ, ಚನ್ನಬಸಪ್ಪ ತಳವಾಡೆ, ಸುಭಾಷ ಮೂಲಗೆ, ಅಕ್ಷರ ದಾಸೋಹ ಯೋಜನೆಯ ಸಿಬ್ಬಂದಿ ಭೀಮರಾವ, ಅಬ್ದುಲಗಣಿ, ತೊಟಗಾರಿಕೆ ಇಲಾಖೆಯ ಪ್ರಶಾಂತ ಸಿರಗೆರೆ ಉಪಸ್ಥಿತರಿದ್ದರು.

ಸಂತೋಷ ಧಬಾಲೆ ಸ್ವಾಗತಿಸಿದರು. ಸುಭಾಷ ಮೂಲಗೆ ನಿರೂಪಿಸಿದರು. ಅಬ್ದುಲ್ ಗನಿ ವಂದಿಸಿದರು.

# ವಳಸಂಗ ಪಿಕೆಪಿಎಸ್ ಅಧ್ಯಕ್ಷರಾಗಿ ಮಹೇಶ ಆಯ್ಕೆ



ಮಲ್ಲಮ್ಮನುಡಿ ವಾರ್ತೆ ಬೀದರ, ಜ.22 : ಭಾಲ್ಕಿ ತಾಲೂಕಿನ ವಳಸಂಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ನಾಗರಾಳ ಗ್ರಾಮದ ಯುವ ಮುಖಂಡ ಮಹೇಶ ಸಿದ್ರಾಮ್ ಬಿರಾದಾರ ಹಾಗೂ ಉಪಾಧ್ಯಕ್ಷರಾಗಿ ವಳಸಂಗದ ವಸಂತ ಬಿರಾದಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದಲ್ಲಿ ಸೋಮವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಏಕೈಕ ನಾಮಪತ್ರ ಸಲ್ಲಿಕೆಯಾಗಿದ್ದವು. ಹೀಗಾಗಿ ಚುನಾವಣಾಧಿಕಾರಿ ಆಯ್ಕೆಯನ್ನು ಅಧಿಕೃತವಾಗಿ ಪ್ರಕಟಿಸಿದರು.

ರೈತರ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಸರ್ಕಾರದ ಯೋಜನೆಗಳನ್ನು ಅರ್ಹರಿಗೆ ತಲುಪಿಸಲು ಪ್ರಯತ್ನಿಸುವೆ. ಆ ಮೂಲಕ ಸಹಕಾರ ಸಂಘವನ್ನು ಬಲಪಡಿಸಲು ಶ್ರಮಿಸುತ್ತೇನೆ ಎಂದು ಮಹೇಶ ಬಿರಾದಾರ ಭರವಸೆ ನೀಡಿದರು.

# ತರಕಾರಿ ಮಾರುಕಟ್ಟೆ ದುರ್ನಾತ ಹೊನ್ನಪ್ಪ ಗಂಗನಾಳ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ:ಜ.22: ನಗರದ ತರಕಾರಿ ಮಾರುಕಟ್ಟೆ ಅವಸ್ಥೆಯ ಗೂಡಾಗಿದ್ದು. ತ್ಯಾಜ್ಯವನ್ನು ಬೇಕಾಬಿಟ್ಟಿಯಾಗಿ ಎಸೆಯಲಾಗುತ್ ದೆ ಇಡೀ ಪ್ರದೇಶ ದುರ್ವಾಸನೆಯಿಂದ ಕೂಡಿದೆ. ತಕ್ಷಣವೇ ಸ್ವಚ್ಛತೆ ನಮ್ಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರ ಸಭೆ ಅಧಿಕಾರಿಗಳಿಗೆ ನಾನಾಸಾಹೇಬ್ ಮಡಿವಾಳಕರ್ ಅವರಿಗೆ ದಲಿತ ಸಂಘರ್ಷ ಸಮಿತಿ ಮುಖಂಡರು ಮನವಿ ಪತ್ರ ಸಲ್ಲಿಸಿದರು. ರಾಜ್ಯ ಹೆದ್ದಾರಿಗೆ ಹೊಂದಿಕೊಂಡು ತರಕಾರಿ ಮಾರಾಟ ಮಾಡುತ್ತಿದ್ದಾರೆ ಇದರಿಂದ ಪಾದಾಚಾರಿಗಳಿಗೆ ಹಾಗೂ ವಾಹನ ಸವಾರಿಗೆ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಅಲ್ಲದೆ ಬಸವೇಶ್ವರ ವೃತ್ತ ಬಳಿ ಕೆಟ್ಟ ನಿಂತಿರುವ ಸಿಗ್ನಲ್ ದುರಸ್ತಿಗೊಳಿಸಬೇಕು ಎಂದು ಮುಖಂಡರು ಆಗ್ರಹಿಸಿದರು.

ಸಂಘಟನಾ ರಾಜ್ಯ ಘಟಕದ ಕಾರ್ಯದರ್ಶಿ ಹೊನ್ನಪ್ಪ ಗಂಗನಾಳ ಸುಭಾಷ್ ತಳವಾರ್. ಚಂದ್ರಶೇಖರ್ ಗುತ್ತೇದಾರ್. ಮಾಳಪ್ಪ ಸಲ್ಲಾಪುರ್. ಪಂಡಿತ್ ಮಡ್ನಾಳ್. ಲಕ್ಷ್ಮಣ್ ಗೋಗಿ. ಮಲ್ಲ ರೆಡ್ಡಿ ಉಪಸ್ಥಿತರಿದ್ದರು.

# ಇಂದು ಕಾಂಗ್ರೆಸ್ ಕಚೇರಿಗೆ ಸಚಿವ ಜಾರ್ಜ್ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 22 : ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಗುರುವಾರ (ಜ.23) ಬೆಳಿಗ್ಗೆ 10ಕ್ಕೆ ಇಲ್ಲಿಯ ಶಿವನಗರದಲ್ಲಿ ಇರುವ ಕಾಂಗ್ರೆಸ್ ಜಿಲ್ಲಾ ಘಟಕದ ಕಚೇರಿಗೆ ಭೇಟಿ ನೀಡಲಿದ್ದಾರೆ.

ಜಾರ್ಜ್ ಅವರು ಕಾರ್ಯಕರ್ತರ ಅಹವಾಲು ಆಲಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಮಾಜಿ ಸಚಿವ ರಾಜಶೇಖರ ಪಾಟೀಲ ಹುಮನಾಬಾದ್, ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ, ಭೀಮರಾವ್ ಪಾಟೀಲ, ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಹಾಗೂ ಮುಖಂಡರು ಉಪಸ್ಥಿತರಿರಲಿದ್ದಾರೆ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ ತಿಳಿಸಿದ್ದಾರೆ.

ಪಕ್ಷದ ಮುಖಂಡರು, ಚುನಾಯಿತ ಪ್ರತಿನಿಧಿಗಳು, ಜಿಲ್ಲಾ, ತಾಲ್ಲೂಕು, ಮುಂಚೂಣಿ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

# ಗಣರಾಜ್ಯೋತ್ಸವ ಸಂಭ್ರಮದಿಂದ ಆಚರಣೆ ಮಾಡಿ:ಅಮಿತಕುಮಾರ ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.22: ಗಣರಾಜ್ಯೋತ್ಸವ ಸಮಾರಂಭವನ್ನು ಸಂಭ್ರಮದಿಂದ ಆಚರಿಸಲು ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ತಹಸೀಲ್ದಾರ್ ಅಮಿತ ಕುಮಾರ ಕುಲಕರ್ಣಿ ಸೂಚಿಸಿದರು.

ಪಟ್ಟಣದ ತಹಸಿಲ ಕಚೇರಿ ಸಭಾಂಗಣದಲ್ಲಿ 76ನೇ ಗಣರಾಜ್ಯೋತ್ಸವ ಆಚರಣೆ ನಿಮಿತ್ಯ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಮಾತನಾಡಿದ ಅವರು, ಸಮಾರಂಭವನ್ನು ಆಚರಿಸಲಾಗುವುದು. ಜ.26 ರಂದು ಬೆಳಗ್ಗೆ 8.45 ಗಂಟೆಗೆ ಧ್ವಜಾ ರೋಹಣ ನೆರವೇರಿಸಿ, ವೇದಿಕೆ ಕಾರ್ಯಕ್ರಮ ಆರಂಭಿಸಲಾಗುವುದು ಎಂದರು.

ಪ್ರೌಢ ಶಾಲೆ ಮಕ್ಕಳಿಗಾಗಿ ಪ್ರಬಂಧ ಹಾಗೂ ಭಾಷಣ ಸ್ಪರ್ಧೆ ಆಯೋಜಿಸಬೇಕು. ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿದ ಮಕ್ಕಳನ್ನು ತಾಲೂಕು ಆಡಳಿತ ದಿಂದ ಸನ್ಮಾನಿಸಲಾಗುವುದು. ವಿವಿಧ ಶಾಲಾ ಮಕ್ಕಳಿಂದ ಆಕರ್ಷಕ ಸಾಂಸ್ಕೃತಿಕ ಕಾರ್ಯ ಕ್ರಮ ನಡೆಸಿ ಕೊಡಲು ಕ್ರಮವಹಿಸಬೇಕು ಎಂದು ನಿರ್ದೇಶನ ನೀಡಿದರು.

ಉಪನ್ಯಾಸ ನೀಡಲು ಮುಖ್ಯ ಶಿಕ್ಷಕಿ ಸವಿತಾ ಬಿರಾದಾರ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಪಂ ಸಹಾಯಕ ನಿರ್ದೇಶಕ ಹಣಮಂತರಾಯ ಕೌಟಗೆ, ಗ್ರಾಪಂ ಅಧ್ಯಕ್ಷೆ ಸುಶೀಲಾ ಸಜ್ಜನ, ಸಿಪಿಐ ಅಮರೆಪ್ಪ ಎಸ್, ಪಿಎಸ್‌ಐ ಚಂದ್ರ ಶೇಖರ ನಿರ್ಣೆ, ಕಸಾಪ ತಾಲೂಕು ಅಧ್ಯಕ್ಷ ಪ್ರಶಾಂತ ಮಠಪತಿ, ಪ್ರೊ.ಎಸ್. ಎನ್.ಶಿವಣ ಕರ, ಡಾ.ಎಸ್.ಎಸ್.ಮೈನಾಳೆ, ವಿಠಲರಾವ ಪಾಟೀಲ್, ಸಿಡಿಪಿಒ ಇಮಲಪ್ಪ ಡಿ, ಆಹಾರ ಇಲಾಖೆ ಶಿರಸ್ತೇದಾರ ಶಿವಾನಂದ ಪಾಟೀಲ್, ಸಮುದಾಯ ಆರೋಗ್ಯ ಕೇಂದ್ರದ ಅಡಳಿತಾಧಿಕಾರಿ ಶ್ರೀಮಂತ, ವಿವಿಧ ಶಾಲೆ ಮುಖ್ಯಸ್ಥರು, ವಿವಿಧ ಇಲಾಖೆ ಅಧಿಕಾರಿಗಳು, ಗ್ರಾಮದ ಪ್ರಮುಖರು ಇದ್ದರು.

# ಅಂಬಿಗರ ಚೌಡಯ್ಯನವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಜ.22: ತಾಲೂಕಿನ ಖತಗಾಂವ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಶಿಕ್ಷಕಿ ಮಲ್ಲಮ್ಮಾ ಕಸ್ತೂರೆ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ನಿಜಶರಣ ಅಂಬಿಗರ ಚೌಡಯ್ಯನವರ ಆದರ್ಶಗಳನ್ನು ನಾವೆಲ್ಲರೂ ಪಾಲಿಸಬೇಕು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು. ಚೌಡಯ್ಯನವರ ವಚನಗಳು ನಮ್ಮೆಲ್ಲರಿಗೂ ದಾರಿದೀಪವಾಗಿವೆ ಎಂದು ಹೇಳಿದರು. ಶಿಕ್ಷಕರಾದ ಸಿದ್ರಾಮಪ್ಪಾ ಬಿರಾದಾರ, ವಿಜಯಕುಮಾರ, ಮಹಾದೇವ ಬಿರಾದಾರ, ರಚಿತಾ ಗುಡಮೆ, ಚಾಮುಂಡಿ ಪಾಟೀಲ್ ಹಾಗೂ ಮಕ್ಕಳು ಇದ್ದರು.

# ಮೋಹನ್ ಭಾಗವತ್ ಹೇಳಿಕೆ ಖಂಡನೀಯ : ಮಂಗಲಗಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 22 : ರಾಮಂದಿರ ಪ್ರತಿಷ್ಠಾಪನಾ ದಿನವನ್ನು ಸ್ವಾತಂತ್ರ್ಯ ದಿನವನ್ನಾಗಿ ಆಚರಿಸಲು ಆರ್ ಎಸ್ ಎಸ್ ಮುಖಂಡ ಮೋಹನ್ ಭಾಗವತ್ ಕರೆ ಕೊಟ್ಟಿರುವದು ದೇಶದ ಸಾರ್ವಭೌಮತ್ವ ಹಾಗೂ ಒಗ್ಗಟ್ಟು ವ್ಯವಸ್ಥೆಗೆ ಧಕ್ಕೆ ತರುವ ವಿಷವಾಗಿದೆ ಎಂದು ಬೀದರ್ ದಕ್ಷಿಣ ಘಟಕದ ಲೋಕೇಶ್ ಮಂಗಲಗಿ ವಕ್ತಾರ ಆರೂಪಿಸಿದ್ದಾರೆ.

ನೂರಾರು ವರ್ಷಗಳ ಕಾಲ ಬ್ರಿಟಿಷರ ಕಪಿ ಮುಷ್ಠಿಯಲ್ಲಿದ್ದ ಭಾರತ ದೇಶದ ಸ್ವತಂತ್ರಕ್ಕಾಗಿ ತ್ಯಾಗ ಬಲಿದಾನ ಮಾಡಿ, ಮಹಾತ್ಮ ಗಾಂಧೀಜಿ, ಡಾ. ರಾಜೇಂದ್ರಪ್ರಸಾದ್, ಸರ್ದಾರ್ ವಲ್ಲಭಭಾಯ್ ಪಟೇಲ್, ಜವಹರಲಾಲ್ ನೆಹರು, ಲಾಲ್ ಬಹದ್ದೂರ್ ಶಾಸ್ತ್ರಿ, ಮೌಲನ ಅಬ್ದುಲ್ ಆಜಾದ್,



ಸುಭಾಷ್ ಚಂದ್ರಬೋಸ್‌ರವರು ಸೆರೆವಾಸ ಅನುಭವಿಸಿದ್ದರು. ಲಕ್ಷಾಂತರ ದೇಶ ಭಕ್ತರು ಬಲಿದಾನವಾಗಿದ್ದಾರೆ.

ದೇಶಕ್ಕೆ ಸ್ವಾತಂತ್ರ್ಯ ಬಂದಿದ್ದು ಯಾರಿಂದ ಎಂಬ ಬಗ್ಗೆ ಮಾಹಿತಿ ತಿಳಿಯದೆ ಸ್ವಾರ್ಥಕ್ಕಾಗಿ ಹೇಳಿಕೆ ನೀಡಿರುವುದು ದೇಶದ್ರೋಹಕ್ಕೆ ಸಮಾನವೆಂದು ದೇಶದ ಜನತೆ ಭಾವಿಸಿದ್ದಾರೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಅವರು ಆರೋಪಿಸಿದ್ದಾರೆ.

# ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.22:ಮನೆ ಬಾಗಿಲಿಗೆ ಬರುವ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ನೀಡುವ ಆರೋಗ್ಯ ಕುರಿತ ಸಲಹೆ, ಸೂಚನೆಗಳನ್ನು ಪಾಲಿಸಿ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ಶಾಲಾ ಮುಖ್ಯಶಿಕ್ಷಕ ಸಂಗಪ್ಪ ಹುನಗುಂದ ಹೇಳಿದರು. ತಾಲೂಕಿನ ಗುಂಡನಪಲ್ಲೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿರೂರಿನ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಶಾಲಾ ಮಕ್ಕಳ ಆರೋಗ್ಯ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಜನರು ತಮಗೆ ಯಾವುದೇ ಸಮಸ್ಯೆ ಉಂಟಾದಲ್ಲಿ ತಕ್ಷಣ ಆರೋಗ್ಯ ಕೇಂದ್ರಗಳಿಗೆ ತೆರಳಿ ಚಿಕಿತ್ಸೆ ಪಡೆಯುವುದರಿಂದ ರೋಗ ಉಲ್ಬಣ ತಡೆಯಬಹುದಾಗಿದ್ದು, ಗ್ರಾಮಗಳಿಗೆ ಬರುವ ಆರೋಗ್ಯ ಇಲಾಖೆ ಸಿಬ್ಬಂದಿಯನ್ನು ಕಂಡು ಚಿಕಿತ್ಸೆಗೆ ಮಾರ್ಗದರ್ಶನ ಪಡೆದುಕೊಳ್ಳಬೇಕು ಎಂದು ಸಂಗಪ್ಪ ಹೇಳಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎಸ್. ಅಂಗಡಿ, ಆರೋಗ್ಯ ಇಲಾಖೆಯ ರಾಷ್ಟ್ರೀಯ ಕಾರ್ಯಕ್ರಮಗಳ ಕುರಿತು ಮಕ್ಕಳಿಗೆ ತಿಳಿಸಿ, ವೈಯಕ್ತಿಕ ಸ್ವಚ್ಛತೆ, ಸುತ್ತ ಮುತ್ತಲಿನ ಪರಿಸರ ಕಾಪಾಡಿಕೊಳ್ಳಬೇಕು. ಮಲೇರಿಯಾ, ಡೆಂಗ್ಯು, ಚಿಕನ್ ಗುನ್ಯಾದಂತಹ ರೋಗಗಳ ವಿಷಯದಲ್ಲಿ ತತಕ್ಷಣ ಚಿಕಿತ್ಸೆ ಪಡೆದುಕೊಳ್ಳುವಂತೆ ಸಲಹೆ ನೀಡಿದರು.

ಶಿಕ್ಷಕರಾದ ಆರ್.ಬಿ.ಅಂಟರತಾನಿ, ಪರಶುರಾಮ ಎಂ., ಭಾರತಿ ಗಣಿಯಾರ, ಅನಿತಾ ಪಾಟೀಲ, ಸುನಿತಾ ಮಾಸ್ತಿ, ವಿದ್ಯಾರ್ಥಿಗಳು ಇದ್ದರು.

# ಚೌಡಯ್ಯನವರ ವಚನಗಳು ಅತ್ಯಂತ ಶ್ರೇಷ್ಠ :ಶರಣು ನಾಯ್ಕಲ್


ಮಲ್ಲಮ್ಮ ನುಡಿ ವಾರ್ತೆ

ಶಹಾಪುರ :ಜ.22: ನಗರದ ಹೃದಯ ಭಾಗದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ದೊರೆಗುಡ್ಡ ಉಕ್ಕಿನಾಳ ಶಾಲೆಯಲ್ಲಿ ಹಮ್ಮಿಕೊಂಡಿದ್ದ ನಿಜಶರಣ ಶ್ರೀ ಅಂಬಿಗರ ಚೌಡಯ್ಯನವರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಾಂಶುಪಾಲರಾದ ಶ್ರೀ ಶರಣು ನಾಯ್ಕಲ್ ಜಯಂತಿ ಕುರಿತು ಮಾತನಾಡಿದರು. ನಿಜಶರಣ ಅಂಬಿಗರ ಚೌಡಯ್ಯನವರ ವಚನಗಳು ಇಂದಿಗೂ ಸಮಾಜಕ್ಕೆ ಅತ್ಯಂತ ಶ್ರೇಷ್ಠ ವಚನಗಳು ನಮಗೆ ಮಾದರಿಯಾಗಿವೆ ಶಿಕ್ಷಣದಿಂದ ಮಾತ್ರ ಮಕ್ಕಳ ಭವಿಷ್ಯ ಉಜ್ವಲಗೊಳ್ಳಲು ಸಾಧ್ಯ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಹೇಳಿದರು



.ಕಾರ್ಯಕ್ರಮದಲ್ಲಿ ಇನ್ನೊಬ್ಬ ಶಿಕ್ಷಕರು ಸಾಹಿತಿಗಳಾದ ಮಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ ಮಾತನಾಡುತ್ತಾ ಇಂದಿನ ದಿನಗಳಲ್ಲಿ ಪ್ರತಿಯೊಬ್ಬರು ತಪ್ಪದೆ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು ಎಂದರು ನಿಜಶರಣ ಅಂಬಿಗರ ಚೌಡಯ್ಯನವರು ಜಾತಿ ವ್ಯವಸ್ಥೆಯ ವಿರುದ್ಧ ಹೋರಾಡುವುದರ ಜೊತೆಗೆ ಸಮಾಜದಲ್ಲಿ ತಮ್ಮ ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿ ಸಮ ಸಮಾಜ ನಿರ್ಮಾಣದ ಕನಸನ್ನು ಕಂಡಿದ್ದರು ವಿದ್ಯಾರ್ಥಿಗಳು ನಿಜಶರಣ ಅಂಬಿಗರ ಚೌಡಯ್ಯನವರ ತತ್ವ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

# ಜ.28 ಕಂದಕೂರಿನಲ್ಲಿ ಮಾಜಿ ಶಾಸಕ ಲಿಂ. ನಾಗನಗೌಡ ಕಂದಕೂರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಬರುವ ಜ. 28 ಮಂಗಳವಾರ ಬೆಳಿಗ್ಗೆ 11ಕ್ಕೆ ಗುರುಮಿಠಕಲ್ ತಾಲ್ಲೂಕಿನ ಕಂದಕೂರ ಗ್ರಾಮದಲ್ಲಿ ಮಾಜಿ ಶಾಸಕ ಲಿಂ. ನಾಗನಗೌಡ ಕಂದಕೂರ ಅವರ ಪ್ರಥಮ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕಂದಕೂರ ಕುಟುಂಬದ 17 ಎಕರೆ ಜಮೀನಿನಲ್ಲಿ ಅವರ ಕುಟುಂಬ ಹಾಗೂ ಅಭಿಮಾನಿ ಬಳಗದಿಂದ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮೊದಲು ಅವರ ಸ್ಮಾರಕಕ್ಕೆ ವಿಶೇಷ ಪೂಜೆ ಕೈಂಕರ್ಯಗಳು ನೆರವೇರಿದ ನಂತರ 5 ಗೋದಾನಗಳ ಮಾಡುವ ಮೂಲಕ ಸ್ಮಾರಕ ಉದ್ಘಾಟಿಸಲಾಗುವುದು,

ಈ ಪವಿತ್ರ ಕಾಯಕ್ರಮದಲ್ಲಿ ತುಮಕೂರ ಸಿದ್ದಗಂಗಾ ಮಠದ ಪೀಠಾಧಿಪತಿಗಳಾದ ಸಿದ್ದಲಿಂಗ ಮಹಾಸ್ವಾಮಿಜಿ, ಅಬ್ಬೆತುಮಕೂರಿನ ಡಾ. ಗಂಗಾಧರ ಶಿವಾಚಾರ್ಯ ಮಹಾಸ್ವಾಮಿಜಿ, ನಾಲವಾರದ ಸಿದ್ದತೋಟೇಂದ್ರ ಶಿವಾಚಾರ್ಯ ಸ್ವಾಮಿಜಿ, ದೇವಾಪೂರದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಜಿ, ಸೊನ್ನದ ಡಾ, ಶಿವಾನಂದ ಮಹಾಸ್ವಾಮಿಜಿ, ಬೆಳಗಾವಿಯ ಮುಕ್ತಿಮಠದ ಶಿವಸಿದ್ದ ಸೋಮೇಶ್ವರ ಸ್ವಾಮಿಜಿ, ರಸ್ತಾಪುರದ ಶರಭೇಶ್ವರ ಸ್ವಾಮಿಜಿ, ಗುರುಮಿಠಕಲ್ ಖಾಸಾ ಮಠದ ಶಾಂತವೀರ ಮಹಾಸ್ವಾಮಿಜಿ, ಹೆಡಗಿಮದ್ರಾದ ಮಲ್ಲಿಕಾರ್ಜುನ ಶಿವಾಚಾರ್ಯರು, ನೇರಡಗುಂಬದ ಪಂಚಮಸಿದ್ದಲಿಂಗ ಮಹಾಸ್ವಾಮಿಜಿ, ಯಲ್ಹೇರಿಯ ಕೊಟ್ಟೂರೇಶ್ವರ ಶಿವಾಚಾರ್ಯ ಸ್ವಾಮಿಜಿ, ತಂಗಡಪಲ್ಲಿಯ ಶಿವಯೋಗಿ ಮಹಾಸ್ವಾಮಿ, ಶಹಾಪುರದ ಚರಬಸವೇಶ್ವರ ಸಂಸ್ಥಾನ ಮಠದ ಬಸವಯ್ಯ ಶರಣರು, ಗಿರಿಮಠ ಲಕ್ಷ್ಮೀಪುರದ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಶಹಾಪುರದ ಸೂಗೂರೇಶ್ವರ ಮಹಾಸ್ವಾಮಿಜಿ, ಕನ್ಯೆಕೋಳುರದ ಚೆನ್ನವೀರ ಶಿವಾಚಾರ್ಯ ಮಹಾಸ್ವಾಮಿಜಿ, ಚೇಗುಂಟಾದ ಡಾ. ಕ್ಷೀರಲಿಂಗ ಮಹಾಸ್ವಾಮಿಜಿ, ಕಡೇಚೂರದ ಗುರುಮೂರ್ತಿ ಶಿವಾಚಾರ್ಯ ಸ್ವಾಮಿಜಿ, ಗದ್ದುಗೆಮಠ ಅಳ್ಳಳ್ಳಿ ನಾಗಪ್ಪಯ್ಯ ಮಹಾಸ್ವಾಮಿಜಿ, ದಾಸಬಾಳ ಮಠ ಯಾದಗಿರಿಯ ವೀರೇಶ್ವರ ಮಹಾಸ್ವಾಮಿಜಿ, ಭಾಗವಹಿಸಿ ಆಶೀರ್ವಚನ ನೀಡುವರು ಎಂದು ತಿಳಿಸಿದರು.

ಅದರಂತೆ ಸೂಗೂರ .ಎನ್ ಬೋಜಲಿಂಗೇಶ್ವರ ಮಠದ ಹಿರಗಪ್ಪತಾತನವರು, ಕೌಳೂರದ ಸಿದ್ದರಾಮದೇವರು, ಹಲ್ಕರ್ಟಿಯ ಮುನಿಂದ್ರ ಶಿವಾಚಾರ್ಯ ಸ್ವಾಮಿಜಿ, ಹೊನಗೇರಾದ ನಿಜಲಿಂಗ ಮಹಾಸ್ವಾಮಿಜಿ ಗುಂಡಗುರ್ತಿ, ದಿಗ್ಗಾಂವ್‌ನ ಸಿದ್ದವೀರ ಶಿವಾಚಾರ್ಯ ಮಹಾಸ್ವಾಮಿಜಿ, ಬೆನಕನಹಳ್ಳಿಯ ಅಭಿನವ ಕೇದಾರಲಿಂಗ ಶಿವಾಚಾರ್ಯರು, ಹಂದರಕಿಯ ಲಿಂಗಪ್ಪತಾತನವರು, ಯಾದಗಿರಿ ಏಕದಂಡಗಿ ಮಠದ ಕುಮಾರ ಮಹಸ್ವಾಮಿಜಿ, ಸೇಡಂನ ಪಂಚಾಕ್ಷರಿ ಮಹಾಸ್ವಾಮಿಜಿ, ಜಾಕನಳ್ಳಿಯ ಗವಿಯಪ್ಪ ತಾತನವರು, ಅರಕೇರಾ (ಬಿ)ನ ಗುರುಲಿಂಗ ಮಹಾಸ್ವಾಮಿಜಿ, ಕೆಂಭಾವಿ ಹಿರೇಮಠದ ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಜಿ, ಸಗರದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಜಿ, ಗೊಬ್ಬೂರವಾಡಿಯ ಬಳಿರಾಮ ಮಹಾರಾಜರು, ಸೈದಾಪೂರದ ಸೋಮೇಶ್ವರಾನಂದ ಮಹಾಸ್ವಾಮಿಜಿ, ಬಾಡಿಯಾಲದ ಚನ್ನವೀರ ಶಿವಾಚಾರ್ಯ ಸ್ವಾಮಿಜಿ ಸೇರಿದಂತೆ ಇತರರು ಉಪಸ್ಥಿತರಿರುವ ಮೂಲಕ ಆಶೀರ್ವಚನ ನೀಡುವರು.

ಮಾಜಿ ಶಾಸಕ ಲಿಂ. ನಾಗನಗೌಡ ಕಂದಕೂರ ಅವರು ತಮ್ಮ 50 ವರ್ಷಗಳ ಸುಧೀರ್ಘ ರಾಜಕೀಯ ಜೀವನದಲ್ಲಿ ಅವರಿಗೆ ಅಧಿಕಾರ ಸಿಕ್ಕ ಹಾಗೂ ಉಳಿದ ಸಮಯದಲ್ಲಿ ಹೆಚ್ಚಾಗಿ ಅವರು ಶಿಕ್ಷಣ, ಆರೋಗ್ಯ ಹಾಗೂ ಗ್ರಾಮೀಣಾಭಿವೃದ್ದಿಗೆ ಹೆಚ್ಚು ಒತ್ತು ನೀಡುವ ಮೂಲಕ ಗಡಿ ಕ್ಷೇತ್ರವಾದ ಗುರುಮಿಠಕಲ್ ಮತಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಕೆಲಸ ಮಾಡಿದರು.

ಅವರ ಆಶಯದಂತೆ ಅಂದು ನಡೆಯುವ ಧಾರ್ಮಿಕ ಕಾರ್ಯಕ್ರಮದಲ್ಲಿ ಗುರುಮಿಠಕಲ್ ಮತಕ್ಷೇತ್ರದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಅಭ್ಯಾಸ ಮಾಡುವ ಸುಮಾರು 16 ಸಾವಿರ ವಿಧ್ಯಾರ್ಥಿಗಳಿಗೆ ಮದ್ಯಾಹ್ನ ಬಿಸಿಯೂಟ ಸೇವನೆ ಮಾಡಲು ಸಹಕಾರಿಯಾಗಲು, ಪ್ಲೇಟ್‌ಗಳು, ಗ್ಲಾಸ್‌ಗಳು ವಿತರಿಸಲಾಗುವುದು ಎಂದು ಮಾಹಿತಿ ನೀಡಿದರು,

ಕಲ್ಯಾಣ ಕರ್ನಾಟಕದಲ್ಲಿ ಪ್ರಪ್ರಥಮ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ, ಈಗಾಗಲೇ ಅವರ ಅಭಿಮಾನಿಗಳು 1300 ಜನರು ಇಲ್ಲಿಯವರೆಗೆ ರಕ್ತದಾನ ಮಾಡಲು ಸ್ವಯಂಪ್ರೇರಿತರಾಗಿ ಹೆಸರು ನೊಂದಾಯಿಸಿದ್ದಾರೆ, ಸಂಗ್ರಹವಾದ ರಕ್ತವನ್ನು ಯಾದಗಿರಿಯ ಯೀಮ್ಸ್, ಕಲಬುರಗಿ ಜೀಮ್ಸ್, ರಾಯಚೂರಿನ ರೀಮ್ಸ್ ಆಸ್ಪತ್ರೆಗಳಿಗೆ ಹಾಗೂ ರೆಡಕ್ರಾಸ್ ಬ್ಲಡ್ ಬ್ಯಾಂಕ್ ಬೆಂಗಳೂರಿಗೆ ಕಳಿಸಿಕೊಡಲಾಗುವುದು, ಇದರಿಂದ ಅವಶ್ಯಕವಿರುವ ರೋಗಿಗಳಿಗೆ ಚಿಕಿತ್ಸೆ ನೀಡಲು ಸಹಕಾರಿಯಾಗುತ್ತದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಕಂದಕೂರ ಮನೆತನದ 10 ಸಾವಿರಕ್ಕೂ ಹೆಚ್ಚು ಅಭಿಮಾನಿ ಬಳಗ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಜಿಲ್ಲಾ ವೀರಶೈವ ಸಮಾಜದ ಅಧ್ಯಕ್ಷ ಹಾಗೂ ಜೆಡಿಎಸ್ ಮುಖಂಡರಾದ ಚನ್ನಪ್ಪಗೌಡ ಮೋಸಂಬಿ, ಪಕ್ಷದ ವಕ್ತಾರ ಮಲ್ಲಣಗೌಡ ಹಳಿಮನಿ ಕೌಳೂರ, ಮುಖಂಡರಾದ ಬಸರಾಜಪ್ಪಗೌಡ ಗೊಂದೆಡಗಿ, ಈಶ್ವರ ನಾಯಕ, ವಿಶ್ವನಾಥ ಶಿರವಾರ, ಭೀಮಶಪ್ಪ ಗುಡಸೆ, ಭೀಮರಾಯ ಬದ್ದೆಪಲ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜ. 26ರಂದು ಸಾಯಿಬಾಬಾ ಜಾತ್ರೆ ಉಚಿತ ಸಾಮೂಹಿಕ ವಿವಾಹ ; ಮಹಾರಾಜ ದಿಗ್ಗಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜಿಲ್ಲೆಯ ಶಹಾಪೂರ ತಾಲ್ಲೂಕಿನ ಇಬ್ರಾಹಿಂಪುರ ಗ್ರಾಮದಲ್ಲಿರುವ ಸಾಯಿ ಮಂದಿರದ ಶ್ರೀ ಸಾಯಿಬಾಬಾ 3ನೇ ವರ್ಷದ ಜಾತ್ರಾ ಮಹೋತ್ಸವ ಬರುವ ಜ.26 ರವಿವಾರದಂದು ಜರುಗಲಿದೆ, ಅಂದು ಉಚಿತ ಸಾಮೂಹಿಕ ವಿವಾಹ ಸಂಜೆ. 7 ಗಂಟೆಗೆ ಧಾರ್ಮಿಕ ಸಭೆ ಮತ್ತು ಸಂಗೀತ, ನೃತ್ಯ ತಂಡದಿಂದ ರಸಮಂಜರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಂದಿರದ ಅಧ್ಯಕ್ಷ ಮಹಾರಾಜ ದಿಗ್ಗಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಅಂದು ರವಿವಾರ ಬೆಳಿಗ್ಗೆ ಸಾಯಿಬಾಬಾ ಮೂರ್ತಿಗೆ ವಿಶೇಷ ಪೂಜೆ, ಕೈಂಕರ್ಯಗಳು ಜರುಗುವವು, ಮದ್ಯಾಹ್ನ 12 ಗಂಟೆಗೆ ನಡೆಯುವ ಉಚಿತ ಸಾಮೂಹಿಕ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಗುರುಮಿಠಕಲ್ ಖಾಸಾ ಮಠದ ಪೀಠಾಧಿಪತಿ ಮುರುಘರಾಜೇಂದ್ರ ಮಹಾಸ್ವಾಮಿಜಿ, ಅಗತೀರ್ಥದ ಶಾಂತಮಯ ಸ್ವಾಮಿಜಿ, ಚಿಗರಳ್ಳಿಯ ಸಿದ್ದಬಸವ ಕಬೀರ ಸ್ವಾಮಿಜಿ, ಕೈಲಾಸಮಠ ಹೋತ್‌ಪೇಠದ ಶಿವಲಿಂಗೇಶ್ವರ ಸ್ವಾಮಿಜಿ, ಯಲಗೋಡದ ಗುರುಲಿಂಗ ಮಹಾಸ್ವಾಮಿಜಿ, ಚಿಕ್ಕಮಠ ದೋರನಳ್ಳಿಯ ಶಿವಲಿಂಗ ರಾಜೇಂದ್ರ ಶಿವಾಚಾರ್ಯರು, ಮಹಲ್‌ರೋಜಾದ ಮಲ್ಲಿಕಾರ್ಜುನ ಮುತ್ಯಾ, ವಿಶ್ವಕರ್ಮ ಏಕದಂಡಗಿ ಮಠ ಶಹಾಪುರದ ಕಾಳಹಸ್ತೇಂದ್ರ ಮಹಾಸ್ವಾಮಿಜಿ, ಜುಬೇರ ಗೋಗಿಯ ಸೈಯಾದ್ ಷಾ ಚಾಂದ ಹುಸ್ಸೈನಿ, ಗೊಬ್ಬರವಾಡಿಯ ಬಳಿರಾಮ ಮಹಾರಾಜರು, ಚಟ್ನಳ್ಳಿಯ ವಿಶ್ವರಾಧ್ಯ ಮಹಾಸ್ವಾಮಿಜಿ, ತಂಗಡಗಿಯ ಮಲ್ಲಣ್ಣಪ್ಪ ಶರಣರು, ಮಾಲಳ್ಳಿಯ ಕೆಂಚರಾಯ ಪೂಜಾರಿ, ದೋರನಳ್ಳಿಯ ಭೀಮಾಶಂಕರನಂದ ಶರಣರು, ಹುಲಕಲ್. ಜೆ ನ ಮುತುವಲ್ಲಿ ಸಜ್ಜಾದಾ ನಷೀನ್ ಹಜ್ರತ್ ಮೊಹಸೀನ್ ಸಾಹೇಬ್ ಖಾದ್ರಿ, ವಹಿಸಿ, ಆಶೀರ್ವಚನ ನೀಡುವರು ಎಂದು ತಿಳಿಸಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ರಾಜ್ಯ ಸಣ್ಣ ಕೈಗಾರಿಕೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ ನೆರವೇರಿಸುವರು, ಮುಖ್ಯ ಅತಿಥಿಗಳಾಗಿ ಕಲಬುರಗಿ ಸಂಸದ ರಾಧಾಕೃಷ್ಣ ದೊಡ್ಮನಿ, ಯಾದಗಿರಿ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ, ಸುರಪುರ ಶಾಸಕ ರಾಜಾ ವೇಣುಗೋಪಾಲ ನಾಯಕ, ಸಾಯಿ ಬಾಬಾ ಮೂರ್ತಿಗೆ ಮಾಜಿ ಸಚಿವ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ ಚಿಂಚನಸೂರ, ಮಾಜಿ ಶಾಸರಾದ ಗುರುಪಾಟೀಲ್ ಶಿರವಾಳ, ಅಮಾತೆಪ್ಪ ಕಂದಕೂರ, ಕಾಂಗ್ರೆಸ್ ಹಿರಿಯ ಮುಖಂಡರಾದ ಎ.ಸಿ ಕಾಡ್ಲೂರ, ಡಾ. ಎಸ್.ಬಿ ಕಾಮರಡ್ಡಿ ಬೆಂಡೆಬೆಂಬಳಿ, ಜಿಲ್ಲಾ ಕಸಾಪ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ, ಹಿರಿಯ ಸಾಹಿತಿಗಳಾದ ಮಹಿಪಾಲರಡ್ಡಿ ಮುನ್ನೂರ ಹಾಗೂ ವಿಶ್ವರಾಧ್ಯ ಸತ್ಯಂಪೇಟೆ ಪುಷ್ಪಾರ್ಚನೆ ಮಾಡುವರು, ಅಧ್ಯಕ್ಷತೆಯನ್ನು ಸಾಯಿ ಮಂದಿರದ ಅಧ್ಯಕ್ಷರಾದ ಮಹಾರಾಜ ದಿಗ್ಗಿ ವಹಿಸುವರು ಎಂದು ಮಾಹಿತಿ ನೀಡುವರು.

ಅಂದೇ ಸಂಜೆ 6 ಗಂಟೆಗೆ ದೇವಸ್ಥಾನ ಆವರಣದಲ್ಲಿ ನಡೆಯುವ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕನಕ ಗುರುಪೀಠ ತಿಂಥಣಿ ಬ್ರಿಡ್ಜ್ ಪೀಠಾಧಿಪತಿಗಳಾದ ಸಿದ್ದರಮಾನಂದಪುರಿ ಮಹಾಸ್ವಾಮಿಜಿ, ಗುರುಮಿಠಕಲ್ ಖಾಸಾಮಠದ ಶಾಂತವೀರ ಮಹಾಸ್ವಾಮಿಜಿ, ಚಿಗರಳ್ಳಿಯ ಸಿದ್ದಬಸವ ಕಬೀರ ಮಹಾಸ್ವಾಮಿಜಿ, ಕೈಲಾಸಮಠ ಹೋತ್‌ಪೇಟೆಯ ಶಿವಲಿಂಗ ಮಹಾಸ್ವಾಮಿಜಿ, ವಿಶ್ವಕಮರ್ಯ ಏಕದಂಡಗಿ ಮಠ ಶಹಾಪೂರದ ಅಜ್ಜೇಂದ್ರ ಮಹಾಸ್ವಾಮಿಜಿ, ಯಲಗೋಡದ ಗುರುಲಿಂಗ ಮಹಾಸ್ವಾಮಿಜಿ ವಹಿಸಿ, ಆಶೀರ್ವಚನ ನೀಡುವರು.

ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವ ರಾಜುಗೌಡ ನೆರವೇರಿಸುವರು, ಮುಖ್ಯ ಅತಿಥಿಗಳಾಗಿ ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಕೆಪಿಸಿಸಿ ಉಪಾಧ್ಯಕ್ಷ ಸುಭಾಷ ರಾಠೋಡ, ಹಿರಿಯ ಕೆಎಎಸ್ ಅಧಿಕಾರಿ ವಿಶ್ವನಾಥ ಹಿರೇಮಠ್, ಡಿ.ಎಸ್ ಮ್ಯಾಕ್ಸ್ ಸಂಸ್ಥಾಪಕರಾದ ಡಾ. ಎಸ್.ಬಿ ದಯಾನಂದ, ಕನ್ನಡದ ಖ್ಯಾತ ಚಲನಚಿತ್ರ ನಟಿಯರಾದ ಪ್ರೇಮಾ, ಶರಣ್ಯಶೆಟ್ಟಿ, ಕಾಂಗ್ರೆಸ್ ಹಿರಿಯ ಮುಖಂಡರಾದ ದೇವರಾಜ ಬೈರತಿ, ಬಿಜೆಪಿ ಜಿಲ್ಲಾಧ್ಯಕ್ಷ ಅಮೀನರಡ್ಡಿ ಪಾಟೀಲ್ ಯಾಳಗಿ, ಬಿಜೆಪಿ ಯುವ ಮುಖಂಡ ನಿತಿನ್ ಗುತ್ತೇದಾರ, ಯಾದಗಿರಿ ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ, ಕರವೇ ಮುಖಂಡರಾದ ಬಸವರಾಜ ಪಡುಕೋಟೆ, ಡಾ. ಶರಣು. ಬಿ ಗದ್ದುಗೆ ಇನ್ನಿತರರು ಭಾಗವಹಿಸುವರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಬೆಂಗಳೂರಿನ ಕಾಮಿಡಿ ಕಿಲಾಡಿಗಳು, ಸರಿಗಮಪ, ಜೋಡಿ ನಂ. 1, ಡಾನ್ಸ್ ಕರ್ನಾಟಕ ಡಾನ್ಸ್ ಇನ್ನಿತರ ಕಲಾವಿದರ ತಂಡಗಳು ಸಂಗೀತ ಕಾರ್ಯಕ್ರಮ ನೀಡುವರು.

ದೇವಸ್ಥಾನ ಆವರಣದಲ್ಲಿ ಸೋಮವಾರ ಬೆಳಿಗ್ಗೆ 11ಕ್ಕೆ ಗ್ರಾಮೀಣ ಕ್ರೀಡೆಯಾದ ಕುಸ್ತಿ ಪಂದ್ಯಾವಳಿ ಜರುಗುವುದು, ವಿಜೇತರಾದ ಕ್ರೀಡಾಪಟುಗಳನ್ನು ಗೌರವಿಸಿ, ಸೂಕ್ತ ಬಹುಮಾನ ನೀಡಲಾಗುವುದು ಎಂದು ವಿವರಿಸಿದರು.

ಸುದ್ದಿಗೋಷ್ಟಿಯಲ್ಲಿ ಇಬ್ರಾಹಿಂಪುರ ಗ್ರಾಮದ ಮುಖಂಡರಾದ ರಾಜುಗೌಡ ಪಾಟೀಲ್, ಭೀಮಾಶಂಕರ, ಮರೆಪ್ಪ ನಾಯ್ಕಲ್, ಖಾಜಾ ಮೈನೊದ್ದೀನ್, ನಾಗರಾಜ, ಮಾಳಪ್ಪ ಯಾದವ, ಮಲ್ಲಣ್ಣ ಐಕೂರ, ಅಲ್ಲಿಸಾಬ್, ಬಂಡಾರಪ್ಪ ನಾಟೇಕರ್, ಶಿವು ಬೆಳಗುಂದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಇಟ್ಟಂಗಿ ಭಟ್ಟಿ ಕಾರ್ಮಿಕರ ಮೇಲಿನ ಹಲ್ಲೆ ಖಂಡಿಸಿ ತಹಸಿಲ್ದಾರ್ ಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ವಿಜಯಪುರದ ಗಾಂಧಿನಗರ ಸ್ಟಾರ್ ಚೌಕ ಬಳಿ ಇರುವ ಇಟ್ಟಂಗಿ ಭಟ್ಟಿಯಲ್ಲಿ ಕೆಲಸ ಮಾಡುತ್ತಿರುವ ಮೂವರು ದಲಿತ ಕಾರ್ಮಿಕರ ಮೇಲೆ ಮಾಲೀಕ ಮಾಡಿದ ಮಾರಣಾಂತಿಕ ಹಲ್ಲೆಯನ್ನು ಖಂಡಿಸಿ ಅಂಬೇಡ್ಕರ್ ಸೇನೆ(ರಿ) ತಾಲೂಕ ಸಮಿತಿ ವತಿಯಿಂದ ಬುಧವಾರ ಸಿರಸ್ತೆದಾರ ಜೆ.ಆರ್.ಜೈನಾಪೂರ ಮೂಲಕ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿಲಾಯಿತು. ಇಟ್ಟಂಗಿ ಭಟ್ಟಿಯಲ್ಲಿ ಕೆಲಸ ಮಾಡುತ್ತಿದ್ದ ಬಾಗಲಕೋಟ ಜಿಲ್ಲೆ ಜಮಖಂಡಿ ತಾಲೂಕಿನ ಚಿಕ್ಕಲಕಿ ಗ್ರಾಮದ ಕಾರ್ಮಿಕರು ಸಂಕ್ರಾಂತಿ ಹಬ್ಬಕ್ಕಾಗಿ ಹೋದವರು ಮರಳುವಲ್ಲಿ ತಡವಾಗಿರುವ ಒಂದು ಸಣ್ಣ ಕಾರಣಕ್ಕಾಗಿ ವಿಜಯಪುರ ನಗರದ ಸಿಂದಗಿ ರಸ್ತೆಯಲ್ಲಿರುವ ಇಟ್ಟಂಗಿ ಭಟ್ಟಿ ಮಾಲೀಕ ಕೇಮು ರಾಠೋಡ ತನ್ನ ಸಹಚರ ರೊಂದಿಗೆ ಸೇರಿ ದಲಿತ ಸಮಾಜದ ಕಾರ್ಮಿಕರಾದ ಸದಾಶಿವ ಮಾದರ್ ಸದಾಶಿವ ಬಬಲಾದಿ ಉಮೇಶ ಮಾದರ್ ಈ ಮೂವರ ಮೇಲೆ ಪೈಪುಗಳನ್ನು ಬಳಸಿ ಮಾರಣಾಂತಿಕ ಹಲ್ಲೆಯನ್ನು ಮಾಡಿದ್ದಾನೆ, ಇದು ಇಡೀ ನಾಗರಿಕ ಸಮಾಜ ತಲೆತಗ್ಗಿಸುವಂತಹ ಘಟನೆಯಾಗಿದೆ. ಈಗಾಗಲೇ ಈ ಹಲ್ಲೇಕೋರರನ್ನು ಪೊಲೀಸರು ಬಂದಿಸಿದ್ದಾರೆ, ಆದರೆ ಇವರು ಜಾಮೀನು ಪಡೆದುಕೊಂಡು ಹೊರಗೆ ಬಂದರೆ ಸೇಡಿನ ಮನೋಭಾವದಿಂದ ಮತ್ತೆ ಅವರ ಮೇಲೆ ಹಲ್ಲೆ ಮಾಡುವ ಅವಕಾಶಗಳಿವೆ ಆದ್ದರಿಂದ ಹಲ್ಲೆಗೆ ಒಳಗಾದ ನಮ್ಮ ಸಮಾಜದ ಕಾರ್ಮಿಕರಿಗೆ ಇಲಾಖೆಯವರು ಸೂಕ್ತ ಭದ್ರತೆ ಒದಗಿಸಬೇಕು ಎಂದು ಕೇಳಿಕೊಂಡಿದ್ದಾರೆ. ಈ ಸಮಯದಲ್ಲಿ ಜಿಲ್ಲಾ ಉಪಾಧ್ಯಕ್ಷ ಬಸ್ಸು ಕಟ್ಟಿಮನಿ, ತಾಲೂಕ ಅಧ್ಯಕ್ಷ ಗೋಪಾಲ ಕಟ್ಟಿಮನಿ, ಕಾರ್ಯದರ್ಶಿ ಮಹದೇವ ಅಸ್ಕಿ, ಖಜಾಂಚಿಗಳಾದ ಪರಶುರಾಮ್ ತಳವಾರ, ಯಮನಪ್ಪ ನಾಯ್ಕೋಡಿ, ಪದಾಧಿಕಾರಿಗಳ ಶೇಖಪ್ಪ ಕಟ್ಟಿಮನಿ, ದ್ಯಾಮಣ್ಣ ಸೋಮನಾಳ, ಮಡು ಚಲವಾದಿ ಮತ್ತೀತರರು ಇದ್ದರು.

# ತಾಳಿಕೋಟಿ ಸಹಕಾರಿ ಬ್ಯಾಂಕ್ ನೂತನ ನಿರ್ದೇಶಕರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಪ್ರತಿಷ್ಠಿತ ಸಹಕಾರಿ ಬ್ಯಾಂಕಿನ ಆಡಳಿತ ಮಂಡಳಿ ನಿರ್ದೇಶಕರ 13 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಆಯ್ಕೆಯಾದ ನೂತನ ನಿರ್ದೇಶಕರಿಗೆ ಪಟ್ಟಣದ ಎಪಿಎಂಸಿ ಯಾರ್ಡ್ ಗೆಳೆಯರ ಬಳಗ ಹಾಗೂ ಗುಮಾಸ್ತರ ಸಂಘದ ವತಿಯಿಂದ ಅಡತ ಅಸೋಸಿಯೇಷನ್ ಸಭಾ ಭವನದಲ್ಲಿ ಬುಧವಾರ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ವಿವಿ ಸಂಘದ ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ ಪ್ರಸ್ತಾವಿಕವಾಗಿ ಮಾತನಾಡಿ ಈ ಬ್ಯಾಂಕಿನ ಶೇರುದಾರ ಮತದಾರರು ನಿಮ್ಮ ಮೇಲೆ ವಿಶ್ವಾಸವಿಟ್ಟು ನಿರ್ದೇಶಕರಾಗಿ ಆಯ್ಕೆ ಮಾಡಿದ್ದಾರೆ ನೀವೆಲ್ಲರೂ ಸೇರಿ ಬ್ಯಾಂಕಿನ ಅಭಿವೃದ್ಧಿಗಾಗಿ ಶಕ್ತಿ ಮೀರಿ ಕೆಲಸ ಮಾಡಲು ಪ್ರಯತ್ನಿಸಿ ಎಂದರು. ಸನ್ಮಾನಿತ ನೂತನ ನಿರ್ದೇಶಕ ಮುರಿಗೆಪ್ಪ ಸರಸಟ್ಟಿ ಮಾತನಾಡಿ ನೀವೆಲ್ಲರೂ ನಮ್ಮ ಮೇಲೆ ಪ್ರೀತಿ ಹಾಗೂ ವಿಶ್ವಾಸ ವಿಟ್ಟು ಆಯ್ಕೆ ಮಾಡಿದ್ದೀರಿ, ನಿಮ್ಮ ವಿಶ್ವಾಸಕ್ಕೆ ಚುತಿ ಬಾರದ ಹಾಗೆ ಬ್ಯಾಂಕಿನ ಅಭಿವೃದ್ಧಿಗಾಗಿ ಕೆಲಸ ಮಾಡುತ್ತೇವೆ ನಮಗೆಲ್ಲರಿಗೂ ಸನ್ಮಾನಿಸಿ ಗೌರವಿಸಿದ್ದಕ್ಕಾಗಿ ಧನ್ಯವಾದಗಳು ಎಂದರು. ಗುಮಾಸ್ತರ ಸಂಘದ ಹಿರಿಯರಾದ ಎಂ.ಸಿ.ಬಡಿಗೇರ ಅವರು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಗೆಳೆಯರ ಬಳಗದ ಉಪಾಧ್ಯಕ್ಷ ಅಶೋಕ್ಯ ಬಳಗಾನೂರ, ಚೆನ್ನಪ್ಪ ಗೌಡ ಗದಿಗೆಪ್ಪಗೋಳ, ಕೃಷ್ಣ ತಾಳಪಲ್ಲೆ, ಈರಯ್ಯ ಹಿರೇಮಠ, ಭೀಮರಾಯ ಸೂಳೇಭಾವಿ, ಮಲ್ಲು ಕೋಳಕೂರ, ಮಲ್ಲು ಮದರ ಕಲ್ಲ, ಕುಮಾರಸ್ವಾಮಿ ಹಿರೇಮಠ, ಈರಣ್ಣ ಕನ್ನೂರ, ದೇವೇಂದ್ರ ಅರಕೇರಿ, ಗುಮಾಸ್ತರ ಸಂಘದ ರಾಮಚಂದ್ರ ಸುಬೇದಾರ, ಭೀಮು ವಸ್ತ್ರದ, ಪ್ರದೀಪ ಆನೇಸೂರ, ಬಸವರಾಜ ಬೂದಿಹಾಳ, ಪ್ರಭುಲಿಂಗ ಕಲ್ಲೂರ, ಆನಂದ್ ಪೀಸಾಳೆ, ವಿಠ್ಠಲ ಜಾದವ, ಶ್ರೀಶೈಲ ಸಾಸನೂರ ಮತ್ತಿತರರು ಇದ್ದರು.

# ಕ್ರೀಡೆಗಳಿಂದ ಯುವಕರಲ್ಲಿ ದೈಹಿಕ–ಮಾನಸಿಕ ವೃದ್ಧಿ : ಚನ್ನೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪ್ರಸಕ್ತ ದಿನಗಳಲ್ಲಿ ನಾವೆಲ್ಲರೂ ಬದುಕಿನಲ್ಲಿ ಸದಾ ಒಂದಿಲ್ಲೊಂದು ಒತ್ತಡದಲ್ಲಿ ಜೀವನ ಕಳೆಯುತ್ತಿದ್ದೇವೆ, ಯುವಕರು ಸ್ವಲ್ಪ ಸಮಯ ಕ್ರೀಡೆಗಳಿಗೆ ಮೀಸಲಿಟ್ಟು ಭಾಗವಹಿಸಿದಲ್ಲಿ ಅವರಲ್ಲಿ ದೈಹಿಕ–ಮಾನಸಿಕ ವೃದ್ಧಿಯಾಗಿ ಸಧೃಢ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ವಡಗೇರಾ ಜಿ.ಪಂ ಮಾಜಿ ಸದಸ್ಯ ಶ್ರೀನಿವಾಸರಡ್ಡಿ ಪಾಟೀಲ್ ಚನ್ನೂರ ಹೇಳಿದರು.

ಜಿಲ್ಲೆಯ ವಡಗೇರಾ ತಾಲ್ಲೂಕಿನ ತುಮಕೂರ ಗ್ರಾಮದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ತುಮಕೂರ ಪ್ರಿಮಿಯರ್ ಲಿಗ್ ಕ್ರಿಕೇಟ್ ಪಂದ್ಯಾವಳಿ ಮುಕ್ತಾಯ ಸಮಾರಂಭದಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದ ಸಿದ್ದು ತಂಬಾಕೆ ನಾಯಕತ್ವದ ರೈಸಿಂಗ್ ಚಾಂಪಿಯನ್ ತಂಡಕ್ಕೆ ಕಪ್ ಹಾಗೂ 21 ಸಾವಿರ ನಗದು ಬಹುಮಾನ ವಿತರಿಸಿ ಮಾತನಾಡಿದರು.

ಪ್ರಸಕ್ತ ದಿನಗಳಲ್ಲಿ ಯುವಕರು ಕೆಟ್ಟ ಹವ್ಯಾಸಗಳಿಗೆ ಬಲಿಯಾಗುತ್ತಿರುವುದು ಆತಂಕದ ಬೆಳವಣಿಗೆ, ಕಾರಣ ನೀವೂ ಅದಕ್ಕೆ ಅವಕಾಶ ನೀಡದೆ, ಸಧೃಢ ಆಹಾರ ಸೇವನೆ ಮಾಡಿ, ಕ್ರೀಡಾಸಕ್ತಿ ಮೈಗೂಡಿಸಿಕೊಂಡು ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕೆಂದು ಸಲಹೆ ನೀಡಿದರು.

ಪಂದ್ಯಾವಳಿಯಲ್ಲಿ 15 ತಂಡಗಳು ಭಾಗವಹಿಸಿದ್ದವು, ಸಮಾರಂಭದಲ್ಲಿ ಆಯೋಜಕರಾದ ಸೈದು ಕಾಳೆಬೆಳಗುಂದಿ, ಸಿದ್ದು ಸುಣಗಾರ, ಶರಣು ಅಂಗಡಿ, ಮಹಿಬೂಬ ಮರಡಿ, ಬಸಲಿಂಗ ಗುರಸಣಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಚಟುವಟಿಕೆ ಮೂಲಕ ಮಕ್ಕಳ ಕಲಿಕೆಗೆ ಪ್ರೋತ್ಸಾಹ ನೀಡಿ: ಜಿಲ್ಲಾಧಿಕಾರಿ ನಲಿನ್ ಅತುಲ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮನೆಗಳಲ್ಲಿ ಪೋಷಕರು ಮಕ್ಕಳಿಗೆಮೊಬೈಲ್ ಕೋಡುವ ಬದಲಿಗೆ ಸಣ್ಣ ಚಟುವಟಿಕೆಗಳನ್ನುಮಾಡಿಸುವ ಮೂಲಕ ಮಕ್ಕಳ ಕಲಿಕೆಗೆ ಪ್ರೋತ್ಸಾಹ ನೀಡಬೇಕು ಎಂದು ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು. ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಇವರ ಸಂಯುಕ್ತ ಆಶ್ರಯದಲ್ಲಿ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮದಡಿಯಲ್ಲಿ ಯಲಬುರ್ಗಾ ಯೋಜನೆಯ ತಳಕಲ್ ಗ್ರಾಮದ ಸಮುದಾಯ ಭವನದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾದ ಅಂಗನವಾಡಿ ಮಕ್ಕಳ "ಬಾಲಮೇಳ ಕಾರ್ಯಕ್ರಮ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ನಡೆಯುತ್ತಿರುವ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮ ಮಾದರಿಯಾಗಿದ್ದು, ಪಠ್ಯಕ್ರಮದಂತೆ ಚಟುವಟಿಕೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಕಾರ್ಯಕ್ರಮದ ವಿಕ್ಷಣೆಗಾಗಿ 6 ರಾಜ್ಯಗಳಿಂದ ಅಧಿಕಾರಿಗಳು ವಿಕ್ಷಣೆಮಾಡಿದ್ದು, 2024–25ನೇ ಸಾಲಿನಲ್ಲಿ ರಾಷ್ಟ್ರೀಯ ನೆಕ್ಸಸ್ ಪ್ರಶಸ್ತಿ ಲಭಿಸಿರುತ್ತದೆ. "ಪೋಷಕರ ನಡೆ ಅಂಗನವಾಡಿಯ ಕಡೆ" ಸಭೆಗಳು ಮತ್ತು "ಹಲೋ ಪೋಷಕರೇ" ಇಂತಹ ವಿನೂತನ ಕಾರ್ಯಕ್ರಮಗಳನ್ನು ಅಂಗನವಾಡಿ ಮಕ್ಕಳ ಪೋಷಕರಿಗಾಗಿ ಮಾಡಲಾಗುತ್ತಿದ್ದು, ಬಾಲ ಮೇಳ ಕಾರ್ಯಕ್ರಮ ಮಕ್ಕಳ ಕಲಿಕೆ ಮತ್ತು ಪ್ರತಿಭೆಯನ್ನು ಪರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದರು. ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಪಿ.ವಾಯ್.ಶೇಟ್ಟಪ್ಪನವರ್ ಮಾತನಾಡಿ, ಅಂಗನವಾಡಿಯ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾ ಪೂರ್ವ ಶಿಕ್ಷಣ ಸಹಕಾರಿಯಾಗಿದೆ. ಮಕ್ಕಳ ಆರೋಗ್ಯ ಹಾಗೂ ಪೌಷ್ಠಿಕ ಆಹಾರ ನೀಡುವುದು ಅತ್ಯವಶ್ಯಕವಾಗಿದೆ. ಮಕ್ಕಳ ಕಲಿಕೆಗೆ ಶಾಲಾ ಪೂರ್ವ ಶಿಕ್ಷಣ ಸಹಕಾರಿಯಾಗಿದೆ. ಚಟುವಟಿಕೆ ಮೂಲಕ ಶಿಕ್ಷಣ ನೀಡುವದರಿಂದ ಮಕ್ಕಳ ಕಲಿಕೆ ಸುಲಭವಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಜಹೀರಾ ಬೇಗಂ ಹಾಗೂ ಗ್ರಾ.ಪಂ ಉಪಾಧ್ಯಕ್ಷರು, ಸರ್ವಸದ್ಯರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಮೇಲ್ವಿಚಾರಕರು, ಕಲಿಕೆ ಟಾಟಾ ಟ್ರಸ್ಟ ಜಿಲ್ಲಾ ವ್ಯವಸ್ಥಾಪಕರು ಹಾಗೂ ಜಿಲ್ಲಾ ಸಂಪನ್ಮೂಲ ವ್ಯಕ್ತಿ ಭಾಗವಹಿಸಿದರು. ಸ್ಟಾಲ್ ಉದ್ಘಾಟನೆ: ಅಂಗನವಾಡಿ ಮಕ್ಕಳ ಜೊತೆಗೆ ಜಿಲ್ಲಾಧಿಕಾರಿಗಳು, ಶಾಲಾ ಪೂರ್ವ ಶಿಕ್ಷಣ ಸ್ಟಾಲ್ ಉದ್ಘಾಟನೆ ಮಾಡಿ, "ಬಾಲಮೇಳ" ಕಾರ್ಯಕ್ರಮದಲ್ಲಿ ಅಂಗನವಾಡಿ ಮಕ್ಕಳು ಅಂಗನವಾಡಿಯಲ್ಲಿ ನಡೆಯುವ ಶಾಲಾಪೂರ್ವ ಶಿಕ್ಷಣದ ಚಟುವಟಿಕೆಗಳಾದ ಅಂಗನವಾಡಿಯ ನಿಯಮಗಳು, ಆಕಾರಗಳ ಪರಿಚಯ, ಬಣ್ಣಗಳ ಪರಿಚಯ, ಇಂದಿನ ಕ್ಯಾಲೆಂಡರ್ ಚಟುವಟಿಕೆಗಳ ಪ್ರದರ್ಶನವನ್ನು ವೀಕ್ಷಿಸಿದರು. ಬಳಿಕ ಹುಟ್ಟಿದರೆ ಕನ್ನಡನಾಡಲ್ಲಿ ಹುಟ್ಟಬೇಕು ಎಂಬ ಹಾಡಿಗೆ ಮಕ್ಕಳೊಂದಿಗೆ ಜಿಲ್ಲಾಧಿಕಾರಿಗಳು ನೃತ್ಯ ಮಾಡಿದರು. ಕಾರ್ಯಕ್ರಮದಲ್ಲಿ ಸ್ಥಳೀಯ 10 ಅಂಗನವಾಡಿಗಳ 3 ರಿಂದ 6 ವರ್ಷದ ಮಕ್ಕಳು ಹಾಗೂ ಮಕ್ಕಳ ತಂದೆ ತಾಯಂದಿರು ಸಾರ್ವಜನಿಕರು ಭಾಗವಹಿಸಿದರು ಅಂಗನವಾಡಿ ಕೇಂದ್ರದಲ್ಲಿ ಶಾಲಾ ಪೂರ್ವ ಶಿಕ್ಷಣದಲ್ಲಿ ಕಲಿತಿರುವ ವಿಷಯವನ್ನು ಮಕ್ಕಳ ಸಾಮರ್ಥ್ಯವನ್ನು ಬಾಲಮೇಳ ಕಾರ್ಯಕ್ರಮದ ವೇದಿಕೆ ಮೇಲೆ ಪ್ರದರ್ಶಿಸಿ ಪಾಲಕರಿಂದ ಪ್ರೋತ್ಸಾಹಿಸುವ ಅತ್ಯುತ್ತಮ ಕಾರ್ಯಕ್ರಮವಾಗಿ ಜನಮೆಚ್ಚುಗೆ ಗಳಿಸಿತು 400 ರಿಂದ 500 ಪಾಲಕರು ಭಾಗವಹಿಸಿದ್ದರು.

ಬಾಲಮೇಳ ಕಾರ್ಯಕ್ರಮದ ನಿಮಿತ್ಯ ಪಾಕರಿಗೆ ಆಟಗಳನ್ನು ಆಡಿಸಲಾಯಿತು, ಶಾಲಾಪೂರ್ವ ಶಿಕ್ಷಣ ಸ್ಟಾಲ್, ಅಂಗನವಾಡಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ವಿವಿಧ ವೇಷ ಬೂಷ ಣ ಹಾಗೂ ಮಕ್ಕಳು ಅಂಗನವಾಡಿಯಲ್ಲಿ ಕಲಿತ ಚಟುವಟಿಕೆಗಳನ್ನು ಪ್ರಸ್ತುತ ಪಡಿಸುವಿಕೆ ಸೇರಿದಂತೆ ಇತರ ಕಾರ್ಯಕ್ರಮಗಳು ನಡೆದವು.

# ಜ.25 ರಂದು 'ರಾಷ್ಟ್ರೀಯ ಮತದಾರರ ದಿನ' ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.22: ಭಾರತ ಚುನಾವಣಾ ಆಯೋಗ, ಬಳ್ಳಾರಿ ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಜ.25 ರಂದು ಬೆಳಿಗ್ಗೆ 10.30 ಗಂ–ಟೆಗೆ ನಗರದ ರೈಲ್ವೇ ನಿಲ್ದಾಣ ರಸ್ತೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ 'ರಾಷ್ಟ್ರೀಯ ಮತದಾರರ ದಿನ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಪ್ರಮೋದ್.ಪಿ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.22: ನಗರದ ಕೌಲ್‌ಬಜಾರ್‌ನ ನಲ್ಲಚೇರುವು ಪ್ರದೇಶದ ಬಟ್ಟಿ ಏರಿಯಾದ ನಿವಾಸಿ ವಿರೇಶ್ ಬಾಬು ಎನ್ನುವ 29 ವರ್ಷದ ವ್ಯಕ್ತಿ ಜ.12 ರಂದು ಕಾಣೆಯಾಗಿರುವ ಕುರಿತು ಕೌಲ್‌ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಅವರು ತಿಳಿಸಿದ್ದಾರೆ.

ಚಹರೆ ಗುರುತು: ಅಂದಾಜು 5.6 ಅಡಿ ಎತ್ತರ, ದೃಢವಾದ



ಮೈಕಟ್ಟು, ಎಣ್ಣೆಗೆಂಪು ಮೈ ಬಣ್ಣ ಹೊಂದಿದ್ದು, ಎಡಗೈ ತೋಳಿನ ಮೇಲೆ ಗರುಡ ಹಚ್ಚೆ ಹಾಕಿಸಿಕೊಂಡಿರುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ಪಾಚಿ ಬಣ್ಣದ ಚೆಕ್ಸ್ ಅಂಗಿ, ಕ್ರೀಮ್ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್‌ಬಜಾರ್ ಪೊಲೀಸ್ ಠಾಣೆಯ ದೂ.08392–240731, 244145, ಪಿಐ ಮೊ.9480803047, ಪಿಎಸ್‌ಐ ಮೊ.9480803085 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧೆಡೆ ದಾಳಿ; ನಾಲ್ವರು ಬಾಲಕಾರ್ಮಿಕ ಮಕ್ಕಳ ರಕ್ಷಣೆ


**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.22: ಜಿಲ್ಲಾ ಬಾಲ ಕಾರ್ಮಿಕ ಯೋಜನೆ ಹಾಗೂ ಇತರೆ ಇಲಾಖೆಗಳ ಸಹಯೋಗದೊಂದಿಗೆ ನಗರದ ಸುಧಾಕ್ರಾಸ್, ಬಿಮ್ಸ್ ಎದುರುಗಡೆ, ವಿದ್ಯಾನಗರ ಮತ್ತು ಇತರೆ ಸ್ಥಳಗಳಲ್ಲಿ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಐಸ್ ಕ್ರೀಮ್ ಪಾರ್ಲರ್, ಜ್ಯೂಸ್ ಅಂಗಡಿ ಇತ್ಯಾದಿ ಉದ್ದಿಮೆಗಳ ಮೇಲೆ ಅನಿರೀಕ್ಷಿತ ದಾಳಿ ನಡೆಸಿ ನಾಲ್ವರು ಬಾಲಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ ಎಂದು ಯೋಜನೆಯ ಯೋಜನಾಧಿಕಾರಿ ಮೌನೇಶ್ ಅವರು ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರಡಿ ನೇಮಕವಾದ ನಿರೀಕ್ಷಕರ ಟಾಸ್ಕ್ ಪೋರ್ಸ್ ಸಮಿತಿ ಸಭೆ ನಡೆಸಿ ಅಧಿಕಾರಿಗಳ ತಂಡದೊಂದಿಗೆ ದಾಳಿ ನಡೆಸಲಾಗಿದೆ. ಒಟ್ಟು 04 ಬಾಲಕಾರ್ಮಿಕ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ, ಮಕ್ಕಳ ಕಲ್ಯಾಣ ಸಮಿತಿಗೆ ಓಪ್ಪಿಸಿ ಸಂಬಂಧಿಸಿದ ಶಾಲೆಗಳಲ್ಲಿ ಅವರ ವಯಸ್ಸಿನ ದಾಖಲೆ ಪಡೆದ ನಂತರ ಮಾಲೀಕರ ವಿರುದ್ದ ಬಾಲಕಾರ್ಮಿಕ ಕಾಯ್ದೆ 1986 ರ ತಿದ್ದುಪಡಿ ಕಾಯ್ದೆಯಡಿ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

ಈ ಟಾಸ್ಕ್ ಪೋರ್ಸ್ ಸಮಿತಿಯಲ್ಲಿ ಗ್ರೇಡ್–2 ತಹಶೀಲ್ದಾರ ಮಂಜುನಾಥ, ಕಾರ್ಮಿಕ ನಿರೀಕ್ಷಕರಾದ ಪರಶುರಾಮ್, ರಮೇಶ್, ಪೂರ್ವವಲಯ ಕ್ಷೇತ್ರ ಸಂಪನ್ಮೂಲ ಅಧಿಕಾರಿ ನರಸಪ್ಪ, ಪಶ್ಚಿಮ ವಲಯ ಕ್ಷೇತ್ರ ಸಂಪನ್ಮೂಲ ಅಧಿಕಾರಿ ಸಿದ್ದಪ್ಪ, ಮಕ್ಕಳ ಸಹಾಯವಾಣಿಯ ಸಿಬ್ಬಂದಿಗಳಾದ ಚಂದ್ರಕಳ ಮತ್ತು ನಿಲೋಫಿಯಾ, ರಿಚ್ ಸ್ವಯಂ ಸೇವಾ ಸಂಸ್ಥೆಯ ಸಿಬ್ಬಂದಿ ಬಸಮ್ಮ ಹಾಗೂ ಇತರರು ಹಾಜರಿದ್ದರು.

### ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಎಲ್ಲಾ

# ದೇವಸ್ಥಾನಗಳಲ್ಲಿ ಜ.25, 26ರಂದು ವಿದ್ಯುತ್ ದೀಪಾಲಂಕಾರ ವ್ಯವಸ್ಥೆ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.22: 76ನೇ ಗಣರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯಲ್ಲಿ ಹಿಂದೂ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಎಲ್ಲಾ ಧಾರ್ಮಿಕ ಸಂಸ್ಥೆಗಳು ಹಾಗೂ ದೇವಸ್ಥಾನಗಳಲ್ಲಿ ಜ.25 ಮತ್ತು ಜ.26ರಂದು ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಹಾಗೂ ಜ.26 ರಂದು ವಿಶೇಷ ಪೂಜೆ, ಪ್ರಾರ್ಥನೆ ವ್ಯವಸ್ಥೆಯನ್ನು ಮಾಡಬೇಕು ಎಂದು ಹಿಂದೂ ಧಾರ್ಮಿಕ ದತ್ತಿಗಳ ಇಲಾಖೆಯ ಸಹಾಯಕ ಆಯುಕ್ತರಾದ ಹೆಚ್.ಗಂಗಾಧರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇಟ್ ತರಬೇತಿ ಪೂರ್ಣ ಪ್ರಮಾಣ ಪತ್ರ ವಿತರಣೆ

**ಮಲ್ಲಮ್ಮ ನುಡಿ ವಾರ್ತೆ**



ಬಸವಕಲ್ಯಾಣ : ಮೇಟ್ ತರಬೇತಿ ಪೂರ್ಣಗೊಳಿಸಿದ ತರಬೇತಿದಾರರಿಗೆ ಬುಧವಾರ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ನಡೆಯಿತು. ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಸಂತೋಷ ಚವ್ಹಾಣ ಹಾಗೂ ತಾಲ್ಲೂಕು ಯೋಜನಾಧಿಕಾರಿ ರಾಜಶೇಖರ ನೆಲ್ಲಿ ಅವರು ಮೊದಲನೇ ಹಾಗೂ ಎರಡನೇ ಬ್ಯಾಚಿನ ತರಬೇತಿದಾರರಿಗೆ ಸಾಮೂಹಿಕವಾಗಿ ಪ್ರಮಾಣ ಪತ್ರ ವಿತರಿಸಿದರು. ಈ ಸಂದರ್ಭದಲ್ಲಿ ತರಬೇತಿಯ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ವೀರಾರೆಡ್ಡಿ, ಲಕ್ಷ್ಮೀ ಚಾಮಲಾ, ಅಮರಪಲ್ಲಿ, ನಟರಾಜ್, ಸಂಜು ಹಾಗೂ ತರಬೇತಿದಾರರು ಇದ್ದರು.

# ಸಾರ್ವಜನಿಕರು ಇಲಿ ಜ್ವರ ಕುರಿತು ಎಚ್ಚರ ವಹಿಸಿ: ಡಾ.ಮರಿಯಂಬಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.22: ಸಾರ್ವಜನಿಕರು ತಮ್ಮ ಮನೆಯ ಸುತ್ತ–ಮುತ್ತ ಹಾಗೂ ಇತರೆ ವಾಸಸ್ಥಳ ಸುತ್ತಲಿನಲ್ಲಿ ಇಲಿಯ ಬಿಲಗಳು ಕಂಡುಬಂದಲ್ಲಿ ಅವುಗಳನ್ನು ಮುಚ್ಚಿ ಆಹಾರ ಮತ್ತು ನೀರು ಸುರಕ್ಷಿತವಾಗಿ ಇಡುವ ಮೂಲಕ ಇಲಿಜ್ವರ ಹರಡುವಿಕೆಯನ್ನು ತಡೆಗಟ್ಟಲು ಸಹಕರಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ ಅವರು ಹೇಳಿದರು. ನಗರದ ಗುಗ್ಗರಹಟ್ಟಿ ಬಡಾವಣೆಯಲ್ಲಿ ಶಂಕಿತ ಪ್ರಕರಣದ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಜಾಗೃತಿ ನೀಡುವ ಮೂಲಕ ಅವರು ಮಾತನಾಡಿದರು. ವೈಜ್ಞಾನಿಕವಾಗಿ ಲೆಪ್ಟೋಸ್ಪೆರೊಸಿಸ್ ಎಂದು ಕರೆಸಿಕೊಳ್ಳುವ ಇಲಿ ಜ್ವರ "ಲೆಪ್ಟೋಸ್ಪೈರ" ಎಂಬ ಬ್ಯಾಕ್ಟಿರಿಯಾ ರೋಗಾಣುವಿನಿಂದ ಬರುವ ಕಾಯಿಲೆಯಾಗಿದೆ. ಈ ಬ್ಯಾಕ್ಟೀರಿಯಾ ಸೋಂಕು ಹೊಂದಿದ ಇಲಿ ಮನುಷ್ಯನನ್ನು ಕಚ್ಚಿದರೆ ಅಥವಾ ಅದರ ಎಂಜಲು, ಮೂತ್ರ, ಮಲ ಅಥವಾ ಇಲಿಯ ದೇಹದ ದ್ರವ ಮನುಷ್ಯನ ಚರ್ಮಕ್ಕೆ ತಾಕಿದರೆ ಸೋಂಕು ಉಂಟಾಗಬಹುದು ಎಂದು ಅವರು ತಿಳಿಸಿದರು. ಇಲಿಯ ಬಾಯಿಯಿಂದ, ಕಣ್ಣಿನಿಂದ



ಬರುವಂತಹ ದ್ರವವು ಕೂಡ ಹಾನಿಕಾರಕವಾಗಬಹುದು. ಕೆಲವು ಬಾರಿ ಸೋಂಕಿತ ಇಲಿಗಳು ತಮ್ಮ ಉಗುರಿನಿಂದ ಪರಿಚಿದರೆ ಅಥವಾ ಹಲ್ಲಿನಿಂದ ಕಚ್ಚಿದರೂ ಕೂಡ ಇಲಿ ಜ್ವರ ಬರಬಹುದು. ಹಾಗಾಗಿ ಮನೆಯ ಸುತ್ತಲು ಜಾಗ್ರತೆ ವಹಿಸಬೇಕು ಎಂದು ಹೇಳಿದರು. ಇಲಿ ಜ್ವರ ದನ, ಎಮ್ಮೆ, ಕುರಿ, ಮೇಕೆ, ಹಂದಿ, ನಾಯಿ, ಬೆಕ್ಕು ಸೇರಿದಂತೆ ಕಾಡು ಮೃಗಗಳಿಗೂ ಸಹ ಬರುವ ಸಾಧ್ಯತೆ ಇದ್ದು, ಇಲಿ ಹೆಗ್ಗಣಗಳಿಂದ ಹೆಚ್ಚು ಹರಡುವುದರಿಂದ ಇಲಿ ಜ್ವರ ಎಂದು ಹೇಳಲಾಗುತ್ತದೆ. ಕೆಲವು ಬಾರಿ ಸೋಂಕಿತ ಇಲಿಗಳನ್ನು ಹಿಡಿದಿರುವ ಬೆಕ್ಕುಗಳು ಮತ್ತು ನಾಯಿಗಳಿಂದ ಕೂಡ ನಮಗೆ ರೋಗಬರುವ ಸಾಧ್ಯತೆ ಇರುತ್ತದೆ ಎಂದರು.

*ಲಕ್ಷಣಗಳು:*ಸಾಮಾನ್ಯವಾಗಿ ಮೈಕೈ ನೋವು, ತಲೆನೋವು, ವಾಕರಿಕೆ ಅಥವಾ ವಾಂತಿ, ಕೀಲುಗಳಲ್ಲಿ ನೋವು, ದುಗ್ಧರಸ ಗ್ರಂಥಿಗಳು ಊದಿಕೊಳ್ಳುವುದು, ಸೋಂಕು ಉಂಟಾದ ಎರಡು ದಿನಗಳಲ್ಲಿ ಮೈಮೇಲೆ ಗುಳ್ಳೆಗಳು ಬರುವುದು ಮತ್ತು ಇಲಿ ಕಚ್ಚಿದ ಜಾಗದಲ್ಲಿ ಗುಳ್ಳೆಗಳು ಕಾಣಿಸಿಕೊಳ್ಳಬಹುದು. ಅಲ್ಲದೇ ಕೇವಲ 3 ದಿನಗಳಲ್ಲಿ ಅಥವಾ 3 ವಾರಗಳ ಅಂತರದಲ್ಲಿ ರೋಗ ಉಲ್ಬಣವಾಗುವ ಸಾಧ್ಯತೆ ಇರುತ್ತದೆ ಎಂದು ಅವರು ತಿಳಿಸಿದರು.

*ಏನು ಹಾನಿ?:*ಸರಿಯಾದ ಸಮಯಕ್ಕೆ ಚಿಕಿತ್ಸೆ ತೆಗೆದುಕೊಳ್ಳದಿದ್ದರೆ ಸೋಂಕಿತರ ಕಿಡ್ನಿ ಹಾನಿಯಾಗಬಹುದು, ಲಿವರ್ ತನ್ನ ಚಟುವಟಿಕೆಯು ಸಂಪೂರ್ಣವಾಗಿ ನಿಲ್ಲಿಸಬಹುದು, ಬೆನ್ನುಹುರಿ ನೋವು ಕಾಣಿಸಿಕೊಳ್ಳಬಹುದು, ನ್ಯೂಮೋನಿಯ ಬರುವ ಸಾಧ್ಯತೆ ಇರುತ್ತದೆ. ಸಾಮಾನ್ಯವಾಗಿ ಇಲಿ ಜ್ವರಕ್ಕೆ ಚಿಕಿತ್ಸೆ ಪಡೆ–ಯದೇ ಇದ್ದಲ್ಲಿ ವಿವಿಧ ಅಂಗಾಂಗಗಳ ಹಾನಿಯಾಗುವ ಜೊತೆಗೆ ಮರಣವು ಸಹ ಸಂಭವಿಸಬಹುದು ಎಂದು ಹೇಳಿದರು. ಸಾಮಾನ್ಯವಾಗಿ ಶಂಕಿತ ವ್ಯಕ್ತಿಗಳನ್ನು ಅವರ ರಕ್ತದ ಪರೀಕ್ಷೆಯ ಮೂಲಕ ಲೆಪ್ಟೋಸ್ಪೈರೊಸಿಸ್ ಐಜಿಎಮ್ ಎಲಿಜ ಟೆಸ್ಟ್ ಮೂಲಕ ಖಚಿತ ಪಡಿಸಬಹುದಾಗಿದೆ. ಒಂದು ವೇಳೆ ಒಂದೇ ಪ್ರದೇಶದಲ್ಲಿ ಒಂದಕ್ಕಿಂತ ಹೆಚ್ಚು ಖಚಿತ ಪ್ರಕರಣಗಳು ಕಂಡು ಬಂದಲ್ಲಿ ಮತ್ತು ವಲಸೆ ಪ್ರದೇಶದಲ್ಲಿ ಪ್ರಕರಣ ಕಂಡುಬಂದಲ್ಲಿ ಹೆಚ್ಚಿನ ಪರೀಕ್ಷೆಗಾಗಿ ರಕ್ತ ಮಾದರಿಯನ್ನು ಮಂಗಳೂರಿಗೆ ಕಳುಹಿಸಿ ರಾಜ್ಯಮಟ್ಟದ ಪ್ರಯೋಗಾಲಯದಲ್ಲಿ ಮ್ಯಾಟ್ ಪರೀಕ್ಷೆ ಮಾಡಿಸಲಾಗುವುದು. ರೋಗದ ಲಕ್ಷಣಗಳು ಕಂಡುಬಂದ ತಕ್ಷಣ ಹತ್ತಿರ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಲು ಮರೆಯಬಾರದು ಮತ್ತು ಚಿಕಿತ್ಸೆಯನ್ನು ವೈದ್ಯರ ಸಲಹೆ ಮೇರೆಗೆ ಸಂಪೂರ್ಣವಾಗಿ ಪಡೆದುಕೊಳ್ಳಬೇಕು ಎಂದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮಾತನಾಡಿ, ಸಾಮಾನ್ಯವಾಗಿ ಮನೆಯ ಸುತ್ತಲೂ ಇಲಿ ಕಂಡುಬರುವುದು ಸಹಜವಾಗಿರುವುದರಿಂದ ಮನೆಯ ಸುತ್ತಲಿನ ಗೋಡೆಗಳಲ್ಲಿ ಅಥವಾ ನೆಲದ ಕೆಳಭಾಗದಲ್ಲಿ ಸಣ್ಣ ಬಿಲಗಳು ಕಂಡುಬಂದರೆ ಅವುಗಳನ್ನು ಮುಚ್ಚಿಸುವ ಕ್ರಮವಾಗಬೇಕು ಎಂದರು. ಮನೆಯಲ್ಲಿ ಆಹಾರ ಪದಾರ್ಥವನ್ನು ಮುಚ್ಚಿಡಬೇಕು. ಮನೆಯ ಸುತ್ತಲೂ ಅಥವಾ ಅಕ್ಕಪಕ್ಕ ಅನಗತ್ಯವಾದ ಕಸದ ರಾಶಿ ಇರದಂತೆ ನೋಡಿಕೊಳ್ಳಬೇಕು. ಹೊರಗಡೆಯಿಂದ ಮನೆಗೆ ಬಂದಾಗ ಕೈ ಮತ್ತು ಕಾಲುಗಳನ್ನು ಸ್ವಚ್ಛ ನೀರಿನಿಂದ ತೊಳೆದುಕೊಳ್ಳಬೇಕು. ಮನೆಯ ಹೊರಗಡೆ ಸೇರಿದಂತೆ ಹೊಲ ಗದ್ದೆಗಳಲ್ಲಿ ಕೆಲಸ ಮಾಡುವಾಗ ಇಲಿಗಳಿಂದ ಜಾಗ್ರತೆ ವಹಿಸಬೇಕು ಎಂದು ಹೇಳಿದರು.

ಮನೆಯ ಹೊರಗಡೆ ಕಾರ್ಯನಿರ್ವಹಿಸುವಾಗ ತಪ್ಪದೇ ಪಾದರಕ್ಷೆ ಧರಿಸಬೇಕು. ಒಂದು ವೇಳೆ ಇಲಿ ಎಂಜಲು ಅಥವಾ ನಮ್ಮ ದೇಹದ ಮೇಲಿನ ಗಾಯಕ್ಕೆ ಸಂಪರ್ಕಿಸಿದರೆ ಅಥವಾ ಕಡಿದರೆ ತಕ್ಷಣವೇ ಸೋಪಿನಿಂದ ಚೆನ್ನಾಗಿ ತೊಳೆದು ಆಸ್ಪತ್ರೆಗೆ ವೈದ್ಯರ ಬಳಿ ತೆರಳಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಕಾಶಿಪ್ರಸಾದ್, ವೈದ್ಯಾಧಿಕಾರಿ ಡಾ.ಶಗುಪ್ತಾ, ತಾಲ್ಲೂಕು ಸಾಂಕ್ರಾಮಿಕ ರೋಗ ನಿರ್ವಾಹಕ ಶಾಸ್ತ್ರಜ್ಞ ನವೀನ್ ಸೇರಿದಂತೆ ಸಿಬ್ಬಂದಿಗಳಾದ ಮಂಜುಳಾ, ಅರುಣಾ, ಜಿಲಾನ್ ಇದ್ದರು.

### ಅನಧಿಕೃತ ಆಸ್ಪತ್ರೆಗಳಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಲಿ

# ಪರಶುರಾಮ್ ಮಹಲ್ ರೋಜಾ ಆಗ್ರಹ



**ಮಲ್ಲಮ್ಮ ನುಡಿ ವಾರ್ತೆ**

ಬೀದರಶ್ರೀರಂಗಪಟ್ಟಣಹೆದ್ದಾರಿಗೆ ಹೊಂದಿಕೊಂಡಿರುವ ನಗರದ ಕನ್ನೆಕೋಳೋರ್ ಅಗಸೆಯಿಂದ ಭೀಮರಾಯನಗುಡಿ ರಸ್ತೆಗೆ ಹೊಂದಿಕೊಂಡರು ಪ್ರದೇಶಗಳಲ್ಲಿ ಅನೇಕ ಕಾಸಿಗೆ ಆಸ್ಪತ್ರೆಗಳು ತಲೆಯೆತ್ತಿವೆ. ಇವುಗಳನ್ನು ಹೆಚ್ಚಿನ ಆಸ್ಪತ್ರೆಗಳನ್ನು ಇಲಾಖೆಯ ಪರವಾನಿಗೆ ಇಲ್ಲದೆ ನಡೆಸಲಾಗುತ್ತದೆ ಎಂದು ಸಾರ್ವಜನಿಕರ ಆರೋಪಿಸಿದ್ದಾರೆ. ನಗರದ ಹಲವು ಆಸ್ಪತ್ರೆಗಳಿದ್ದು. ಇನ್ನುಳಿದ ಆಸ್ಪತ್ರೆಯವರು ಪರವಾನಿಗೆ ಪಡೆದಿದ್ದಾರೋ ಇಲ್ಲವ್ರೋ ಎಂಬುದು ಸಾರ್ವಜನಿಕರಲ್ಲಿ ಗೊಂದಲ ಹಾಗೂ ತಲ್ಲಣ ಉಂಟಾಗಿದೆ ಎಂದು ಪರಶುರಾಮ ಮಹಲ್ ರೋಜಾ ಆರೋಪಿಸಿದ್ದಾರೆ. ನಗರದ ವಾರದಲ್ಲೊಂದಾದರೂ ನಿರ್ಲಕ್ಷದ ಪ್ರಕರಣಗಳು ವರದಿಯಾಗುತ್ತದೆ. ಆದರೆ ತಾಲೂಕ್ ಆಡಳಿತವೂ ಮೌನಕ್ಕೆ ಜಾರಿದೆ ನಗರದಲ್ಲಿ ಸ್ಥಾಪಿಸಿರುವ ಖಾಸಗಿ ಆಸ್ಪತ್ರೆಗಳಿಗೆ ಖುದ್ದಾಗಿ ಆರೋಗ್ಯ ಇಲಾಖೆ ತಂಡವು ಭೇಟಿ ನೀಡಿ. ಅಲ್ಲಿನ ಸೌಲಭ್ಯ ಹಾಗೂ ಹಾಗೂ ಪರವಾನಿಗೆ ತೆಗೆದುಕೊಂಡು ಮಾಹಿತಿ ಒಳಗೊಂಡ ವಿವರ ಹಾಗೂ ಸೇವೆ ಸಲ್ಲಿಸುವ ವೈದ್ಯರ ಹೆಸರು ಸಾರ್ವಜನಿಕವಾಗಿ ಪ್ರದರ್ಶಿಸುವಂತೆ ವ್ಯವಸ್ಥೆ ಮಾಡಬೇಕು. ಜೊತೆಗೆ ತಾವು ತೆಗೆದುಕೊಳ್ಳುವ ಶುಲ್ಕವೆಚ್ಚವನ್ನು ಸಾರ್ವಜನಿಕರಿಗೆ ಕಪ್ಪುಹಲಗೆಯ ಮೇಲೆ ಮಾಹಿತಿ ಆಸ್ಪತ್ರೆಯಲ್ಲಿ ವಿವರಣೆ ನೀಡಬೇಕು. ಜಿಲ್ಲಾ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ಓದಿನಲ್ಲಿ ಆಸಕ್ತಿ ಮೂಡಿಸಲು ತೂಗು ಲೈಬ್ರರಿ-ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.21-ಮಕ್ಕಳಲ್ಲಿ ಕತೆಗಳ ಮೂಲಕ ಓದಿನಲ್ಲಿ ಆಸಕ್ತಿ ಮತ್ತು ಆತ್ಮಸ್ಥೈರ್ಯ ಮೂಡಿಸುವಉದ್ದೇಶದಿಂದತೂಗು ಲೈಬ್ರರಿ ತೆರೆಯಲಾಗಿದೆ ಎಂದು ಮಾಜಿ ಶಾಸಕ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಬಿ.ವಿ.ವಿ.ಸಂಘದ ಬಸವೇಶ್ವರ ಅಂತರಾಷ್ಟ್ರೀಯ ಪಬ್ಲಿಕ್ ಶಾಲೆ ಹಾಗೂ ಮಚಾನಿ ಗ್ರೂಪ್ನ ಇಂಡಿ ವಿಲ್ಲೇಜ ಫೌಂಡೇಶನ್ ವತಿಯಿಂದ ಬಿ.ವಿ.ವಿ ಸಂಘದ 15 ಶಾಲೆಗಳಿಗೆ ತೂಗು ಲೈಬ್ರರಿ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ತೂಗು ಲೈಬ್ರರಿಯಲ್ಲಿ ವಿವಿಧ ರೀತಿಯ 2000 ಕಥೆ ಪುಸ್ತಕಗಳನ್ನು ಇಂಡಿ ವಿಲ್ಲೇಜ ಫೌಂಡೇಶನ್ ನಿಂದ ನೀಡಲಾಗಿದೆ ಎಂದರು.

ಮಕ್ಕಳಲ್ಲಿ ಆಧುನಿಕತೆಗೆ ತಕ್ಕಂತೆ ಅವರ ಸರ್ವಾಂಗಿಣ ಜ್ಞಾನ ಅಭಿವೃದ್ಧಿಗೆ ಇವುಗಳು ಸಹಕಾರಿಯಾಗಲಿವೆ.ಬಿ.ವಿ.ವಿ.ಸಂಘ ಸುಮಾರು 15 ಶಾಲೆಗಳಲ್ಲಿ ಈ ತೂಗು ಲೈಬ್ರರಿಗಳನ್ನು ಪ್ರಾರಂಭಿಸುತ್ತಿದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಇಂಡಿ ವಿಲ್ಲೇಜ ಫೌಂಡೇಶನ ಹಾಗೂ ಬಿ.ವಿ.ವಿ.ಸಂಘದಯೋಜನೆಗಳಿಂದ ಸಾಕಷ್ಟು ಜನ ವಿದ್ಯಾರ್ಥಿಗಳು ಇಲ್ಲಿ ತರಬೇತಿ ಪಡೆದು ಉದ್ಯೋಗಿಗಳಾಗುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಶಾಲೆ ಮತ್ತು ಕಾಲೇಜು ವಿಧ್ಯಾರ್ಥಿಗಳು ಈ ಯೋಜನೆಗಳ ಸದುಪಯೋಗ ಪಡೆಯಬೇಕು ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಇಂಡಿ ವಿಲ್ಲೇಜ ಫೌಂಡೇಶನನ ಕೌಶಲ್ಯ ತರಬೇತಿ ಪೂರ್ಣಗೊಳಿಸಿದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಮಹಿಳಾ ಕಾಲೇಜಿನ 15 ವಿದ್ಯಾರ್ಥಿನಿಯರಿಗೆ ಪ್ರಮಾಣ ಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಆಡಳಿತಮಂಡಳಿಯ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಪ್ರಾಚಾರ್ಯ ಸುರೇಶ ಹೆಗಡೆ, ಬಿ.ಎಸ್. ಅಂಗಡಿ. ಇಂಡಿ ವಿಲ್ಲೇಜನ ವ್ಯವಸ್ಥಾಪಕರಾದ ಕೃಷ್ಣ, ತೂಬ, ದೀಪಾ, ರಾಘವೇಂದ್ರ, ರೋಹನ್ ಮತ್ತು ತಮ್ಮನಗೌಡ ಸೇರಿದಂತೆ ಅನೇಕರು ಇದ್ದರು.

# ಬ್ಯಾಂಕರ್‌ಗಳಿಗೆ ಜಿಲ್ಲಾ ಮಟ್ಟದ ಕಾರ್ಯಾಗಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.21-ಜಿಲ್ಲೆಯ ಬದಾಮಿ, ಬಾಗಲಕೋಟೆ, ಬೀಳಗಿ, ಗುಳೇದಗುಡ್ಡ, ಹುನಗುಂದ, ಇಳಕಲ್ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಬ್ಯಾಂಕ್ ವ್ಯವಸ್ಥಾಪಕರುಗಳಿಗೆ ಎನ್. ಆರ್.ಎಲ್.ಎಂ ಯೋಜನೆಯ ಸ್ವ-ಸಹಾಯ ಸಂಘಗಳ ಬ್ಯಾಂಕ್ ಲಿಂಕೇಜ್ ಹಾಗೂ ಎಂಟರ್ಪ್ರೈಸ್ ಫೈನಾನ್ಸಿಂಗ್, ಸರ್ಕಾರದ ಯೋಜನೆಗಳ ಕುರಿತು ಹಮ್ಮಿಕೊಂಡ ಒಂದು ದಿನದ ಜಿಲ್ಲಾಮಟ್ಟದ ಕಾರ್ಯಾಗಾರವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ್ ಕುರೇರ ಉದ್ಘಾಟಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಬೆಂಗಳೂರಿನ ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎನ್ ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಅಭಿಯಾನ ನಿರ್ವಹಣಾ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ಬ್ಯಾಂಕ್ ಸಾಲಕ್ಕಾಗಿ ಅರ್ಜಿ ಸಲ್ಲಿಸುವ ಸಂಘಗಳಿಗೆ ವಿಳಂಬ ಮಾಡದೇ ಸಾಲ ಮಂಜೂರು ಮಾಡಲು ಕರೆ ನೀಡಿದರು.

ಇದರಿಂದ ಮಹಿಳೆಯರು ಜೀವನೋಪಾಯ ಚಟುವಟಿಕೆ ಆರಂಭಿಸಲು, ಚಟುವಟಿಕೆ ಅಭಿವೃದ್ಧಿ ಪಡಿಸಲು ಅನುಕೂಲವಾಗಿ ಮಹಿಳೆಯರು ಆರ್ಥಿಕ ಅಭಿವೃದ್ಧಿ ಹೊಂದಲು ಸಹಾಯವಾಗುತ್ತದೆ. ಪ್ರತಿ ಗ್ರಾಮ ಪಂಚಾಯತನಲ್ಲಿ ಸಂಜೀವಿನಿ ಯೋಜನೆಯಡಿ ರಚಿಸಲಾದ ಒಕ್ಕೂಟಗಳಿವೆ ಬ್ಯಾಂಕ್ & ಒಕ್ಕೂಟಗಳು ಸಹಯೋಗದೊಂದಿಗೆ ಗ್ರಾಮೀಣ ಭಾಗದ ಜನರ ಪಿಎಂಎಸ್‌ಬಿವಾಯ್ ಮತ್ತು ಪಿಎಂಜೆಜೆಬಿವಾಯ್ ವಿಮೆ ಮಾಡಿಸಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಡಾ.ಪುನೀತ್ ಬಿ.ಆರ್, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಜಿಲ್ಲಾ ಅಗ್ರಣಿ ಬ್ಯಾಂಕ್ ವ್ಯವಸ್ಥಾಪಕ ರಾಜಕುಮಾರ ಹೂಗಾರ, ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಸುಂದರೇಶ ಆರ್ ಹಾಗೂ ಎನ್.ಆರ್.ಎಲ್.ಎಮ್ ಜಿಲ್ಲಾ & ತಾಲೂಕು ಘಟಕದ ಸಿಬ್ಬಂದಿಗಳು ಹಾಜರಿದ್ದರು.

# ಕಲಾದಗಿ ಶಿಕ್ಷಕರ ಪತ್ತಿನ ಸಂಘಕ್ಕೆ ಹಾಲಿಗೇರಿ ಅಧ್ಯಕ್ಷ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.22-ತಾಲೂಕಿನ ಕಲಾದಗಿಯ ಗ್ರುಪ್ ಶಿಕ್ಷಕರ ಪತ್ತಿನ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಎಚ್.ಬಿ.ಹಾಲಿಗೇರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಉಪಾಧ್ಯಕ್ಷರಾಗಿ ಎಚ್.ಜಿ.ಬಿರಾದಾರ ಪಾಟೀಲ ಆಯ್ಕೆಯಾಗಿದ್ದು, ನಿರ್ದೇಶಕರುಗಳಾಗಿ ವಾಯ್.ಎಸ್.ಟಕ್ಕಳಕಿ, ಸಿ.ಎಲ್. ಹೂಗಾರ, ವಾಯ್.ಎಲ್. ತಿಗಳಪ್ಪನವರ, ಎಂ.ಎ.ಗೋರಿ, ಎಸ್.ಎಸ್.ಕಾಳವ್ವಗೋಳ, ಎ.ಐ.ಸಯ್ಯದ್, ಐ.ಡಿ.ಹಿರೇಮಠ, ಎಸ್.ಎಸ್.ಬಿರಾದಾರ, ಎಲ್.ಪಿ.ರಾಠೋಡ, ಶ್ರೀಕಾಂತ ಕೆರಕಲಮಟ್ಟಿ, ಜೆ.ಡಿ.ದಂಡಿನಮಠ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮಂಜುಳಾ ಚಲವಾದಿ ತಿಳಿಸಿದ್ದಾರೆ.

# ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಕ್ರೀಡಾ ಕಿಟ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಹಲಗೇರಿಯ ಶ್ರೀ ರಾಜರಾಜೇಶ್ವರಿ ಶಾಲೆಯಲ್ಲಿ ಕ್ರೀಡಾಕಿಟ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ವೀರಣ್ಣ ಕಂಬಳಿ ಮಾತನಾಡಿ ಮಹಿಳಾ ಧ್ವನಿ ಸಂಸ್ಥೆಯು ಗ್ರಾಮೀಣ ಶಾಲೆಯ ಅಭಿವೃದ್ಧಿಗೆ ವಿವಿಧ ಕಾರ್ಯಕ್ರಮ ಆಯೋಜಿಸಿ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದೆ. ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿದೆ. ಮಕ್ಕಳ ದೈಹಿಕ ಮತ್ತು ಮಾನಸಿಕ ವಿಕಸನಕ್ಕಾಗಿ ಕ್ರೀಡಾ ಸಾಮಾಗ್ರಿಗಳನ್ನು ವಿತರಿಸಿದ್ದಾರೆ ಅವರ ಕಾರ್ಯ ಶ್ಲಾಘನೀಯ ಎಂದರು. ಇದೇ ವೇಳೆ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಅವರು ಮಕ್ಕಳಿಗೆ ವಾಲಿಬಾಲ್, ನೆಟ್ ಥ್ರೋ ಬಾಲ್, ಸೆಟಲ್ ಕಾಕ್ ಹಾಗೂ ವಿವಿಧ ಕ್ರೀಡಾ ಸಾಮಾಗ್ರಿಗಳನ್ನು ನೀಡಿ ಕ್ರೀಡೆಗೆ ಪ್ರೋತ್ಸಾಹಿಸಿದರು.

ಇದೇ ವೇಳೆ ಬಿ.ಎನ್.ಹೊರಪೇಟಿ, ಬಸವರಾಜ, ಶ್ವೇತಾ, ನ'ವೀನ, ಲಕ್ಷ್ಮೀ ಮತ್ತು ಮುದ್ದು ಮಕ್ಕಳು ಉಪಸ್ಥಿತಿ ಇದ್ದರು.

# ಪಿ.ಎಲ್.ಹೂಗಾರ ದತ್ತಿ ಸಾಹಿತ್ಯ ಪ್ರಶಸ್ತಿ ಪ್ರಕಟ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.22-ಬಾಗಲಕೋಟೆ ಕನ್ನಡ ಸಾಹಿತ್ಯ ಪರಿಷತ್ತು ಕಲಾದಗಿ ಪಿ.ಎಲ್. ಹೂಗಾರ ದತ್ತಿ ಸಾಹಿತ್ಯ ಪ್ರಶಸ್ತಿಗೆ 2024ರ ಜಿಲ್ಲಾ ಕ್ರಿಯಾಶೀಲ ಲೇಖಕ ಮತ್ತು ಕ್ರಿಯಾಶೀಲ ಲೇಖಕಿ ಸಾಹಿತ್ಯ ಪ್ರಶಸ್ತಿಯನ್ನು ಪ್ರಕಟಿಸಿದೆ. ದತ್ತಿದಾನಿಗಳಾದ ಪಾಂಡಪ್ಪ ಲಕ್ಷ್ಮಣ ಹೂಗಾರ ಅವರು ತಮ್ಮ ತಾಯಿ ಲಿಂ.ಬಾಗವ್ವ ಹಾಗೂ ತಂದೆ ದಿ.ಲಕ್ಷ್ಮಣ ಪಾಂಡಪ್ಪ ಹೂಗಾರ ಅವರ ಸ್ಮರಣಾರ್ಥ ಕೊಡಮಾಡುವ 2024 ರ ಕ್ರಿಯಾಶೀಲ ಲೇಖಕ ಪ್ರಶಸ್ತಿಗೆ ಜ್ಯೋತಿಬಾ ಅವತಾಡೆ, ಆರ್.ಸಿ.ಚಿತ್ತವಾಡಗಿ, ಹೆಚ್. ಎಸ್ ಗೌಡರ ಅವರನ್ನು ಆಯ್ಕೆ ಮಾಡಲಾಗಿದೆ. ಹೂಗಾರು ಅವರ ತಮ್ಮ ಅಜ್ಜಿ ಲಿಂ.ಯಮನವ್ವ ಪಾಂಡಪ್ಪ ಹೂಗಾರ ಹಾಗೂ ಶಿವಶರಣೆ ಶಂಕ್ರಮ್ಮ ಹೂಗಾರ ಅವರ ಸ್ಮರಣಾರ್ಥ ಕೊಡಮಾಡುವ 2024 ರ ಜಿಲ್ಲಾ ಕ್ರಿಯಾಶೀಲ ಲೇಖಕಿ ಪ್ರಶಸ್ತಿಗೆ ರೂಪಾ ಮಡ್ಡಿಮನಿ, ಡಾ.ಶ್ರೀದೇವಿ ಸುವರ್ಣಖಂಡಿ ಅವರು ಆಯ್ಕೆಯಾಗಿದ್ದಾರೆ ಎಂದು ಕಸಾಪ ಜಿಲ್ಲಾಧ್ಯಕ್ಷ ಶಿವಾನಂದ ಶೆಲ್ಲಿಕೇರಿ ತಿಳಿಸಿದ್ದಾರೆ.

ಜನೇವರಿ 31 ರಂದು ಕಲಾದಗಿಯಲ್ಲಿ ನಡೆಯುವ ದತ್ತಿ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದೆಂದು ಕಸಾಪ ಪ್ರಕಟಣೆ ತಿಳಿಸಿದೆ.

# ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆ: ಪ್ರಥಮ ಸ್ಥಾನ ಪಡೆದ ಪೂರ್ಣಿಮಾ ಕೆಂಭಾವಿ



ಮಲ್ಲಮ್ಮ ನುಡಿ ವಾರ್ತೆ

ಇಂಡಿ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಧಾರವಾಡ ಹಾಗೂ ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಧಾರವಾಡದಲ್ಲಿ ಮಕ್ಕಳ ದಿನಾಚರಣೆ ಪ್ರಯುಕ್ತ ಜರುಗಿದ ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ತಾಲೂಕಿನ ಶಿರಕನಹಳ್ಳಿ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ 7ನೇ ವರ್ಗದ ವಿದ್ಯಾರ್ಥಿನಿ ಪೂರ್ಣಿಮಾ ಕೆಂಭಾವಿ ಇಡೀ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾಳೆ.

ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಹಾಗೂ ಯೋಜನಾಧಿಕಾರಿ ಭಾರತಿ ಶೆಟ್ಟರ ಅವರು ವಿಜೇತ ಪೂರ್ಣಿಮಾಳಿಗೆ ಪ್ರಶಸ್ತಿ ಪತ್ರ ಹಾಗೂ 25000 ರೂ.ಗಳ ಚೆಕ್ ನೀಡಿ ಗೌರವಿಸಿದ್ದಾರೆ. ರೈತರಾದ ತಂದೆ ರಮೇಶ ಹಾಗೂ ತಾಯಿ ಮಲ್ಲಮ್ಮಳ ಸುಪುತ್ರಿಯಾದ ಪೂರ್ಣಿಮಾ ಕೆಂಭಾವಿ-ಈ ವಿದ್ಯಾರ್ಥಿನಿಯ ಸಾಧನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಟಿ ಎಸ್ ಆಲಗೂರ, ಕ್ಷೇತ್ರ ಸಮನ್ವಯಾಧಿಕಾರಿ ಎಸ್ ಆರ್ ನಡುಗಡ್ಡಿ, ಶಿಕ್ಷಣ ಸಂಯೋಜಕ ಪ್ರಕಾಶ ನಾಯಕ, ಬಿ ಆರ್ ಪಿ ಎ ಜಿ ಚೌಧರಿ, ಸಿ ಆರ್ ಪಿ ಸಂತೋಷ ನೆರಕಿ, ಮುಖ್ಯ ಶಿಕ್ಷಕ ಭೀಮು ಲಮಾಣಿ, ಎಸ್ ಡಿ ಎಂ ಸಿ ಅಧ್ಯಕ್ಷ ಶಂಕರಗೌಡ ಪಾಟೀಲ ಸೇರಿದಂತೆ ಶಾಲಾ ಶಿಕ್ಷಕರು, ಎಸ್ ಡಿ ಎಂ ಸಿ ಸದಸ್ಯರು, ಗ್ರಾಮಸ್ಥರು ಅಭಿನಂದನೆ

ಜಾಹೀರಾತಿಗಾಗಿ
ಇಂದೇ
ಸಂಪರ್ಕಿಸಿರಿ:8971850542

# ಅಂಬಿಗರ ಚೌಡಯ್ಯ, ಮಹಾಯೋಗಿ ವೇಮನರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.21-ಶರಣರಿಗೆ ಕಾಯಕ ಮತ್ತು ದಾಸೋಹ ವ್ಯವಸ್ಥೆ ಮುಖ್ಯ ಧ್ಯೇಯವಾಗಿತ್ತು. ಶರಣರ ಅನುಭವದ ಮಾತುಗಳೇ ವಚನಗಳಾಗಿ ನಮಗೆ ದಾರಿದೀಪಗಳಾಗಿವೆ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಶಿವಾನಂದ ಜೀನನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ವತಿಯಿಂದ ಮಂಗಳವಾರ ಹಮ್ಮಿಕೊಂಡ ಅಂಬಿಗರ ಚೌಡಯ್ಯ ಹಾಗೂ ಮಹಾಯೋಗಿ ವೇಮನರ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಗಳಿಗೆ ಪುಷ್ಪಾಂಜಲಿ ಸಲ್ಲಿಸುವ ಮೂಲಕ ಗೌರವ ನಮನಗಳನ್ನು ಸಲ್ಲಿಸಿ ಮಾತನಾಡಿದರು.

ಶರಣರ ಸಂಗಮ ಅನುಭವ ಮಂಟಪದಲ್ಲಿ ವಚನಗಳ ಹಾಗೂ ಕಾಯಕ ದಾಸೋಹದ ವಿಶ್ಲೇಶಣೆ ನಡೆಯುತ್ತಿತ್ತು, ಅಂದು ಕಾಯಕ ದಾಸೋಹ ಧರ್ಮಾಚರಣೆಯೊಂದಿಗೆ ಕಾಯಕ ಮತ್ತು ದಾಸೋಹ ಮಾಡುವುದು ಶರಣರ ಮುಖ್ಯ ಧ್ಯೇಯವಾಗಿತ್ತು, ಅಂತ ಶರಣರಲ್ಲಿ ಅಂಬಿಗೇರ ಚೌಡಯ್ಯ ಕೂಡಾ ಒಬ್ಬರು. ಅವರು ತಮ್ಮ ವಚನಗಳ ಮೂಲಕ ಜೀವನ ಮೌಲ್ಯಗಳನ್ನು ಸಾರಿದ ಶ್ರೇಷ್ಠ ವಚನಕಾರರಾಗಿದ್ದರು ಎಂದು ಹೇಳಿದರು.

ಸಂತೆಯೊಳಗಿದ್ದೇ ಸಂತನಾದ ಮಹಾಯೋಗಿ ಜನಸಾಮಾನ್ಯರ ಕವಿ. ವೇಮನರು ಜಾತೀಯತೆ, ಅಂಧ ಶ್ರದ್ಧೆ, ಮೇಲು-ಕೀಳುಗಳನ್ನು ಧಿಕ್ಕರಿಸಿ ಸಮಾಜ ಸುಧಾರಣೆಗೆ ತಮ್ಮ ಬದುಕನ್ನೇ ಸಮರ್ಪಸಿಕೊಂಡವರು, ಅವರ ತತ್ವ ಚಿಂತೆಗಳು, ವಚನಗಳು ಮನುಕುಲಕ್ಕೆ ಸದಾ ದಾರೀ ದೀಪಗಳಾಗಿವೆ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಶರಣರು ಸತ್ಪುರುಷರು ನಾಡಿನ ಜ್ಞಾನ ದೀಪಗಳಾಗಿದ್ದಾರೆ ಎಂದರು. ನಗರಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಡಾ.ಎಂ.ಎಸ್.ದಡ್ಡೆನ್ನವರ, ಗುಂಡುರಾವ ಶಿಂಧೆ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾರಾವ, ಪ್ರಮಾ ಅಂಬಿಗೇರ, ಜ್ಯೋತಿ ಭಜಂತ್ರಿ, ಯಲ್ಲಪ್ಪ ನಾರಾಯಣಿ, ಬಸವರಾಜ ಯಂಕಂಚಿ, ಶಿವಾನಂದ ಟವಳಿ, ಮುತ್ತಣ್ಣ ಬೇಣ್ಣೂರ, ಪಾಂಡಪ್ಪ ಅಂಬಿಗೇರ, ನರಸಪ್ಪ ಅಂಭಿಗೇರ, ಹನಮಂತ ಗಬ್ಬೂರ, ಹಣಮಂತ ಬಿಚ್ಚೇಲಿ, ಬಸವರಾಜ ಅಂಬಿಗೇರ, ಮಲ್ಲು ಗಬ್ಬೂರ ಸೇರಿದಂತೆ ಅನೇಕರು ಇದ್ದರು.

# ಮೊಧೋಳ(ಬಿ):ಪಿ.ಕೆ.ಪಿ.ಎಸ್ ಅಧ್ಯಕ್ಷರಾಗಿ ಗುರುನಾಥ ವಟಗೆ ಉಪಾಧ್ಯಕ್ಷರಾಗಿ ವಿಠಲರಾವ ಅವಿರೋಧ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಮುಧೋಳ (ಬಿ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ , ಅಧ್ಯಕ್ಷರು - ಉಪಾಧ್ಯಕ್ಷರು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಗುರುನಾಥ ನಾಗನಾಥ ವಟಗೆ ಹಾಗೂ ಉಪಾಧ್ಯಕ್ಷರಾಗಿ ವಿಠಲರಾವ ಪುಂಡಜಿ ಹಾಸಿಖೇರ. ಪಿಕೆಪಿಎಸ್ ನಿರ್ದೇಶಕರಾಗಿ ಕಲೀಮುದ್ದೀನ ನವಾಜೊದ್ದಿನ, ವಿಶ್ವನಾಥ ದೊಂಡಿಬಾ, ಶಿವಾಜಿ ಶ್ರೀಪಠರಾವ್, ಪಂಢರಿ ಬಾಬುರಾವ್, ರಾಜಕುಮಾರ ಬಿಚ್ಚಕುಂಡೆ, ರಾಜೇಂದ್ರ ಜಾಧವ, ಸುನೀತಾ ಹಲ್ಕಾಯೆ, ಸಂಗೀತಾ ಬಾಸ ಗುರು ರಾಜಣ್ಣ ಬಾಕರಾವ್ ಕೋಲಿ ಅವರನ್ನು ಸನ್ಮಾನಿಸಿ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಚುನಾವಣಾಧಿಕಾರಿ ಪಿಡಿಒ ದತ್ತಾತ್ರೇಯ ಪೂಜಾರಿ, ಪಿಕೆಪಿಎಸ್ ಕಾರ್ಯದರ್ಶಿ ಬಸವರಾಜ ಸ್ವಾಮಿ ಹಾಗೂ ಗ್ರಾಮಸ್ಥರು, ಧನರಾಜ್ ಒಡೆ-ಯರ್, ಲಾಲ್ ಅಹಮದ್, ಬಸವರಾಜ ಒಂಟೆ, ಉದಯ ಹಲಕ್ಕೆ, ಶಿಮು ದಬ್ಬೆ, ದಿಲೀಪ್ ಬಿರಾದಾರ, ರಾಜಕುಮಾರ ಬಿಚ್ಚಕುಂದೆ, ಗಜಾನಂದ ವಟಗೆ,

# 11 ನೇ ಕೃಷಿ ಗಣತಿ ಕಾರ್ಯ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಇಂಡಿ:ತಾಲ್ಲೂಕಿನ ಗಣವಲಗಾ ಗ್ರಾಮದಲ್ಲಿ 11 ನೇ ಕೃಷಿ ಗಣತಿ 3ನೇ ಹಂತದ ಇನ್ ಪುಟ್ ಸಮಿಕ್ಷೇ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ವಿಜಯಪೂರ ಜಿಲ್ಲಾ ಸಂಖ್ಯಾ ಸಂಗ್ರಾಹಣ ಅಧಿಕಾರಿ (ಪ್ರಭಾರಿ) ಅಲ್ತಾಫ್ ಹಮ್ಮದ ಮನಿಯಾರ ಅವರು ಕೃಷಿ ಗಣತಿಯಲ್ಲಿ ಜಮೀನುಗಳ ಸಂಖ್ಯೆ, ವಿಸ್ತೀರ್ಣ, ವರ್ಗವಾರು ಹಂಚಿಕೆ, ಸಣ್ಣ, ಅತಿ ಸಣ್ಣ, ಮಧ್ಯಮ, ದೊಡ್ಡ ರೈತರನ್ನು ಗುರುತಿಸುವುದು, ಮಣ್ಣು ಪರೀಕ್ಷೆ, ಬೆಳೆಗಳ ಸಮಗ್ರ ಮಾಹಿತಿ, ಸಾಗುವಳಿ ಹಿಡುವಳಿದಾರರ ಸಂಖ್ಯೆ, ಭೂ ಬಳಕೆ, ಬೆಳೆ ವಿಭಾಗ, ಉತ್ಪಾದನೆ ಮೊದಲಾದ ಮಾಹಿತಿಗಳನ್ನು ಗಣತಿಯಲ್ಲಿ ಸಂಗ್ರಹಿಸಲಾಗುತ್ತದೆ.

ಕೃಷಿಯ ಸಮಗ್ರ ಮಾಹಿತಿ, ದತ್ತಾಂಶ ಸಂಗ್ರಹದ ಆಧಾರದ ಮೇಲೆ ಪ್ರತಿ ಕೃಷಿ ಕ್ಷೇತ್ರದ ರಚನೆ ಮತ್ತು ಗುಣ ಲಕ್ಷಣಗಳನ್ನು ತಿಳಿದು, ಕೃಷಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸಲು ಮತ್ತು ಪ್ರಗತಿ ಮೌಲ್ಯ ಮಾಪನಕ್ಕೆ ಗಣತಿ ಅಗತ್ಯವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಾಹಯಕ ಸಂಖ್ಯಾತಿ ಅಧಿಕಾರಿಗಳಾದ ಮಲ್ಲಾರಾವ ದಾದಾಜಿ, ಸಂದೀಪ ಜೋಶಿ, ಸುಷ್ಮಾ ಮಜ್ಜಗಿ, ಗೀತಾ ಕೇಸುಗೊಳ, ತಡವಲಗಾ ಗ್ರಾಮ ಆಡಳಿತ ಅಧಿಕಾರಿ ಮಹೇಶ್ ಗುರಬೆಟ್ಟ ಹಾಗೂ ರೈತರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬ್ಯಾಕಲಾಗ್ ಹುದ್ದೆ ಭರ್ತಿ:

## ಸಾರಿಗೆ ಸಚಿವರಿಂದ 26 ಜನರಿಗೆ ನೇಮಕಾತಿ ಪತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.22: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ 26 ಬ್ಯಾಕ್ ಲಾಗ್ ಹುದ್ದೆಗಳಿಗೆ ನೇಮಕಾತಿ ಆದೇಶ ಪತ್ರವನ್ನು ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಮಂಗಳವಾರ ಬೆಂಗಳೂರಿನ ಕೆ.ಎಸ್.ಆರ್.ಟಿ.ಸಿ ಪ್ರಧಾನ ಕಚೇರಿಯಲ್ಲಿ ವಿತರಿಸಿದರು.

2017ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಪಂಗಡ ಮೀಸಲಾತಿಯ 36 ಹುದ್ದೆಗಳನ್ನು ಹಿಂಬಾಕಿ ಹುದ್ದೆಗಳೆಂದು ಗುರುತಿಸಲಾಗಿದ್ದು, ಅವುಗಳ ಪೈಕಿ 1 ಸಹಾಯಕ ಲೆಕ್ಕಿಗ, 8 ಕುಶಲಕರ್ಮಿ, 6 ಸಹಾಯಕ ಸಂಚಾರ ನಿರೀಕ್ಷಕ, 3 ತಾಂತ್ರಿಕ ಸಹಾಯಕ ಹಾಗೂ 7 ಕರಾಸಾ ಪೇದೆ ಸೇರಿ ಒಟ್ಟಾರೆ ಆಯ್ಕೆಗೊಂಡ 26 ಅಭ್ಯರ್ಥಿಗಳಿಗೆ ಈಗಾಗಲೆ ಕೌನ್ಸೆಲಿಂಗ್ ಮೂಲಕ ಕಾರ್ಯಸ್ಥಳ ನಿಯೋಜನೆ ಮಾಡಿದ್ದರಿಂದ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಛೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಸಚಿವರು ನೇಮಕಾತಿ ಆದೇಶಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಕಳೆದ ಒಂದೂವರೆ ವರ್ಷದಲ್ಲಿ ಕೆ.ಕೆ.ಅರ್.ಟಿ.ಸಿ. ನಿಗಮದಲ್ಲಿ 1,619 ಚಾಲಕ ಹಾಗೂ ಚಾಲಕ-ಕಂ-ನಿರ್ವಾಹಕರನ್ನು ನೇರ ನೇಮಕಾತಿ, 100 ಮೃತರಾವಲಂಬಿತರನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಹಾಗೂ ಇದೀಗ 25 ಜನರನ್ನು ಬ್ಯಾಕಲಾಗ್ ಸೇರಿ ಒಟ್ಟು 1,745 ನೇಮಕಾತಿ ಮಾಡಲಾಗಿದೆ ಎಂದರು.

ಇನ್ನು ನಿಗಮದಲ್ಲಿ ಸಾರಿಗೆ ಸೌಲಭ್ಯ ಸುಧಾರಣೆ ನಿಟ್ಟಿನಲ್ಲಿ 1,014 ಹೊಸ ಬಿ.ಎಸ್-6 ಮಾದರಿಯ ಬಸ್ ಗಳನ್ನು ಸೇರ್ಪಡೆಗೊಳಿಸಲಾಗಿದೆ. ಇದಲ್ಲದೆ 123 ನಗರ ಸಾರಿಗೆ ಬಸ್ ಹಾಗೂ 56 ಪ್ರೀಮಿಯಂ ಬಸ್ ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದರು.

ಈ ಸಂದರ್ಭದಲ್ಲಿ ಕೆ.ಕೆ. ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ ಸೇರಿದಂತೆ ನಿಗಮದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ಬೆಂಗಳೂರು. ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆಯ ಕ್ಯಾಲೆಂಡರ್ ಗಳನ್ನು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರಡ್ಡಿ, ಮತ್ತು ಮಾಜಿ ರಾಜ್ಯ ಸಭಾ ಸದಸ್ಯ ಕುಪೇಂದ್ರರಡ್ಡಿ, ಹಾಗೂ ರಡ್ಡಿ ಜನ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಶೇಖರ ರಡ್ಡಿ ರವರಿಗೆ ನೀಡಲಾಯಿತು.

### ಜ. 24 ರಂದು ಚಾಲಕರಿಗೆ ಗುಲಾಬಿ ಹೂ ನೀಡುವ

## ಮೂಲಕ ಅಭಿನಂದನೆ ಸಲ್ಲಿಕೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.22:ಸಾರ್ವಜನಿಕ ಪ್ರಯಾಣಿಕರು, ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಹಾಗೂ ಗ್ರಾಮಗಳ ಗಣ್ಯರಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಚಾಲಕರಿಗೆ ವಿಶೇಷವಾಗಿ ಒಂದು ಗುಲಾಬಿ ಹೂ ನೀಡಿ ಶುಭ ಕೋರಿ ಅಭಿನಂದನೆ ತಿಳಿಸುವ ಮೂಲಕ ಇದೇ ಜನವರಿ 24 ರಂದು "ಚಾಲಕರ ದಿನಾಚರಣೆ"ಯನ್ನು ಆಚರಿಸಬೇಕೆಂದು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕಲಬುರಗಿ ವಿಭಾಗ-2ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ. ಸಾರಿಗೆ ಕ್ಷೇತ್ರದಲ್ಲಿ ಪ್ರಯಾಣಿಕರಿಗೆ ಉತ್ತಮ, ಸುರಕ್ಷಿತಾ ಪ್ರಯಾಣದ ಸೌಲಭ್ಯವನ್ನು ಒದಗಿಸಿ ದೇಶದ ಸಮಗ್ರ ಅಭಿವೃದ್ಧಿಯಲ್ಲಿ ತೊಡಗಿಸಿಕೊಂಡಿರುವ ಚಾಲಕರ ಸಮುದಾಯವು ಬಹಳ ಪ್ರಮುಖ ಪಾತ್ರವನ್ನು ವಹಿಸಿ ನಿಗಮಕ್ಕೆ ಹಾಗೂ ಸಮಾಜಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದ್ದಾರೆ. ಇಂತಹ ಚಾಲಕರ ಕೊಡುಗೆಯನ್ನು ಗುರುತಿಸಿ ಸಮಾಜದಲ್ಲಿ ಗೌರವಾನ್ವಿತ ಸ್ಥಾನವನ್ನು ನೀಡಿ, ಚಾಲಕರ ಸಮುದಾಯದ ನೈತಿಕತೆಯನ್ನು ಹೆಚ್ಚಿಸಲು ರಸ್ತೆ ಸುರಕ್ಷತಾ ಉಪಕ್ರಮದ ಭಾಗವಾಗಿ ಚಾಲಕರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

# ಡಾ. ಗಿರೀಶ ಬದೋಲೆಗೆ ಅತ್ಯುತ್ತಮ ಚುನಾವಣಾಧಿಕಾರಿ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 22 : ಚುನಾವಣಾ ಆಯೋಗವು ಬೀದರ್ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ ಗಿರೀಶ ಬದೋಲೆ ಅವರಿಗೆ 2024-25ನೇ ಸಾಲಿನ ಅತ್ಯುತ್ತಮ ಚುನಾವಣಾಧಿಕಾರಿ ಪ್ರಶಸ್ತಿಗೆ ಆಯ್ಕೆ ಮಾಡಿದೆ.



2024- 25ನೇ ಸಾಲಿನಲ್ಲಿ ನಡೆಸಿದ ಲೋಕಸಭಾ ಚುನಾವಣೆ, ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಜಿಲ್ಲೆಯಲ್ಲಿ ನಡೆಸಿದ ಚುನಾವಾಣಾ ಕೆಲಸಗಳನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಈ ಪ್ರಶಸ್ತಿಯನ್ನು ಜ.25ರಂದು ಬೆಂಗಳೂರಿನಲ್ಲಿ ನಡೆಯಲಿರುವ ರಾಜ್ಯಮಟ್ಟದ ಮತದಾರರ ದಿನಾಚರಣೆಯಲ್ಲಿ ನೀಡಲಾಗುವುದು ಎಂದು ರಾಜ್ಯ ಚುನಾವಾಣಾ ಆಯೋಗದ ಪ್ರಕಟಣೆ ತಿಳಿಸಿದೆ.

# ಅತ್ಯುತ್ತಮ ಚುನಾವಣಾ ಪದ್ಧತಿ ಅಳವಡಿಕೆ:

## ಕಲಬುರಗಿ ಡಿ.ಇ.ಓ.ಗೆ ಚುನಾವಣಾ ಆಯೋಗದಿಂದ ಪ್ರಶಸ್ತಿ ಘೋಷಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.22: ಭಾರತ ಚುನಾವಣಾ ಆಯೋಗವು 2024-25ನೇ ಸಾಲಿನ ಅತ್ಯುತ್ತಮ ಚುನಾವಣಾ ಪದ್ಧತಿ ಅಳವಡಿಸಿಕೊಂಡು ಅನುಷ್ಠಾನಕ್ಕೆ ತಂದಿದ್ದಕ್ಕಾಗಿ ಅಧಿಕಾರಿಗಳು ಮತ್ತು ಸಂಸ್ಥೆಗಳಿಗೆ ಪ್ರಶಸ್ತಿ ಘೋಷಿಸಿದ್ದು, ಜನರಲ್ ಕೆಟಗರಿ ವಿಭಾಗದಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರಿಗೆ ಪ್ರಶಸ್ತಿ ಘೋಷಿಸಿದೆ.

ಈ ಕುರಿತು ರಾಜ್ಯದ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿರುವ ಭಾರತ ಚುನಾವಣಾ ಆಯೋಗವು ಇದೇ ಜನವರಿ 25 ರಂದು ನವದೆಹಲಿಯ ದೆಹಲಿ ಕಂಟೋನ್ಮೆಂಟ್ ಪ್ರದೇಶದ ಮಾಣಿಕಶಾ ಸೆಂಟರ್ ನಲ್ಲಿ ನಡೆಯುವ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದ್ದು, ಪ್ರಶಸ್ತಿ ಪುರಸ್ಕರು ಅಗಮಿಸಲು ಅಧಿಕೃತ ಆಹ್ವಾನ ನೀಡುವಂತೆ ತಿಳಿಸಿದೆ.

ಜನರಲ್ ಕೆಟಗರಿಯಲ್ಲಿ 11, ಸ್ಪೆಷಲ್ ಕೆಟಗರಿಯಲ್ಲಿ 3, ಅತ್ಯುತ್ತಮ ನಿರ್ವಹಣೆಗೆ 3 ರಾಜ್ಯದ ಸಿ.ಇ.ಓ ಗಳಿಗೆ ಹಾಗೂ ಅತ್ಯುತ್ತಮ ಇಲಾಖೆಗಳ ಭಾಗದಲ್ಲಿ ಕೇಂದ್ರದ ಎನ್.ಐ.ಸಿ, ರೈಲ್ವೆ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಇಲಾಖೆಗೆ ಇ.ಸಿ.ಐ ಪ್ರಶಸ್ತಿ ಘೋಷಿಸಿದೆ.

ಇನ್ನು ಜನರಲ್ ಕೆಟಗರಿಯಲ್ಲಿ ಐ.ಎ.ಎಸ್ ಅಧಿಕಾರಿಯಾಗಿರುವ 9 ಜನ ಜಿಲ್ಲಾ ಚುನಾವಣಾಧಿಕಾರಿಗೆ ಮತ್ತು ಇಬ್ಬರು ಐ.ಪಿ.ಎಸ್. ಅಧಿಕಾರಿಗಳಿಗೆ ಪ್ರಶಸ್ತಿ ಲಭಿಸಿದ್ದು, ಕಲಬುರಗಿ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಪ್ರಶಸ್ತಿಗೆ ಭಾನರಾದ ಕರ್ನಾಟಕದ ಏಕೈಕ ಅಧಿಕಾರಿಯಾಗಿದ್ದಾರೆ.



**ಬೆಳೆ ವಿಮೆ ಯೋಜನೆ:**

ಜಿಲ್ಲೆಯ 2.03 ಲಕ್ಷ ರೈತರಿಗೆ 76.94 ಕೋಟಿ ರೂ. ಪರಿಹಾರ ಜಮೆ

ಕಲಬುರಗಿ,ಜ.22: ಪ್ರಸಕ್ತ 2024-25ನೇ ಸಾಲಿನ ಬೆಳೆ ವಿಮೆ ಸ್ಥಳೀಯ ವಿಕೋಪದಡಿ ಜಿಲ್ಲೆಯ ಒಟ್ಟು 2,03,720 ರೈತರಿಗೆ 76.94 ಕೋಟಿ ರೂ. ಪರಿಹಾರ ರೈತರ ಬ್ಯಾಂಕ ಖಾತೆಗಳಿಗೆ ಜಮೆ ಮಾಡಲಾಗಿದ್ದು, ರೈತರು ತಮ್ಮ ಬ್ಯಾಂಕ್ಗಳಿಗೆ ಬೇಟಿ ನೀಡಿ ತಮ್ಮ ಖಾತೆಗೆ ಪರಿಹಾರ ಹಣ ಜಮೆಯಾಗಿರುವುದನ್ನು ಖಾತ್ರಿಪಡಿಸಿಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನ ಕಳೆದ ಅಗಷ್ಟ ಕೊನೆವಾರ ಹಾಗೂ ಸೆಪ್ಟಂಬರ್ ತಿಂಗಳ ಮೊದಲನೆ ವಾರದಲ್ಲಿ ಸುರಿದ ಮಳೆಯಿಂದಾಗಿ ವಿವಿಧ ಬೆಳೆಗಳು ಮತ್ತು ಸೆಪ್ಟಂಬರ್ ಹಾಗೂ ಅಕ್ಟೋಬರ ತಿಂಗಳಿನಲ್ಲಿ ಹೆಸರು, ಉದ್ದು ಹಾಗೂ ಸೋಯಾಬೀನ್ ಬೆಳೆಗಳು ಹಾಗೂ ನವೆಂಬರ್ ತಿಂಗಳಿನಲ್ಲಿ ಮಳೆ ಬಾರದೆ ತೊಗರಿ ಬೆಳೆ ಹಾಳಾದ ಕಾರಷ ರೈತರು ವಿಮೆ ಕಂಪನಿಗೆ ದೂರು ಸಲ್ಲಿಸಿದರು.

ದುರಿನಂತೆ ಇದೀಗ ಬೆಳೆ ವಿಮೆ ಪರಿಹಾರ ಜಮೆ ಮಾಡಲಾಗಿದೆ.

ಇದರ ಹೊರತಾಗಿ ಬಾಕಿ ಉಳಿದ ಅರ್ಹ ರೈತರಿಗೆ ಅಂತಿಮ ಪಾವತಿಯನ್ನು ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ನಿರ್ದರಿಸಿ ನೀಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಪ್ರಸಕ್ತ 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ತೊಗರಿ, ಹೆಸರು, ಉದ್ದು, ಸೋಯಾಬೀನ್ ಹತ್ತಿ ಹಾಗೂ ಇತರೆ ಬೆಳೆಗಳಿಗೆ ಒಟ್ಟಾರೆ ಜಿಲ್ಲೆಯಲ್ಲಿ 2,04,073 ರೈತರು ಬೆಳೆ ವಿಮೆ ನೋಂದಣಿ ಮಾಡಿಸಿಕೊಂಡಿದ್ದಾರೆ.

# ವಚನ ವಿಜಯೋತ್ಸವ ಪ್ರಚಾರಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 22 : ಬಸವ ಸೇವಾ ಪ್ರತಿಷ್ಠಾನದಿಂದ ಫೆ.10ರಿಂದ 12ರವರೆಗೆ ನಗರದ ಬಸವಗಿರಿಯಲ್ಲಿ ಹಮ್ಮಿಕೊಂಡಿರುವ 'ವಚನ ವಿಜಯೋತ್ಸವ' ಕಾರ್ಯಕ್ರಮದ ಪ್ರಚಾರಕ್ಕೆ ಇಲ್ಲಿನ ಶರಣ ಉದ್ಯಾನದಲ್ಲಿ ಸೋಮವಾರ ಚಾಲನೆ ನೀಡಲಾಯಿತು.

ಪ್ರಚಾರಕ್ಕೆ ಚಾಲನೆ ನೀಡಿ ಮಾತನಾಡಿದ ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆ ಅಕ್ಕ ಗಂಗಾಂಬಿಕೆ, 'ವಚನ ವಿಜಯೋತ್ಸವದ ಅಂಗವಾಗಿ ಫೆಬ್ರುವರಿಯಲ್ಲಿ ಮೂರು ದಿನ ಅರ್ಥಪೂರ್ಣ ಕಾರ್ಯಕ್ರಮಗಳು ನಡೆಯಲಿವೆ.

ವಚನ ಸಾಹಿತ್ಯ ಸಂರಕ್ಷಣೆಯ ಐತಿಹಾಸಿಕ ಘಟನೆಯನ್ನು ನಮ್ಮ ಯುವ ಜನಾಂಗಕ್ಕೆ ತಲುಪಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ' ಎಂದು ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, 'ಪ್ರತಿಯೊಬ್ಬರೂ ಮನೆಯ ಕಾರ್ಯಕ್ರಮ ಎಂದು ತಿಳಿದು ಯಶಸ್ವಿಗೊಳಿಸಬೇಕು. ಪ್ರಚಾರ ಕೂಡ ವ್ಯಾಪಕವಾಗಿ ಮಾಡಬೇಕು' ಎಂದರು.

ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬು ವಾಲಿ ಮಾತನಾಡಿ, 'ವಚನ ವಿಜಯೋತ್ಸವ ದಸರಾ ಉತ್ಸವದ ಮಾದರಿಯಲ್ಲಿ ಆಚರಿಸಬೇಕು. ಬಸವ ಸಂಸ್ಕೃತಿಯ ಪುನರುತ್ಥಾನಕ್ಕೆ ಎಲ್ಲರೂ ಸಮಯ ಕೊಡಬೇಕು' ಎಂದು ತಿಳಿಸಿದರು.

ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ವಿಶ್ವನಾಥ ಕಾಜಿ, ಶಕುಂತಲಾ ಬೆಲ್ದಾಳೆ, ಉಷಾ ಚಂದ್ರಕಾಂತ ಮಿರ್ಚೆ, ಧನರಾಜ ಹಂಗರಗಿ, ರಾಜೇಂದ್ರಕುಮಾರ ಗಂದಗೆ, ಜೈರಾಜ ಖಂಡ್ರೆ, ರಾಜಕುಮಾರ ಮಣಿಗೇರೆ, ಸುರೇಶ ಸ್ವಾಮಿ, ಸಿದ್ರಾಮಪ್ಪ ಕಪಲಾಪುರೆ, ಸುವರ್ಣ ಶರಣಪ್ಪ ಚಿಮಕೋಡೆ, ಯದಲಾಪುರ ಪಿಕೆಪಿಎಸ್ ಅಧ್ಯಕ್ಷ ಸಂತೋಷ ಪಾಟೀಲ ಹಾಗೂ ಪತ್ರಕರ್ತ ಆದೀಶ ವಾಲಿ ಪಾಲ್ಗೊಂಡಿದ್ದರು.

# ಬಾಣಂತಿಯರಿಗೆ ಖುದ್ದು ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದ ಸಚಿವರು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.22: ರಾಯಚೂರ ಜಿಲ್ಲೆಯ ಪ್ರವಾಸದಲ್ಲಿದ್ದ ಆರೋಗ್ಯ ಸಚಿವರಾದ ದಿನೇಶ ಗುಂಡೂರಾವ್ ಅವರು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರೊಂದಿಗೆ ಜನವರಿ 22ರಂದು ರಾಯಚೂರ ಗ್ರಾಮೀಣ ಪ್ರದೇಶದಲ್ಲಿ ಸಂಚರಿಸಿ ಮಾನ್ವಿ ತಾಲೂಕಿಗೆ ಭೇಟಿ ನೀಡಿದರು. ಪೂರ್ವ ನಿಗದಿಯಂತೆ ಬೆಳಗ್ಗೆಯೇ ಮಾನ್ವಿ ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ಆಸ್ಪತ್ರೆಯಲ್ಲಿರುವ ಸೌಲಭ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು.

ಇದೆ ವೇಳೆ ಸಚಿವರು, ಆಸ್ಪತ್ರೆಯ ವಾರ್ಡ್ಗಳಿಗೆ ಸಂಚರಿಸಿ ಬಾಣಂತಿಯರ ಆರೋಗ್ಯ ವಿಚಾರಿಸಿದರು.

ಪ್ರತಿ ದಿನ ನಿಮಗೆ ಸರಿಯಾದ ರೀತಿಯಲ್ಲಿ ಊಟ ನೀಡುತ್ತಾರೆಯೆ.? ಚಿಕಿತ್ಸೆ ಮತ್ತು ಔಷಧಿಯನ್ನು ಸರಿಯಾಗಿ ಕೊಡುತ್ತಾರಾ?



ಎಂದು ಕೇಳಿ ಬಾಣಂತಿಯರ ಯೋಗಕ್ಷೇಮ ವಿಚಾರಿಸಿದರು.

ಆಸ್ಪತ್ರೆಯಲ್ಲಿ ನಮಗೆ ಸರಿಯಾದ ಚಿಕಿತ್ಸೆ ದೊರೆಯುತ್ತಿದೆ. ಎಲ್ಲ ವೈದ್ಯರು ನಮಗೆ ಉತ್ತಮ ಚಿಕಿತ್ಸೆ ಕೊಡುತ್ತಾರೆ. ರೋಗಿಗಳಿಗೆ ಸ್ಪಂದಿಸುತ್ತಾರೆ ಎಂದು ಇದೆ ವೇಳೆ ಬಾಣಂತಿಯರು ಸಚಿವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಆಸ್ಪತ್ರೆಯಲ್ಲಿನ ಅಲ್ಟ್ರಾ ಸೌಂಡ್ ಸೇರಿದಂತೆ ಇತರೆ ಉಪಕರಣಗಳನ್ನು ಪರಿಶೀಲಿಸಿದ ನಂತರ ಸಚಿವರು ಆಪರೇಷನ್ ಕೇರ್ ವಾರ್ಡ್ ನಲ್ಲಿರುವ ರೋಗಿಗಳಿಗೆ ಹಣ್ಣು ನೀಡಿ ಅವರ ಆರೋಗ್ಯದ ಬಗ್ಗೆ ವಿಚಾರಿಸಿದರು. ಸದ್ಯ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಸಂಖ್ಯೆ, ಲಭ್ಯವಿರುವ ಹಾಸಿಗೆಗಳ ಸಂಖ್ಯೆ ಹಾಗೂ ವೈದ್ಯರ ಲಭ್ಯತೆ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಯ ಸಂಖ್ಯೆಯ ಬಗ್ಗೆ ಸ್ಥಳದಲ್ಲಿದ್ದ ವೈದ್ಯಾಧಿಕಾರಿಗಳಿಂದ ಸಚಿವರು ಮಾಹಿತಿ ಪಡೆದುಕೊಂಡರು.

ರಾತ್ರಿ ವೇಳೆಯಲ್ಲೂ ಚಿಕಿತ್ಸೆ ನೀಡಿ: ಯಾವುದೇ ಗ್ರಾಮದಿಂದ ರಾತ್ರಿ ವೇಳೆಯಲ್ಲಿ ತುರ್ತು ಚಿಕಿತ್ಸೆ ಕೋರಿ ಬರುವ ಬಾಣಂತಿಯರಿಗೆ ವೈದ್ಯರು ಮತ್ತು ಆಸ್ಪತ್ರೆಯಲ್ಲಿನ ಸಿಬ್ಬಂದಿ ತಕ್ಷಣವೇ ಸ್ಪಂದನೆ ನೀಡಬೇಕು. ಯಾವುದೇ ನೆಪ ಹೇಳದೇ ಬೇರೆಡೆ ಕಳುಹಿಸಬಾರದು.

ಪ್ರಥಮ ಹಂತದ ಚಿಕಿತ್ಸೆಗೆ ಕ್ರಮವಹಿಸಿ, ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದರೆ ಮಾತ್ರ ಬೇರೆಡೆ ಕಳುಹಿಸಲು ಕ್ರಮವಹಿಸಬೇಕು ಎಂದು ಸಚಿವರು ಇದೆ ವೇಳೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಸಚಿವರಿಗೆ ಮನವಿ: ನರ್ಸ್ ಸಿಬ್ಬಂದಿಯ ವೇತನ ಹೆಚ್ಚಳ ಮಾಡುವಂತೆ ಇದೆ ವೇಳೆ ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಈ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ವೇತನ ಹೆಚ್ಚಳಕ್ಕೆ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

ಖಾಲಿ ಹುದ್ದೆಗಳ ಶೀಘ್ರ ಭರ್ತಿಗೆ ಕ್ರಮ: ಮಾನ್ವಿ ಸೇರಿದಂತೆ ಕೆಲವು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ಕೊರತೆ ಇರುವುದು ಗಮನಕ್ಕೆ ಬಂದಿದೆ. ಶ್ರೀಘದಲ್ಲಿ ಭರ್ತಿಗೆ ಕ್ರಮವಹಿಸಲಾಗುವುದು. ಆಸ್ಪತ್ರೆಯಲ್ಲಿ ತುರ್ತ ಚಿಕಿತ್ಸೆಗೆ ಅನುಕೂಲವಾಗುವಂತೆ ಅವಶ್ಯಕತೆ ಇರುವ ಕಡೆಗಳಲ್ಲಿ ನಿಯಮಾನುಸಾರ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ಪಡೆಯಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಸುದ್ದಿಗಾರರೊಂದಿಗೆ ಮಾತನಾಡುವ ವೇಳೆ ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಹಂಪಯ್ಯ ನಾಯಕ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ ಸಿಇಓ ರಾಹುಲ್ ತುಕಾರಾಮ ಪಾಂಡ್ವೆ, ಮಾನ್ವಿ ಪುರಸಭೆ ಅಧ್ಯಕ್ಷೆ ಲಕ್ಷ್ಮೀ ವೆಂಕಟೇಶ್, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸುರೇಂದ್ರಬಾಬು, ಜಿಲ್ಲಾ ಮಲೇರಿಯಾ ಅಧಿಕಾರಿ ಡಾ. ಚಂದ್ರಶೇಖರ್, ತಾಲೂಕು ಆರೋಗ್ಯಾಧಿಕಾರಿ

ಡಾ. ಶರಣಬಸವರಾಜ್, ಉಪ ಆರೋಗ್ಯಾಧಿಕಾರಿ ಅರವಿಂದ್ ಮತ್ತು ಸಹಾಯಕ ಆರೋಗ್ಯ ಅಧಿಕಾರಿ ಶರಣಪ್ಪ ಇದ್ದರು.

# ಕವಿ ಸಮ್ಮೇಳನದಲ್ಲಿ ಸಮಾಜ ಸೇವಕಿ ಜ್ಯೋತಿ ಗೊಂಡಬಾಳಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.22:ಗಂಗಾವತಿಯಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯಿಂದ ಈಚೆಗೆ ನಡೆದ ರಾಜ್ಯಮಟ್ಟದ 4ನೇ ಕವಿ ಕಾವ್ಯ ಸಮ್ಮೇಳನದಲ್ಲಿ ಸಮಾಜ ಸೇವಕಿ ಜ್ಯೋತಿ ಎಂ. ಗೊಂಡಬಾಳ ಅವರನ್ನು ಹಿರಿಯ ಸಾಹಿತಿ, ಪತ್ರಕರ್ತ ರಂಜಾನ್ ದರ್ಗಾ ಅವರು ಸನ್ಮಾನಿಸಿದರು.

ಸ್ವಾಭಿಮಾನಿ ಮಹಿಳಾ ಸಂಚಲನ ಸಮಿತಿ ಅಧ್ಯಕ್ಷೆ, ಪ್ರಗತಿಪರ ಚಳುವಳಿಯ ಮುಂಚೂಣಿ ಮಹಿಳೆಯಾಗಿರುವ ಜ್ಯೋತಿ ಗೊಂಡಬಾಳ ಜಿಲ್ಲೆಯ ಅನೇಕ ಜ್ವಲಂತ ಸಮಸ್ಯೆಗಳಿಗೆ ಧ್ವನಿಯಾಗಿ ಹಲವು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ, ಹತ್ತಾರು ವರ್ಷ ಪಂಚಾಯತ್ ರಾಜ್ಯ ಸದಸ್ಯರಿಗೆ, ಅಧಿಕಾರಿಗಳಿಗೆ ಜಲನಿರ್ಮಲ, ಶೌಚಾಲಯ ಬಳಕೆ, ನೈರ್ಮಲ್ಯ, ಪಂಚಾಯತ್ ರಾಜ್ ಕಾಯ್ದೆ, ಆರೋಗ್ಯ ಇಲಾಖೆಯ ಯೋಜನೆಗಳ ಕುರಿತು ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ತರಬೇತಿ ಸಂಸ್ಥೆಯಿಂದ ತರಬೇತುದಾರರಾಗಿ ಸೇವೆ ಸಲ್ಲಿಸಿದ್ದಾರೆ, ಅವರ ಸಾಧನೆಯನ್ನು ಪರಿಗಣಿಸಿ ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರು, ಹಿರಿಯ ಭಾಷಾಂತರ ಸಾಹಿತಿ ಡಾ. ಜಾಜಿ ದೇವೇಂದ್ರಪ್ಪ, ಸಾಹಿತಿ, ಚಿಂತಕಿ ಮತ್ತು ಸಮ್ಮೇಳನದ ಮುಖ್ಯ ಸಂಚಾಲಕಿ ಶೈಲಜಾ ಹಿರೇಮಠ, ಪತ್ರಕರ್ತ ಮಂಜುನಾಥ ಜಿ. ಗೊಂಡಬಾಳ ಇತರರು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.